ಸಂಪುಟ : Volume 13 ಸಂಚಿಕೆ : Issue 227 ಪುಟಗಳು : Pages 08 ಶನಿವಾರ 25 ಅಕ್ಟೋಬರ್ 2025 ₹2 PRGINO.120927(RNINO:KARKAN/2011/48371) BDR/054/2026-20274 www.mallammanudi.in mallammanudi@gmail.com 9448604450

ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಬಳ್ಳಾರಿ | ವಿಜಯನಗರ | ಕೊಪ್ಪಳ & ಬಾಗಲಕೋಟೆ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**
ನಿಮ್ಮ ಹಾದಿಯಲ್ಲಿ ಮುಳ್ಳು ಚೆಲ್ಲಿದವರ ಹಾದಿಯಲ್ಲಿ ಹೂ ಚೆಲ್ಲಿ
–ಸ್ವಾಮಿ ವಿವೇಕಾನಂದ.

2. ವ್ಯಕ್ತಿ ಕಾಣೆ: ಪತ್ತೆಗಾಗಿ ಮನವಿ | 8 ಅಕ್ರಮ ಸೇಂದಿ ಸಾಗಣೆ: ವ್ಯಕ್ತಿ ಬಂಧನ | 4 ಜಾತಿ ನಿಂದನೆ ಹಲ್ಲೆ ಪ್ರಕರಣ ದಾಖಲು

# 27 ಸಾ. ಕೋಟಿ ಹೂಡಿಕೆ

## 13 ಯೋಜನೆಗಳಿಂದ 8,000 ಉದ್ಯೋಗ ಸೃಷ್ಟಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.24:ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಶುಕ್ರವಾರ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆದ ರಾಜ್ಯ ಉನ್ನತ ಮಟ್ಟದ ಯೋಜನಾ ಮಂಜೂರಾತಿ ಸಮಿತಿಯ ಸಭೆಯಲ್ಲಿ ಒಟ್ಟು 27,607.26 ಕೋಟಿ ರೂಪಾಯಿ ಬಂಡವಾಳ ಹೂಡಿಕೆಗೆ ಒಪ್ಪಿಗೆ ನೀಡಲಾಗಿದೆ.



ಇದರಲ್ಲಿ 11 ಹೊಸ ಕೈಗಾರಿಕಾ ಯೋಜನೆಗಳು ಮತ್ತು 2 ಹೆಚ್ಚುವರಿ ಹೂಡಿಕೆ ಪ್ರಸ್ತಾವನೆಗಳು ಸೇರಿವೆ ಎಂದು ಸಭೆ ಬಳಿಕ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ್ ಅವರು ಸುದ್ದಿಗಾರರಿಗೆ ತಿಳಿಸಿದ್ದಾರೆ.

ಒಟ್ಟು ಈ 13 ಯೋಜನೆಗಳಿಂದ 8,704 ನೇರ ಉದ್ಯೋಗಗಳು ಸೃಷ್ಟಿಯಾಗಲಿವೆ ಅವರು ಹೇಳಿದ್ದಾರೆ.

11 ಹೊಸ ಹೂಡಿಕೆ ಯೋಜನೆಗಳ ಪೈಕಿ ತೇಜಸ್ ನೆಟ್ವರ್ಕ್ಸ್ 542.19 ಕೋಟಿ ರೂ, ವಾಯು ಅಸೆಟ್ಸ್ 1,251 ಕೋಟಿ ರೂ, ಜಿಂದಾಲ್ ಸ್ಟೀಲ್ಸ್ 1,300.57 ಕೋಟಿ ರೂ, ಜಿಂದಾಲ್ ಎಲೆಕ್ಟ್ರಿಕಲ್ ಸ್ಟೀಲ್ 7,102 ಕೋಟಿ ರೂ, ಗ್ರಾಸಿಂ ಇಂಡಸ್ಟ್ರೀಸ್ 1,386 ಕೋಟಿ ರೂ, ಎಸ್ಎಫ್ಎಕ್ಸ್ ಇಂಡಿಯಾ 9,298 ಕೋಟಿ ರೂ, ಸ್ನೀಡರ್ ಎಲೆಕ್ಟ್ರಿಕ್ ಐಟಿ ಬಿಝಿನೆಸ್, ಎಚ್ ಎಸ್ ಎಸ್ ಟೆಕ್ನೆಲ್ಸ್ 740 ಕೋಟಿ ರೂ, ಸ್ನೈಡರ್ ಎಲೆಕ್ಟ್ರಿಕ್ ಬಿಸಿನೆಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ 1,520.75 ಕೋಟಿ ರೂ, ಕ್ಯೂಪಿಐಎಐ ಇಂಡಿಯಾ 1,136 ಕೋಟಿ ರೂ, ಟೊಯೋಟಾ ಇಂಡಸ್ಟ್ರೀಸ್ ಎಂಜಿನ್ ಇಂಡಿಯಾ ಲಿಮಿಟೆಡ್ 1,330 ಕೋಟಿ ರೂ ಮತ್ತು ರಿಲಯನ್ಸ್ ಕನ್ಸೂಮರ್ ಪ್ರಾಡಕ್ಟ್ಸ್ 1,622 ಕೋಟಿ ರೂ. ಹೂಡಿಕೆ ಮಾಡಲಿವೆ.

ಉಳಿದಂತೆ, ಎಂಬೆಸಿ ಇಂಡಸ್ಟ್ರಿಯಲ್ ಪಾರ್ಕ್ ಮತ್ತು ಬಾಲಾಜಿ ವೇಫರ್ಸ್ ಕಂಪನಿಗಳು ಕ್ರಮವಾಗಿ 80 ಮತ್ತು 298.75 ಕೋಟಿ ರೂ. ಹೆಚ್ಚುವರಿ ಬಂಡವಾಳ ತೊಡಗಿಸಲಿವೆ ಎಂದು ಅವರು ಹೇಳಿದ್ದಾರೆ.

ವಿಧಾನಸೌಧದಲ್ಲಿ ನಡೆದ ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್, ಇಂಧನ ಸಚಿವ ಕೆ ಜೆ ಜಾರ್ಜ್, ಕಾನೂನು ಸಚಿವ ಎಚ್.ಕೆ.ಪಾಟೀಲ್, ಐಟಿ ಸಚಿವ ಪ್ರಿಯಾಂಕ್ ಖರ್ಗೆ, ಉನ್ನತ ಶಿಕ್ಷಣ ಸಚಿವ ಎಂ ಸಿ ಸುಧಾಕರ್, ಕಾರ್ಮಿಕ ಸಚಿವ ಸಂತೋಷ್ ಲಾಡ್ ಉಪಸ್ಥಿತರಿದ್ದರು.

## ವಿಶೇಷ ವರದಿ

ಹುಮನಾಬಾದ್:ಹುಮನಾಬಾದ್ ಪುರಸಭೆ ವ್ಯಾಪ್ತಿಯ ವಿವಿಧ ಲೇಔಟ್‌ಗಳಲ್ಲಿ ಗಾರ್ಡನ್ ಹಾಗೂ ಸಾರ್ವಜನಿಕ ಉಪಯೋಗದ ಜಾಗಗಳನ್ನು ಕೆಲವು ಖಾಸಗಿ ವ್ಯಕ್ತಿಗಳು ತಮ್ಮ ಹೆಸರಿಗೆ ಮಾಡಿಕೊಂಡಿರುವ ಕುರಿತು ಸ್ಥಳೀಯರು ಗಂಭೀರ ಆರೋಪ ಮಾಡಿದ್ದಾರೆ. ಸಾರ್ವಜನಿಕ ಆಸ್ತಿಯನ್ನು ಕಬಳಿಸಿರುವ ಪ್ರಕರಣದ ಕುರಿತು ನಾಗರಿಕರು ಅಧಿಕಾರಿಗಳಿಂದ ತನಿಖೆ ನಡೆಸುವಂತೆ ಆಗ್ರಹಿಸಿದ್ದಾರೆ.

ನಗರದ ನಾಗರಿಕರ ಮಾತಿನ ಪ್ರಕಾರ, ಲೇಔಟ್ ಯೋಜನೆ ಪ್ರಕಾರ ಗಾರ್ಡನ್‌ಗಳಿಗೆ ಮೀಸಲಾದ ಜಾಗಗಳ ಮೇಲೆ ಖಾಸಗಿ ನಂಬರು ಅಳವಡಿಸಿ ಮಾರಾಟದ ಪ್ರಯತ್ನ ನಡೆಯುತ್ತಿದೆ. ಪುರಸಭೆ ಮತ್ತು ತಾಲ್ಲೂಕು ಆಡಳಿತ ತಕ್ಷಣ ಸ್ಥಳ ಪರಿಶೀಲನೆ ನಡೆಸಿ, ಕಾನೂನು ಕ್ರಮಕ್ಕೆ ಗೊಳ್ಳಬೇಕು ಎಂಬುದು ಜನರ ಒತ್ತಾಯವಾಗಿದೆ.

## ಅ.27 ರಿಂದ 29 ರವರೆಗೆ ಬಾಗಲಕೋಟೆಯಲ್ಲಿ ಮೆಣಸಿನಕಾಯಿ ಬೆಳೆಯ ರಾಷ್ಟ್ರೀಯ ಸಮ್ಮೇಳನ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.24–ಬಾಗಲಕೋಟೆಯ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಅಕ್ಟೋಬರ 27 ರಿಂದ 29ರ ವರೆಗೆ ಮೂರು ದಿನಗಳ ಕಾಲ ಮೆಣಸಿನಕಾಯಿ ಬೆಳೆಯ ರಾಷ್ಟ್ರೀಯ ಸಮ್ಮೇಳನ ಹಮ್ಮಿಕೊಳ್ಳಲಾಗಿದೆ ಎಂದು ತೋಟಗಾರಿಕೆ ವಿವಿಯ ಕುಲಪತಿ ಡಾ.ವಿಷ್ಣುವರ್ಧನ ಹೇಳಿದರು.

ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ನಿರ್ದೇಶನಾಲಯದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಸಮ್ಮೇಳನದ ಮಾಹಿತಿ ನೀಡಿದ ಅವರು, ಅಕ್ಟೋಬರ 27 ರಂದು ಮೆಣಸಿನಕಾಯಿ ಬೆಳೆಯ ರಾಷ್ಟ್ರೀಯ ಸಮ್ಮೇಳನಕ್ಕೆ ಕರ್ನಾಟಕ ಕೃಷಿ ಬೆಲೆ ಆಯೋಗದ ನಿವೃತ್ತ ಅಧ್ಯಕ್ಷ ಡಾ.ಅಶೋಕ ದಳವಾಯಿ ಚಾಲನೆ ನೀಡಲಿದ್ದಾರೆ ಎಂದರು. ನವದೆಹಲಿಯ ಐಸಿಎಸ್ ಆರ್‌ನ ಮಾಜಿ ಡಿಡಿಜಿ ಡಾ.ಎನ್. ಕೆ.ಕೃಷ್ಣಕುಮಾರ, ಔರಂಗಾಬಾದನ ಎಟಿಪಿಬಿಆರ್ ನಿರ್ದೇಶಕ ಡಾ.ಸುರಿಂದರ್ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ತೋಟಗಾರಿಕೆ ವಿವಿಯ ಕುಲಪತಿ ಡಾ.ವಿಷ್ಣುವರ್ಧನ ಅಧ್ಯಕ್ಷತೆ ವಹಿಸಲಿದ್ದಾರೆ. ಈ ಸಂದರ್ಭದಲ್ಲಿ ಸ್ಮರಣ ಸಂಚಿಕೆಯನ್ನು ಸಹ ಬಿಡುಗಡೆ ಮಾಡಲಾಗುತ್ತಿದೆ ಎಂದು

ಅವರು ತಿಳಿಸಿದರು. ಮುಖ್ಯವಾಗಿ ರಾಷ್ಟ್ರಮಟ್ಟದಲ್ಲಿ ಮೆಣಸಿನಕಾಯಿ ಸಂಶೋಧನೆ, ಉತ್ಪಾದನೆ, ಕೊಯ್ಲೋತ್ತರ ನಿರ್ವಹಣೆ ಮತ್ತು ಮಾರುಕಟ್ಟೆಗೆ

2ನೇ ಪುಟನೋಡಿ

## ಮತಗಳವು: ಹೊಣೆಗಾರರನ್ನು ಜೈಲಿಗಟ್ಟುವುದು ಖಚಿತ: ಪ್ರಿಯಾಂಕ್ ಖರ್ಗೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಅ.24:ವೋಟ್ ಚೋರಿ ಪ್ರಕರಣಕ್ಕೆ ಹೊಸ ತಿರುವು ಪಡೆದಿದ್ದು, ಮತದಾರರ ಪಟ್ಟಿಯಿಂದ ಮತದಾರರ ಹೆಸರು ಅಳಿಸಿಹಾಕಲು ಪ್ರತಿಯೊಂದಕ್ಕೆ 80 ರು ಪಾವತಿಸಲಾಗಿದೆ ಎನ್ನುವ ಅಂಶ ಎಸ್‌ಐಟಿ ತನಿಖೆಯಿಂದ ತಿಳಿದು ಬಂದಿದೆ. ಇದು ಮತಗಳವು ವಿಚಾರದಲ್ಲಿ ನಾವು ಇಷ್ಟು ದಿನ ಹೇಳುತ್ತಿದ್ದ ವಿಷಯ ಎಸ್‌ಐಟಿ ತನಿಖೆಯಿಂದ ದೃಢಪಟ್ಟಿದೆ' ಎಂದು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಎಲ್ಲಾ ತನಿಖೆಗಳು ಈಗ ಬಿಜೆಪಿ ನಾಯಕರು ಮತ್ತು ಅವರ ಸಹಚರರ ಅಕ್ರಮವನ್ನು ತೋರಿಸುತ್ತವೆ. ಬಿಜೆಪಿಯ ವೋಟ್ ಚೋರಿಯ ಪ್ರತಿಯೊಂದು ಕೊಳಕು ತಂತ್ರ ಮತ್ತು ಕಾರ್ಯವೈಖರಿಯನ್ನು ಒಂದೊಂದಾಗಿ ಬಹಿರಂಗಪಡಿಸುತ್ತಿವೆ. ಈ ವಿಷಯದಲ್ಲಿ ಭಾಗಿಯಾಗಿರುವ ಪ್ರತಿಯೊಬ್ಬರನ್ನು ಹೊಣೆಗಾರರನ್ನಾಗಿ ಮಾಡಿ ಜೈಲಿಗೆ ಹಾಕಲಾಗುವುದು' ಎಂದು ಸಾಮಾಜಿಕ ಜಾಲತಾಣ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದ್ದಾರೆ.

2023ರ ವಿಧಾನಸಭೆ ಚುನಾವಣೆಗೆ ಮುನ್ನ, ಆಳಂದ ಮತ ಕ್ಷೇತ್ರದಲ್ಲಿ ಹಣ ನೀಡುವ ಮೂಲಕ ಸುಮಾರು 6,000ಕ್ಕೂ ಅಧಿಕ ಮತದಾರರನ್ನು ಪಟ್ಟಿಯಿಂದ ತೆಗೆದು ಹಾಕಲು ಯತ್ನಿಸಲಾಗಿತ್ತು. ಕಲಬುರಗಿಯ ಪೂರ್ಣ ಪ್ರಮಾಣದ ದತ್ತಾಂಶ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿದ್ದ ನಿರ್ವಾಹಕರು ಮತದಾರರ ಹೆಸರುಗಳನ್ನು ವ್ಯವಸ್ಥಿತವಾಗಿ ಅಳಿಸಿಹಾಕುವ ಮೂಲಕ ಪ್ರಜಾಪ್ರಭುತ್ವ ಪ್ರಕ್ರಿಯೆಯನ್ನು

2ನೇ ಪುಟನೋಡಿ

## ಮಹಿಳಾ ಸಬಲೀಕರಣಕ್ಕೆ ಎಲ್ಲರ ಸಹಕಾರ ಅಗತ್ಯ :ಪ್ರೇಮಾ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಇಂದಿನ ನಾಗರಿಕ ಸಮಾಜದಲ್ಲಿ ಮಹಿಳೆಯರು ಸಬಲೀಕರಣರಾಗಲು ಎಲ್ಲರ ಸಹಕಾರದ ಅಗತ್ಯವಿದೆ ಎಂದು ರಾಜರಾಜೇಶ್ವರಿ ದೇವಸ್ಥಾನ ಟ್ರಸ್ಟ್ ಅಧ್ಯಕ್ಷೆ ಪ್ರೇಮಾ ಆರ್. ಪಾಟೀಲ್ ಹೇಳಿದರು.

ನಗರದ ಟೀಚರ್ಸ್ ಕಾಲೋನಿಯ ಸಿದ್ಧಾರ್ಥ ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಭಾರತೀಯ ಬೌದ್ಧ ಮಹಾಸಭೆ ವತಿಯಿಂದ ಶು

2ನೇ ಪುಟನೋಡಿ

## ಚಿತ್ತಾಪುರದಲ್ಲಿ ಆರ್‌ಎಸ್‌ಎಸ್ ಪಥಸಂಚಲನ ವಿವಾದ: ಅ.28ಕ್ಕೆ ಶಾಂತಿ ಸಭೆ ನಡೆಸಲು ಕೋರ್ಟ್ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ.24:ರಾಜ್ಯದಲ್ಲಿ ತೀವ್ರ ಕುತೂಹಲ ಕೆರಳಿಸಿದ ಚಿತ್ತಾಪುರ ಆರ್‌ಎಸ್‌ಎಸ್ ಪಥಸಂಚಲನ ಕುರಿತು, ಕಲಬುರಗಿಯ ಹೈಕೋರ್ಟ್ ಪೀಠ ಮಹತ್ವದ ಸೂಚನೆ ನೀಡಿದೆ. ಅಕ್ಟೋಬರ್ 28ರಂದು ಎಲ್ಲಾ 8 ಸಂಘಟನೆಗಳ ಜೊತೆಗೆ ಶಾಂತಿ ಸಭೆ ನಡೆಸಿ ಅಂತಿಮ ವರದಿ ಸಲ್ಲಿಸಲು ಜಿಲ್ಲಾಡಳಿತಕ್ಕೆ ಸೂಚನೆ ನೀಡಿದೆ. ಅಲ್ಲದೇ ಮುಂದಿನ ವಿಚಾರಣೆಯನ್ನು ಅ.30ಕ್ಕೆ ಮುಂದೂಡಿದೆ. ಆರ್‌ಎಸ್‌ಎಸ್ ನ.2ರಂದು ಪಥಸಂಚಲನ ನಡೆಸಲು ಅನುಮತಿ ಕೋರಿ ಅರ್ಜಿ ಸಲ್ಲಿಸಿದರೆ, ಮತ್ತೊಂದೆಡೆ 5 ಸಂಘಟನೆಗಳು ಅಂದೇ ನಮಗೂ ಅವಕಾಶ ಕೊಡಿ ಎಂದು ಅರ್ಜಿ ಹಾಕಿದ್ದವು. ಈ ಮಧ್ಯೆ ಎಲ್ಲಾ ಅರ್ಜಿಗಳ ವಿಚಾರಣೆ ಇಂದು ಕಲಬುರಗಿಯ ಹೈಕೋರ್ಟ್ ನ್ಯಾಯಮೂರ್ತಿ ಎಂ.ಜಿ.ಎಸ್. ಕಮಲ್ ಅವರ ಏಕಸದಸ್ಯ ಪೀಠದಲ್ಲಿ

2ನೇ ಪುಟನೋಡಿ


## ಬಸ್‌ಗೆ ಬೆಂಕಿ 20 ಮಂದಿ ಸಜೀವ ದಹನ

ಮಲ್ಲಮ್ಮ ನುಡಿ ವಾರ್ತೆ

ಕರ್ನೂಲ್,ಅ.24–ಹೈದರಾಬಾದ್‌ನಿಂದ ಬೆಂಗಳೂರಿಗೆ ತೆರಳುತ್ತಿದ್ದ ಕಾವೇರಿ ಟ್ರಾವೆಲ್ಸ್‌ಗೆ ಸೇರಿದ ಐಷಾರಾಮಿ ವೋಲ್ವೋ ಬಸ್ ಇಂದು ನಸುಕಿನಲ್ಲಿ ಜಿಲ್ಲೆಯಲ್ಲಿ ಬೆಂಕಿಗಾಹುತಿಯಾಗಿ 20 ಮಂದಿ ಸಜೀವ ದಹನಗೊಂಡು ಹಲವರು ಗಾಯಗೊಂಡಿದ್ದಾರೆ.

ಕರ್ನೂಲ್ ಉಪನಗರ ಚಿನ್ನಟೇಕೂರಿನಲ್ಲಿ ರಾಷ್ಟ್ರೀಯ ಹೆದ್ದಾರಿ 44 ರಲ್ಲಿ ವೇಮುರಿ ಕಾವೇರಿ ಟ್ರಾವೆಲ್ಸ್‌ಗೆ ಸೇರಿದ ವೋಲ್ವೋ ಬಸ್ ಬೆಂಕಿಗಾಹುತಿಯಾಗಿ ಬಸ್‌ನಲ್ಲಿದ್ದ 41 ಮಂದಿಯಲ್ಲಿ, 20ಕ್ಕೂ ಹೆಚ್ಚು ಮಂದಿ ಸಜೀವ ದಹನವಾದರೆ, 19 ಮಂದಿ

2ನೇ ಪುಟನೋಡಿ



## ಯುವಜನತೆ ಸ್ವಾಮಿ ವಿವೇಕಾನಂದರ ಸಂದೇಶದ ಪ್ರೇರಣೆ ಪಡೆದು ದೇಶದ ಉನ್ನತಿಗೆ ಕೆಲಸ ಮಾಡಲಿ : ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್

ಮಲ್ಲಮ್ಮ ನುಡಿ ವಾರ್ತೆ

ಧಾರವಾಡ ಅ24:ಭಾರತವು ಆಧ್ಯಾತ್ಮಿಕವಾಗಿ ಜಾಗೃತಗೊಂಡು, ಸಾಂಸ್ಕೃತಿಕವಾಗಿ ಬಲಿಷ್ಠ ಮತ್ತು ಆಧುನಿಕ ಪ್ರಗತಿಯಿಂದ ಸಮೃದ್ಧವಾಗಬೇಕೆಂದು ಸ್ವಾಮಿ ವಿವೇಕಾನಂದರು ಬಯಸಿದ್ದರು. ಯುವಜನತೆ ಸ್ವಾಮಿ ವಿವೇಕಾನಂದರ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ದೇಶದ ಅಭಿವೃದ್ಧಿಯಲ್ಲಿ ಪಾಲ್ಗೊಳ್ಳಬೇಕು ಎಂದು ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಹೇಳಿದರು.

ಇಂದು ಧಾರವಾಡದ ವೀರಶೈವ ಲಿಂಗಾಯತ ಭವನದಲ್ಲಿ ಆಯೋಜಿಸಿದ್ದ ಕರ್ನಾಟಕ ರಾಮಕೃಷ್ಣ–ವಿವೇಕಾನಂದ ಭಾವಪ್ರಚಾರ ಪರಿಷತ್ತಿನ 11ನೇ ವಾರ್ಷಿಕ ಸಮ್ಮೇಳನವನ್ನು




ಉದ್ಘಾಟಿಸಿ ಮಾತನಾಡಿದ ಅವರು ಸ್ವಾಮಿ ವಿವೇಕಾನಂದರಂತೆ ಪ್ರತಿಯೊಬ್ಬ ಯುವಕರು ಆತ್ಮವಿಶ್ವಾಸ, ತ್ಯಾಗ ಮತ್ತು ಸೇವಾ ಮನೋಭಾವವನ್ನು ಬೆಳಸಿಕೊಳ್ಳಬೇಕು ಮತ್ತು ಸಕಾರಾತ್ಮಕ ಕಾರ್ಯಗಳು,

2ನೇ ಪುಟನೋಡಿ

## ಪಿಡಿಪಿಎಸ್ ಅಡಿ ಈರುಳ್ಳಿ ಖರೀದಿ ಯತ್ನ: ಸಚಿವ ಶಿವಾನಂದ ಪಾಟೀಲ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಅ24 :ಈರುಳ್ಳಿ ಬೆಲೆ ಕುಸಿತ ಹಿನ್ನೆಲೆಯಲ್ಲಿ ಪಿಡಿಪಿಎಸ್ (ಪ್ರೈಸ್ ಡಿಫಿಷಿಯನ್ಸಿ ಪ್ರೊಕ್ಯೂರ್‌ಮೆಂಟ್ ಸ್ಕೀಂ) ಅಡಿಯಲ್ಲಿ ಖರೀದಿಸುವ ಪ್ರಯತ್ನ ನಡೆದಿದೆ ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ತಿಳಿಸಿದ್ದಾರೆ.

ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ಸುರಿದ ಭಾರೀ ಮಳೆಗೆ ಕಟಾವಿಗೆ ಬಂದಿರುವ ಈರುಳ್ಳಿ ಅಪಾರ ಪ್ರಮಾಣದಲ್ಲಿ ಹಾನಿಯಾಗಿದೆ. ಕಳೆದ ಸಾಲಿನ ಸರಾಸರಿ ಈರುಳ್ಳಿ ಮಾರುಕಟ್ಟೆ ಬೆಲೆಗೆ ಹೋಲಿಕೆ ಮಾಡಿದರೆ ಪ್ರಸಕ್ತ ಸಾಲಿನಲ್ಲಿ ಮಾರಾಟ ದರ ಉತ್ಪಾದನಾ ವೆಚ್ಚಕ್ಕಿಂತ ಕಡಿಮೆ ಇದೆ ಎಂದು ಅಧಿಕಾರಿಗಳು ವರದಿ ಮಾಡಿದ್ದಾರೆ.

ಈ ಹಿನ್ನೆಲೆಯಲ್ಲಿ ಪಿಡಿಪಿಎಸ್ ಅಡಿಯಲ್ಲಿ ಈರುಳ್ಳಿ ಖರೀದಿ ಮಾಡಲು ಅನುಮತಿ ನೀಡಬೇಕು ಎಂದು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುತ್ತಿದೆ ಎಂದು ಹೇಳಿಕೆಯಲ್ಲಿ ತಿಳಿಸಿದ್ದಾರೆ.

ರಾಜ್ಯದಲ್ಲಿ ಮುಂಗಾರು ಮತ್ತು ಹಿಂಗಾರು ಸೇರಿ ಒಟ್ಟು 2.05 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಈರುಳ್ಳಿ ಬೆಳೆಯಲಾಗುತ್ತಿದ್ದು, ವಾರ್ಷಿಕ ಉತ್ಪನ್ನ 27.00 ಲಕ್ಷ ಮೆಟ್ರಿಕ್ ಟನ್‌ಗಳಾಗಿದೆ. ಪ್ರಮುಖವಾಗಿ ವಿಜಯಪುರ, ಚಿತ್ರದುರ್ಗ, ಬಾಗಲಕೋಟೆ, ವಿಜಯನಗರ, ಬೆಳಗಾವಿ, ಧಾರವಾಡ,

2ನೇ ಪುಟನೋಡಿ

**ಮಹಿಳಾ ವಿಶ್ವಕಪ್: ಟೂರ್ನಿಯಲ್ಲಿ ಭಾರತ ಮಹಿಳಾ ಕ್ರಿಕೇಟ್ ತಂಡ ನಾಲ್ಕನೇ ತಂಡವಾಗಿ ಸೆಮಿಫೈನಲ್‌ಗೆ**

# ಒಂದನೇ ಪುಟದಿಂದ

## ಸಹಕಾರ ಅಗತ್ಯ ಪ್ರೇಮಾ ಪಾಟೀಲ

ಕ್ರವಾರ ನಡೆದ 69ನೇ ಧರ್ಮ ಚಕ್ರ ಪ್ರವರ್ತನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.ಪ್ರತಿಯೊಬ್ಬ ಪುರುಷನ ಏಳ್ಗೆಗೆ ಮಹಿಳೆ ತಾಯಿ, ಸಹೋದರಿ, ಮಡದಿ ರೂಪದಲ್ಲಿ ಸಹಕಾರಿಯಾಗಿದ್ದಾಳೆ. ಮಹಿಳೆಯರ ಸರ್ವತೋಮುಖ ಅಭಿವದ್ಧಿಗೆ ಪುರುಷರು ಸಹಕರಿಸಬೇಕು. ಸಂಘಟನೆಗಳ ಬೆಳವಣಿಗೆಗೆ ಪಾಟೀಲ್ ಪರಿವಾರದಿಂದ ಸಹಕರಿಸಲಾಗುವುದು ಎಂದರು.ಸಮುದಾಯ ಸಂಘಟನಾ ಅಧಿಕಾರಿ ಮೀನಾಕುಮಾರಿ ಬೋರಳಕರ್ ಮಾತನಾಡಿದರು.ಈ ಸಂದರ್ಭದಲ್ಲಿ ಭಂತೆನಾಗರತ್ನ, ವಿದ್ಯಾ ಪಾಟೀಲ್, ಮನೋಹರಮೋರೆ, ವೈಶಾಲಿಮೋರೆ, ಜೈಶ್ರೀಸಾಗರ, ಶಾಂತಬಾಯಿ ಸೂರ್ಯವಂಶಿ, ಶಿವಕಾಂತ ದಂಡೆ, ಸುನಿತಾ ಸಂಗಮ್, ಕಸ್ತೂರಬಾಯಿ ಪರಸನೋರ್, ಹಣಮಂತ ಕಾಂಬಳೆ, ಕೃಷ್ಣಪ್ಪ ಹಾಲಗೋರ್ಟಾ, ಶರಣಪ್ಪ ದಂತೆ, ವಿದ್ಯಾಸಾಗರ ಸಾಧುನೂರ್, ಶಂಕರಪ್ರಿಯಾ, ಪ್ರಶಾಂತ ದೊಡ್ಡಿ, ರಘುನಾಥರಾವ ಜಾಬನೋರ್ ಸೇರಿ ಅನೇಕರಿದ್ದರು.

## ಬೆಳೆಯ ರಾಷ್ಟ್ರೀಯ ಸಮ್ಮೇಳನ

ಸಂಬಂಧಿಸಿದ ವಿವಿಧ ಆಯಾಮಗಳನ್ನು ಚರ್ಚಿಸಲು ರಾಷ್ಟ್ರೀಯ ಸಮ್ಮೇಳನ ಹಮ್ಮಿಕೊಳ್ಳಲಾಗಿದೆ. ಸಮ್ಮೇಳನದಲ್ಲಿ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಉತ್ಪಾದನಾಪ್ರವೃತ್ತಿಗಳು, ಹವಾಮಾನ ಬದಲಾವಣೆಯ ಪರಿಣಾಮಗಳು, ಮಾರುಕಟ್ಟೆ ಸ್ಥಿರತೆ ಮತ್ತು ಅಸ್ಥಿರತೆ ವಿಶ್ಲೇಷಣೆ ಹಾಗೂ ಉತ್ಪಾದನಾ ಸುಸ್ಥಿರತೆಯನ್ನು ಕಾಯ್ದುಕೊಳ್ಳುವ ತಂತ್ರಜ್ಞಾನಗಳ ಕುರಿತು ಚರ್ಚಿಸಲಾಗುತ್ತದೆ ಎಂದು ಡಾ.ವಿಷ್ಣುವರ್ಧನ ಹೇಳಿದರು. ಕಾರ್ಯಕ್ರಮದಲ್ಲಿ ಮೂರು ಪ್ರಮುಖ ಉಪನ್ಯಾಸಗಳು, 38 ಆಹ್ವಾನಿತ ಭಾಷಣಗಳು ಮತ್ತು 17 ಕೈಗಾರಿಕಾ ಪ್ರಸ್ತುತಿಗಳು ಮಂಡನೆಯಾಗಲಿವೆ. ಪ್ರಮುಖ ಭಾಷಣಕಾರರಾಗಿ ಇಂಟರ್ ನ್ಯಾಷನಲ್ ಸೀಡ್ ಫೆಡರೇಶನ್ ಹಾಗೂ ಐಎಚ್ ಎಸ್ ವ್ಯವಸ್ಥಾಪಕ ನಿರ್ದೇಶಕರು ಆರ್ಥರ್ ಸಂತೋಷ ಅತ್ತಾವರ್, ಧಾರವಾಡದ ಸರ್ಪನ್ ಹೈಬ್ರಿಡ್ ಸೀಡ್ಸ್ ಪ್ರೈ.ಲಿಮಿಟೆಡ್‌ನ ಸಂಸ್ಥಾಪಕ ಡಾ.ನಿಜಗುಣದೇವ ಗದ್ದಿಗಿಮಠ ಮತ್ತು ನಿವೃತ್ತ ತರಕಾರಿ ತಳಿ ಅಭಿವೃದ್ಧಿ ತಜ್ಞ ಡಾ.ಎ.ಎ.ದೇಶಪಾಂಡೆ ಭಾಗವಹಿಸಲಿದ್ದಾರೆ.ತೈವಾನ್, ಜಪಾನ್ ಮತ್ತು ತೋಟಗಾರಿಕೆ ವಿವಿಯ ವಿಜ್ಞಾನಿಗಳು ತಮ್ಮ ಅನುಭವಗಳನ್ನು ವ್ಯಕ್ತಪಡಿಸಲಿದ್ದಾರೆ ಎಂದು ತಿಳಿಸಿದರು.

ವಿವಿಯ ಸಂಶೋಧನ ನಿರ್ದೇಶಕ ಡಾ.ಬಿ.ಪಕ್ರುದ್ದಿನ ಮಾತನಾಡಿ, ಸಮ್ಮೇಳನ 7 ಪ್ರಮುಖ ವಿಷಯಾಧಾರಿತ ವಿಭಾಗಗಳನ್ನು ಒಳಗೊಂಡಿದೆ. ತಳಿ ವೈವಿಧ್ಯತೆಯ ಸಂಪತ್ತಿನ ನಿರ್ವಹಣೆ ಮತ್ತು ಉಪಯೋಗ, ಪಾರಂಪರಿಕ ಮತ್ತು ಆಣ್ವಿಕ ತಳಿ ಅಭಿವೃದ್ಧಿ ಮೂಲಕ ಉತ್ಪಾದಕತೆ ಮತ್ತು ಗುಣಮಟ್ಟದ ವೃದ್ಧಿ, ಜೈವಿಕ ಮತ್ತು ಅಜೈವಿಕ ಒತ್ತಡ ನಿರ್ವಹಣೆ, ನಿಖರ ಉತ್ಪಾದನಾ ತಾಂತ್ರಿಕತೆಗಳು ಮತ್ತು ಪೋಷಕಾಂಶಗಳ ಪರಿಣಾಮಕಾರಿ ಬಳಕೆ, ಕೊಯ್ಲೋತ್ತರ ನಿರ್ವಹಣೆ, ಆಹಾರ ಭದ್ರತೆ, ವ್ಯಾಪಾರ ಮತ್ತು ನೀತಿ ವಿಷಯಗಳು, ಕೈಗಾರಿಕೆ, ನವೋದ್ಯಮ ಹಾಗೂ ಉದ್ಯಮಶೀಲತೆ, ಮತ್ತು ವಿದ್ಯಾರ್ಥಿಗಳ ಸಂಶೋಧನಾ ಪ್ರಸ್ತುತಿಗಳು, ಚರ್ಚಾಗೋಷ್ಠಿಗಳು, ರೈತರ ಸಮಸ್ಯೆಗಳು ಮತ್ತು ತಂತ್ರಜ್ಞಾನ ವಿಸ್ತರಣಾ ಅಗತ್ಯತೆಗಳು, ಪ್ರಮುಖ ಜೈವಿಕ ಒತ್ತಡಗಳು ಮತ್ತು ಬೀಜ ಹಾಗೂ ರಪ್ತು ಕುರಿತಾದ ವಿಷಯಗಳನ್ನು ಒಳಗೊಂಡಿದೆ ಎಂದರು. ವಿಶ್ವವಿದ್ಯಾಲಯದ ಮುಖ್ಯಸ್ಥ ಡಾ.ವಸಂತ ಗಾಣಿಗೇರ ಮಾತನಾಡಿ, ವಿವಿಯು 15 ವರ್ಷಗಳಿಂದ ಮೆಣಸಿನಕಾಯಿ ಬಗ್ಗೆ ತರಬೇತಿ, ಪ್ರಾತ್ಯಕ್ಷಿಕೆ ನಡೆಸಿದೆ. ಜಿಲ್ಲೆಯಲ್ಲಿ 18 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಮೆಣಸಿನಕಾಯಿ ಬೆಳೆಯಲಾಗುತ್ತಿದೆ. ಒಟ್ಟು 181 ಸಂಕ್ಷಿಪ್ತ ಪ್ರಬಂಧಗಳು ಸ್ವೀಕರಿಸಲ್ಪಟ್ಟಿದ್ದು, 10 ವಿಜ್ಞಾನಿಗಳು, 32 ಖಾಸಗಿ ಪ್ರತಿನಿಧಿಗಳು, 26 ರೈತರು ಮತ್ತು ಉದ್ಯಮಿಗಳು, 85 ಸಂಶೋಧನಾ ವಿದ್ಯಾರ್ಥಿಗಳು ಮತ್ತು 30 ಪ್ರದರ್ಶಕರು ಸಮ್ಮೇಳನದಲ್ಲಿ ಭಾಗವಹಿಸುವ ನಿರೀಕ್ಷೆ ಇದೆ ಎಂದು ತಿಳಿಸಿದರು.

## ಜೈಲಿಗಟ್ಟುವುದು ಖಚಿತ: ಪ್ರಿಯಾಂಕ್ ಖರ್ಗೆ

ಹಾಳುಗೆಡವುತ್ತಿದ್ದರು ಎಂದು ಟೀಕಿಸಿದ್ದಾರೆ. ಕಲಬುರಗಿಯ ಪೂರ್ಣ ಪ್ರಮಾಣದ ದತ್ತಾಂಶ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿದ್ದ ನಿರ್ವಾಹಕರು ಮತದಾರರ ಹೆಸರುಗಳನ್ನು ವ್ಯವಸ್ಥಿತವಾಗಿ ಅಳಿಸಿಹಾಕುವ ಮೂಲಕ ಪ್ರಜಾಪ್ರಭುತ್ವ ಪ್ರಕ್ರಿಯೆಯನ್ನು ಹಾಳುಗೆಡವುತ್ತಿದ್ದರು. ಎಲ್ಲಾ ತನಿಖೆಗಳು ಈಗ ಬಿಜೆಪಿ ನಾಯಕರು ಮತ್ತು ಅವರ ಸಹಚರರ ಅಕ್ರಮವನ್ನು ತೋರಿಸುತ್ತವೆ. ಬಿಜೆಪಿಯ ವೋಟ್ ಚೋರಿಯ ಪ್ರತಿಯೊಂದು ತಂತ್ರ ಮತ್ತು ಕಾರ್ಯವೈಖರಿಯನ್ನು ಬಹಿರಂಗಪಡಿಸುತ್ತಿವೆ. ಈ ವಿಷಯದಲ್ಲಿ ಭಾಗಿಯಾಗಿರುವ ಪ್ರತಿಯೊಬ್ಬರನ್ನು ಹೊಣೆಗಾರರನ್ನಾಗಿ ಮಾಡಿ ಜೈಲಿಗೆ ಹಾಕಲಾಗುವುದು ಎಂದು ಪ್ರಿಯಾಂಕ್ ತಿಳಿಸಿದ್ದಾರೆ.

## ಸಭೆ ನಡೆಸಲು ಕೋರ್ಟ್ ಸೂಚನೆ

ನಡೆಯಿತು.ಜಿಲ್ಲಾಡಳಿತದ ಪರವಾಗಿ ಎಜಿ ಶಶಿಕಿರಣ್ ವಾದ ಮಂಡಿಸಿ ಸದ್ಯ ಪಥಸಂಚಲನಕ್ಕೆ ಅನುಮತಿ ಬೇಡ ಕಾನೂನು ಸುವ್ಯವಸ್ಥೆ ಸಮಸ್ಯೆಯಾಗುತ್ತದೆ. ಹೀಗಾಗಿ ಇನ್ನಷ್ಟು ಕಾಲವಕಾಶ ಕೊಡಬೇಕು ಅಂತ ವಾದ ಮಂಡಿಸಿದ್ದರು. ಈ ವೇಳೆ ಆರ್ ಎಸ್‌ಎಸ್ ಪರ ಹಿರಿಯ ವಕೀಲ್ ಅರುಣ್ ಶ್ಯಾಂ ವಾದ ಮಂಡಿಸಿ, ಈಗಾಗಲೇ ನ್ಯಾಯಲಯ ಸೂಚಿಸಿದಂತೆ ನವೆಂಬರ್ 2 ರಂದು ಅನುಮತಿಗೆ ನಾವು ಕಾಯುತ್ತಿದ್ದೇವೆ. ಆದರೆ ದಿನ ಕಳೆದಂತೆ ಉದ್ದೇಶ ಪೂರ್ವಕವಾಗಿ ಅರ್ಜಿಗಳು ಸಲ್ಲಿಕೆಯಾಗಿ ಕಾಲಹರಣ ಮಾಡಲಾಗುತ್ತಿದೆ. ಕಾನೂನು ಸುವ್ಯವಸ್ಥೆ ಸಮಸ್ಯೆ ಯಿದ್ರೆ ಕೇಂದ್ರದಿಂದ ಹೆಚ್ಚಿನ ಭದ್ರತೆ ತರಿಸಿಕೊಳ್ಳಲ್ಲಿ ಅಂತ ವಾದ ಮಂಡಿಸಿದರು. ವಾದ ಪ್ರತಿವಾದ ಆಲಿಸಿದ ಕೋರ್ಟ್ ಅಕ್ಟೋಬರ್ 28ಕ್ಕೆ ಎಲ್ಲಾ 8 ಸಂಘಟನೆಗಳ ಜೊತೆ ಶಾಂತಿ ಸಭೆ ನಡೆಸಿ ಅಂತಿಮ ವರದಿ ಸಲ್ಲಿಸಲು ಜಿಲ್ಲಾಡಳಿತಕ್ಕೆ ಸೂಚನೆ ನೀಡಿತು. ಅಲ್ಲದೆ, ಅ. 30ರಂದು ಮಧ್ಯಾಹ್ನ 2.30ಕ್ಕೆ ಮುಂದಿನ ವಿಚಾರಣೆಯನ್ನು ಮುಂದೂಡಿದ್ದಾರೆ. ಆರ್‌ಎಸ್‌ಎಸ್ ಅಕ್ಟೋಬರ್ 19 ರಂದೇ ಪಥಸಂಚಲನ ಕಾರ್ಯಕ್ರಮ ಆಯೋಜನೆ ಮಾಡಿತ್ತು. ಆದರೆ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡಿಲ್ಲ ಮತ್ತು ಹಲವು ಸಂಘಟನೆಗಳು ಪಥಸಂಚಲನಕ್ಕೆ ಅನುಮತಿ ಕೋರಿದ್ದರಿಂದ ಚಿತ್ತಾಪುರ ತಹಶೀಲ್ದಾರ್ ನಾಗಯ್ಯ ಹಿರೇಮಠ ಕಾನೂನು ಸುವ್ಯವಸ್ಥೆ ಕಾರಣ ನೀಡಿ ತಡೆ ನೀಡಿದ್ದರು.

## ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್

ನಾವೀನ್ಯತೆ ಮತ್ತು ರಾಷ್ಟ್ರೀಯ ಸೇವೆಗೆ ತಮ್ಮ ಶಕ್ತಿಯನ್ನು ವಿನಿಯೋಗಿಸಿದಲ್ಲಿ ಭಾರತ ಮತ್ತೊಮ್ಮೆ ವಿಶ್ವಗುರು ಆಗಬಹುದು ಎಂದು ಅಭಿಪ್ರಾಯಪಟ್ಟಿದ್ದಾರೆ.

ಭಾರತೀಯ ಸಂಸ್ಕೃತಿಯ ಅಡಿಪಾಯವು ಯಾವಾಗಲೂ ಆಧ್ಯಾತ್ಮಿಕತೆ ಮತ್ತು ಮಾನವೀಯ ಮೌಲ್ಯಗಳಾಗಿವೆ. ಇದನ್ನು ಸಂತರು, ಋಷಿಗಳು ಮತ್ತು ಸನ್ಯಾಸಿಗಳು ತಮ್ಮ ತಪಸ್ಸು, ಜ್ಞಾನ ಮತ್ತು ಯೋಗಾಭ್ಯಾಸಗಳ ಮೂಲಕ ಬಲಪಡಿಸಿದರು. ಜೀವನದ ಪ್ರತಿಯೊಂದು ಅಂಶವನ್ನು ಧರ್ಮ, ಕರುಣೆ ಮತ್ತು ನೈತಿಕತೆಯೊಂದಿಗೆ ಸಂಪರ್ಕಿಸಿದರು. ಮಹರ್ಷಿ ಪತಂಜಲಿ ಯೋಗವನ್ನು ವೈಜ್ಞಾನಿಕವಾಗಿ ರೂಪಿಸಿದರು, ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಸಮತೋಲನಕ್ಕೆ ದಾರಿ ಮಾಡಿಕೊಟ್ಟರು. ಈ ನಾಡಿನ ಅನೇಕ ಸಂತರು ಸಮಾಜದಲ್ಲಿ ಪ್ರೀತಿ ಸಮಾನತೆ ಮತ್ತು ಏಕತೆಯ ಸಂದೇಶವನ್ನು ಸಾರಿದವರು. ಋಷಿಗಳು, ಸನ್ಯಾಸಿಗಳು ಮತ್ತು ಆಚಾರ್ಯರು ಮಾನವೀಯತೆಯನ್ನು ವಸುಧೈವ ಕುಟುಂಬಕಂ ಎಂಬ ಮನೋಭಾವದಿಂದ ಒಂದುಗೂಡಿಸುವ ಮೂಲಕ ವಿಶ್ವ ಕಲ್ಯಾಣದ ಸಂದೇಶವನ್ನು ಹರಡಿದರು. ಅವರು ಭಾರತೀಯ ಸಂಸ್ಕೃತಿಗೆ ಆಧ್ಯಾತ್ಮಿಕತೆ, ನೈತಿಕತೆ ಮತ್ತು ಸಾಮರಸ್ಯದ ನಿರ್ದೇಶನವನ್ನು ನೀಡಿದರು ಮತ್ತು ವಿಶ್ವ ವೇದಿಕೆಯಲ್ಲಿ ಧರ್ಮ, ಆಧ್ಯಾತ್ಮಿಕತೆ ಮತ್ತು ಸಂಸ್ಕೃತಿಯ ಧ್ವಜವನ್ನು ಹಾರಿಸಿದರು ಎಂದು ಹೇಳುವ ಮೂಲಕ ಮಾನವೀಯ ಮೌಲ್ಯಗಳ ಅರಿವನ್ನು ತುಂಬಿದ ಈ ಮಾಹಾನ್ ವ್ಯಕ್ತಿಗಳನ್ನು ರಾಜ್ಯಪಾಲರು ಸ್ಮರಿಸಿದರು. ಶ್ರೀ ರಾಮಕೃಷ್ಣ ಪರಮಹಂಸರು ಒಬ್ಬ ಮಹಾನ್ ಸಂತ, ಯೋಗಿ ಮತ್ತು ಆಧ್ಯಾತ್ಮಿಕ ಗುರುಗಳಾಗಿದ್ದರು. ದೇವರ ಮೇಲಿನ ಅವರ ಆಳವಾದ ಭಕ್ತಿ ಮತ್ತು ಆಧ್ಯಾತ್ಮಿಕ ಅಭ್ಯಾಸವು ಅವರಿಗೆ ಪರಮಹಂಸ ಎಂಬ ಬಿರುದನ್ನು ಗಳಿಸಿತು. ಅವರು ತಾಯಿ ಕಾಳಿಯ ಆರಾಧನೆಯ ಮೂಲಕ ಅಂತಿಮ ಸತ್ಯವನ್ನು ಅರಿತುಕೊಂಡರು ಮತ್ತು ಎಲ್ಲಾ ಧರ್ಮಗಳು ಒಂದೇ ಪರಮಾತ್ಮನ ಮಾರ್ಗಗಳಾಗಿವೆ, ಪ್ರತಿಯೊಂದು ಧರ್ಮದ ಸಾರವು ಪ್ರೀತಿ, ಕರುಣೆ ಮತ್ತು ಸತ್ಯ ಎಂದು ಅರಿತುಕೊಂಡರು. ಶ್ರೀ ರಾಮಕೃಷ್ಣ ಪರಮಹಂಸರು ವಿವಿಧ ನಂಬಿಕೆಗಳ ಮೂಲಕ ದೇವರ ಸಾಕ್ಷಾತ್ಕಾರವನ್ನು ಅನುಭವಿಸಿದರು ಮತ್ತು ಜಾತೋ ಮತ್ ತತೋ ಮಾರ್ಗ - ಎಷ್ಟು ನಂಬಿಕೆಗಳು, ಹಲವು ಮಾರ್ಗಗಳು ಎಂಬ ಅದ್ಭುತ ಸಂದೇಶವನ್ನು ನೀಡಿದರು. ಶ್ರೀ ರಾಮಕೃಷ್ಣರು ಪ್ರಾಚೀನ ಮತ್ತು ಆಧುನಿಕ ಆಧ್ಯಾತ್ಮಿಕತೆಯ ನಡುವಿನ ಸೇತುವೆ ಎಂದು ರವೀಂದ್ರನಾಥ ಟ್ಯಾಗೋರ್ ಹೇಳಿದ್ದರು.

## 20 ಮಂದಿ ಸಜೀವ ದಹನ

ಸಣ್ಣಪುಟ್ಟ ಗಾಯಗಳೊಂದಿಗೆ ಪಾರಾಗಿದ್ದಾರೆ.ನತದೃಷ್ಟ ಬಸ್ಸಿನಲ್ಲಿ 39 ಮಂದಿ ವಯಸ್ಕರು ಮತ್ತು ಇಬ್ಬರು ಚಿಕ್ಕ ಮಕ್ಕಳು ಸೇರಿ 41 ಜನ ಇದ್ದರು. ಈವರೆಗೆ 11 ಶವಗಳನ್ನು ಹೊರತೆಗೆಯಲಾಗಿದ್ದು, ಅವರನ್ನು ಗುರುತಿಸುವ ಪ್ರಕ್ರಿಯೆ ಮುಂದುವರೆದಿದೆ.

ಸುರಕ್ಷಿತವಾಗಿರುವ 19 ಜನರನ್ನು ಗುರುತಿಸಲಾಗಿದ್ದು, ಅವರಲ್ಲಿ ಹಲವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಡಿಐಜಿ ಪ್ರವೀಣ್ ಮಾಹಿತಿ ನೀಡಿದ್ದಾರೆ.

ರಾತ್ರಿ 10.30ಕ್ಕೆ ಹೈದರಾಬಾದ್‌ನಿಂದ ಬೆಂಗಳೂರಿಗೆ ಬರುತ್ತಿದ್ದ ಬಸ್‌ಗೆ ಕರ್ನೂಲ್ ನಗರದ ಹೊರವಲಯದಲ್ಲಿರುವ ಉಲಿಂದಕೊಂಡ ಬಳಿ ನಸುಕಿನ 3.30ರ ವೇಳೆ ಹಿಂದಿನಿಂದ ದ್ವಿಚಕ್ರ ವಾಹನ ಡಿಕ್ಕಿ ಹೊಡೆದಿದೆ. ಬಸ್‌ನ ಕೆಳಗೆ ಹೋಗಿ ಇಂಧನ ಟ್ಯಾಂಕ್‌ಗೆ ಬೈಕ್ ಡಿಕ್ಕಿ ಹೊಡೆದ ಪರಿಣಾಮ ಬೆಂಕಿ ಹೊತ್ತಿಕೊಂಡು ಬಸ್ ಸುಟ್ಟು ಕರಕಲಾಗಿದೆ.

ಗಾಢನಿದ್ರೆಯಲ್ಲಿದ್ದ ಪ್ರಯಾಣಿಕರು ಎಚ್ಚರಗೊಂಡು, ಕೆಲವರು ಸಹಾಯಕ್ಕಾಗಿ ಕಿರುಚಿಕೊಂಡು, ಬಸ್ಸಿನ ತುರ್ತು ಬಾಗಿಲು ಮುರಿದು ಹೊರಬಂದರೆ, ಇನ್ನೂ ಹಲವರು ಬೆಂಕಿಯಲ್ಲಿ ಸಿಲುಕಿಕೊಂಡು ಸಜೀವ ದಹನವಾಗಿದ್ದಾರೆ. ಮಾಹಿತಿ ಪಡೆದ ಪೊಲೀಸರು ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆ ನಡೆಸಿದರು. ಗಾಯಾಳುಗಳನ್ನು ಕರ್ನೂಲ್ ಜನರಲ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಇಡೀ ಬಸ್ ಸಂಪೂರ್ಣವಾಗಿ ಸುಟ್ಟುಹೋಗಿದ್ದು, ಹೆಚ್ಚಿನ ಪ್ರಯಾಣಿಕರು ಹೈದರಾಬಾದ್ ನಗರದವರಾಗಿದ್ದಾರೆ. ಅಪಘಾತ ನಡೆದ ತಕ್ಷಣ ಬಸ್ ಚಾಲಕ ಹಾಗೂ ಸಿಬ್ಬಂದಿ ಸ್ಥಳದಿಂದ ಪರಾರಿಯಾಗಿದ್ದಾರೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ಘಟನೆ ಬಗ್ಗೆ ಪೊಲೀಸರು ತನಿಖೆ ಆರಂಭಿಸಿದ್ದು, ಬೈಕ್ ಸವಾರ ಕೂಡ ಸಾವನ್ನಪ್ಪಿದ್ದಾನೆ. ಪುಟ್ಟಪರ್ತಿಯಿಂದ ಹೈದರಾಬಾದ್‌ಗೆ ಬರುತ್ತಿದ್ದ ಹೈಮಾ ರೆಡ್ಡಿ, ಬಸ್‌ಗೆ ಬೆಂಕಿ ಹೊತ್ತಿಕೊಂಡಿರುವುದನ್ನು ನೋಡಿ ಬಸ್ ನಿಲ್ಲಿಸಿದ್ದಾರೆ. ನಂತರ ಪೊಲೀಸರಿಗೂ ಮಾಹಿತಿ ನೀಡಿದ್ದು, ಅವರು ತಕ್ಷಣ ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆಯನ್ನು ಕೈಗೊಂಡರು. ಸ್ಥಳೀಯರ ಮಾಹಿತಿ ಆಧರಿಸಿ ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ರಕ್ಷಣಾ ಪರಿಹಾರ ಕಾರ್ಯಾಚರಣೆ ಕೈಗೊಂಡರು. ಆದರೆ ಅದಾಗಲೇ ತೀವ್ರ ಬೆಂಕಿಯಿಂದಾಗಿ ಬಸ್ ಸಂಪೂರ್ಣವಾಗಿ ಸುಟ್ಟುಹೋಗಿತ್ತು. ರಾಮಿರೆಡ್ಡಿ, ವೇಣುಗೋಪಾಲ್ ರೆಡ್ಡಿ, ಸತ್ಯನಾರಾಯಣ, ಶ್ರೀಲಕ್ಷ್ಮಿ, ನವೀನ್ ಕುಮಾರ್, ಅಖಿಲ್, ಜಶ್ಮಿತಾ, ಅಕಿರಾ, ರಮೇಶ್, ಜಯಸೂರ್ಯ ಮತ್ತು ಸುಬ್ರಮಣಿಯಂ ಅಪಘಾತದಲ್ಲಿ ಬದುಕುಳಿದರು. ಹಿಂದೂಪುರದ ನವೀನ್ ತಮ್ಮ ಕಾರಿನಲ್ಲಿ ಆರು ಗಾಯಾಳುಗಳನ್ನು ಕರ್ನೂಲ್ ಆಸ್ಪತ್ರೆಗೆ ಕರೆದೊಯ್ದರು. ಘಟನೆಯಿಂದಾಗಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಭಾರೀ ಸಂಚಾರ ದಟ್ಟಣೆ ಉಂಟಾಗಿತ್ತು.

**★ ಸಿಎಂ ನಾಯ್ಡು ಆಘಾತ:**

ಘಟನೆ ಬಗ್ಗೆ ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಆಘಾತ ವ್ಯಕ್ತಪಡಿಸಿದ್ದಾರೆ. ಜೊತೆಗೆ ತಕ್ಷಣ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಉನ್ನತ ಅಧಿಕಾರಿಗಳೊಂದಿಗೆ ಮಾತನಾಡಿ ಪರಿಸ್ಥಿತಿ ಬಗ್ಗೆ ಮಾಹಿತಿ ಪಡೆದು, ಕ್ರಮಕ್ಕೆ ಸೂಚನೆ ನೀಡಿದ್ದಾರೆ. ಗಾಯಾಳುಗಳಿಗೆ ತಕ್ಷಣ ಚಿಕಿತ್ಸೆ ನೀಡಲು ಮತ್ತು ಮೃತರ ಕುಟುಂಬಗಳಿಗೆ ಸಾಧ್ಯವಿರುವ ಎಲ್ಲ ಸಹಕಾರವನ್ನು ನೀಡುವಂತೆ ನಿರ್ದೇಶಿಸಿದ್ದಾರೆ.

**★ಡಿಕ್ಕಿ ಹೊಡೆದ ಬೈಕ್ ಬಸ್ ಇಂಜಿನ್ ಗೆ ಸಿಲುಕಿ ಬೆಂಕಿ**

ವೋಲ್ವೋ ಬಸ್ ಗೆ ಹಿಂದಿನಿಂದ ವೇಗವಾಗಿ ಬಂದ ಬೈಕ್‌ಗೆ ಡಿಕ್ಕಿ ಹೊಡೆದು ಬಸ್ ಅಡಿ ನುಗ್ಗಿ ಇಂಜಿನ್ ಬಳಿ ಸಿಲುಕಿ ನೆಲಕ್ಕೆ ಉಜ್ಜಿದ್ದರಿಂದ ಬೆಂಕಿ ಹೊತ್ತಿಕೊಂಡು ಚಾಲಕನ ಗಮನಕ್ಕೆ ಬರುವಷ್ಟರಲ್ಲಿ ಇಡೀ ಬಸ್ ಅನ್ನೇ ಆವರಿಸಿದ್ದು,ಅದಾಗಲೇ ಬೈಕ್ ಸವಾರ ಮೃತಪಟ್ಟಿದ್ದನು.

ಬೈಕ್ ಡಿಕ್ಕಿಹೊಡೆದ ಸ್ಥಳದಲ್ಲೇ ಬಸ್ ನಿಲ್ಲಿಸಿದ್ದರೆ, ಇಷ್ಟೊಂದು ಪ್ರಮಾಣದ ಸಾವು ನೋವು ಸಂಭವಿಸುತ್ತಿರಲಿಲ್ಲ.

ಬಸ್ ಚಾಲಕ ಬದಲಿ ಚಾಲಕನನ್ನು ಎಬ್ಬಿಸಿ ಪ್ರಯಾಣಿಕರನ್ನು ಬಸ್‌ನಿಂದ ಕೆಳಗೆ ಇಳಿಸುವ ಪ್ರಯತ್ನ ಮಾಡಿದರೂ ಇಂಜಿನ್ ಗೆ ಬೆಂಕಿ ತಗುಲಿದ್ದರಿಂದ, ಕೆಲವೇ ನಿಮಿಷಗಳಲ್ಲಿ ಇಡೀ ಬಸ್ ಆವರಿಸಿದೆ ಮುಚ್ಚಿದ್ದ ಕಿಟಕಿಗಳನ್ನು ಒಡೆದು ಪ್ರಯಾಣಿಕರನ್ನು ಹೊರತರಲಾಯಿತು. ಅಷ್ಟರೊಳಗೆ ಹಲವು ಪ್ರಯಾಣಿಕರು ಉಸಿರುಚೆಲ್ಲಿದ್ದಾರೆ, ಪ್ರತ್ಯಕ್ಷದರ್ಶಿಗಳು ಹೇಳುವಂತೆ ಬೆಂಕಿ ಎಷ್ಟು ಬೇಗನೆ ಹರಡಿತೆಂದರೆ, ಹೆಚ್ಚಿನ ಪ್ರಯಾಣಿಕರು ಏನಾಗುತ್ತಿದೆ ಎಂದು ಅರಿತುಕೊಳ್ಳುವ ಮೊದಲೇ ಬೆಂಕಿಯಲ್ಲಿ ಬೆಂದುಹೋಗಿದ್ದಾರೆ,

ಕೆಲವರು ಸುಟ್ಟಗಾಯಗಳಿಂದ ಮತ್ತೆ ಕೆಲವರು ಉಸಿರುಗಟ್ಟಿ ಸಾವನ್ನಪ್ಪಿದ್ದಾರೆ. ಅಗ್ನಿಶಾಮಕ ದಳ ಮತ್ತು ರಕ್ಷಣಾ ತಂಡಗಳು ಸ್ಥಳಕ್ಕೆ ಧಾವಿಸಿ ಬೆಂಕಿಯನ್ನು ನಂದಿಸಲು ಮತ್ತು ಅವಶೇಷಗಳನ್ನು ಹೊರತೆಗೆಯಲು ಹೆಣಗಾಡಿದವು. ಅಧಿಕಾರಿಗಳು ಇನ್ನೂ ಸಾವಿನ ಸಂಖ್ಯೆಯನ್ನು ದೃಢಪಡಿಸಿಲ್ಲ.

**★ಒಂದೇ ಕುಟುಂಬದ ನಾಲ್ವರು ಸಾವು**

ಬಸ್ ಸುಟ್ಟು ಕರಕಲಾದ ದುರಂತದಲ್ಲಿ ಒಂದೇ ಕುಟುಂಬದ ನಾಲ್ವರು ಸಜೀವ ದಹನವಾಗಿದ್ದಾರೆ. ನೆಲ್ಲೂರ್ ಜಿಲ್ಲೆಯ ಗೊಲ್ಲಾವರಿಪಲ್ಲಿಯ ಗೊಲ್ಲಾ ರಮೇಶ್ (35), ಅನುಷಾ (30), ಮನ್ವಿತಾ (10) ಮತ್ತು ಮನಿಶ್ (12) ಮೃತ ಕುಟುಂಬಸ್ಥರು .

**★ಬಸ್ಸಿನಲ್ಲಿದ್ದ ಪ್ರಯಾಣಿಕರು:**

ಅಶ್ವಿನ್ ರೆಡ್ಡಿ (36), ಜಿ. ಧಾತ್ರಿ (27), ಕೀರ್ತಿ (30), ಪಂಕಜ್ (28), ಯುವನ್ ಶಂಕರ್ ರಾಜು (22), ತರುಣ್ (27), ಆಕಾಶ್ (31), ಗಿರಿರಾವ್ (48), ಬುನಾ ಸಾಯಿ (33), ಗಣೇಶ್ (30), ಜಯಂತ್ ಪುಷ್ವಾಹ (27), ಪಿಲ್ವಾಮಿನ್ ಬೇಬಿ (64), ಕಿಶೋರ್ ಕುಮಾರ್ (41), ರಮೇಶ್ (30), ಅನುಷಾ (22), ಮೊಹಮ್ಮದ್ (51), ದೀಪಕ್‌ಕುಮಾರ್ (24), ಆಂದೋಜ್ ನವೀನ್ ಕುಮಾರ್ (26), ಪ್ರಶಾಂತ್ (32), ಎಂ. ಸತ್ಯನಾರಾಯಣ (28), ಮೇಘನಾಥ್ (25), ವೇಣುಗುಂಡ (33), ಚರಿತ್ (21), ಚಂದನಾ ಮಂಗಾ (23), ಸಂಧ್ಯಾರಾಣಿ ಮಂಗಾ (43), ಗ್ಲೋರಿಯಾ ಎಲ್ಲೆಸಾ ಶ್ಯಾಮ್ (28), ಸೂರ್ಯ (24), ಹರಿಕಾ (30), ಶ್ರೀಹರ್ಷ (24), ಶಿವ (24), ಶ್ರೀನಿವಾಸ ರೆಡ್ಡಿ (40), ಸುಬ್ರಹ್ಮಣ್ಯಂ (26), ಕೆ.ಅಶೋಕ್ (27), ಎಂ.ಜಿ. ರಾಮರೆಡ್ಡಿ (50), ಉಮಾಪತಿ (32), ಅಮೃತ್‌ಕುಮಾರ್ (18), ವೇಣುಗೋಪಾಲ್ ರೆಡ್ಡಿ (24) ಬಸ್ಸಿನಲ್ಲಿ ಒಟ್ಟು 43 ಜನರಿದ್ದರು. ಈ ಪೈಕಿ 41 ಪ್ರಯಾಣಿಕರು ಮತ್ತು ಇಬ್ಬರು ಚಾಲಕರು. 41 ಪ್ರಯಾಣಿಕರಲ್ಲಿ 39 ವಯಸ್ಕರು ಮತ್ತು ಇಬ್ಬರು ಚಿಕ್ಕ ಮಕ್ಕಳು. ಈ ಪೈಕಿ 10 ಮಹಿಳೆಯರಿದ್ದರು. ಇಲ್ಲಿಯವರೆಗೆ, ವಿಧಿವಿಜ್ಞಾನ ತಂಡವು ಬಸ್ಸಿನಿಂದ 20 ಶವಗಳನ್ನು ಹೊರತೆಗೆದಿದ್ದು, ಅವರನ್ನು ಗುರುತಿಸುವ ಪ್ರಕ್ರಿಯೆ ಮುಂದುವರೆದಿದೆ ಸುರಕ್ಷಿತವಾಗಿರುವ 19 ಜನರನ್ನು ಗುರುತಿಸಲಾಗಿದೆ ಮತ್ತು ಅವರಲ್ಲಿ ಹಲವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಡಿಐಜಿ ಕೋಯ ಪ್ರವೀಣ್ ಅವರು ಮಾಹಿತಿ ನೀಡಿದ್ದಾರೆ

**★2 ಲಕ್ಷ ರೂ. ಪರಿಹಾರ**

ಕರ್ನೂಲ್‌ನಲ್ಲಿ ಖಾಸಗಿ ಬಸ್ ಬೆಂಕಿ ಹೊತ್ತಿಕೊಂಡು ಮೃತಪಟ್ಟ 20 ಮಂದಿ ಕುಟುಂಬ ಸದಸ್ಯರಿಗೆ ಪ್ರಧಾನಿ ನರೇಂದ್ರ ಮೋದಿ ತಲಾ ಎರಡು ಲಕ್ಷ ರೂ. ಪರಿಹಾರ ಪ್ರಕಟಿಸಿದ್ದಾರೆ. ಈ ಕುರಿತು ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಪ್ರಧಾನಿ ಘಟನೆಯ ಬಗ್ಗೆ ತೀವ್ರ ಸಂತಾಪ ವ್ಯಕ್ತಪಡಿಸಿ, ಗಾಯಾಳುಗಳು ಶೀಘ್ರ ಗುಣಮುಖರಾಗಲಿ ಎಂದು ಪ್ರಾರ್ಥಿಸಿದ್ದಾರೆ.

## ಯತ: ಸಚಿವ ಶಿವಾನಂದ ಪಾಟೀಲ

ಕೊಪ್ಪಳ, ಗದಗ ಜಿಲ್ಲೆಗಳಲ್ಲಿ ಬೆಳೆಯಲಾಗುತ್ತಿದೆ. 2ನೇ ಪುಟನೋಡಿ

ಅತಿಯಾದ ಮಳೆಗೆ ಕಟಾವಿಗೆ ಬಂದ ಈರುಳ್ಳಿ ಬೆಳೆ ಹಾನಿಯಾಗಿ, ದಿಡೀರ್ ಬೆಲೆ ಕುಸಿತಗೊಂಡಿದ್ದು, ಜಮೀನಿನಲ್ಲೇ ಈರುಳ್ಳಿ ಬೆಳೆ ನಾಶವಾಗಿರುವ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಸಭೆ ಸೇರಿ ಚರ್ಚೆ ಮಾಡಿದ್ದು, ಎಂಐಎಸ್ (ಮಾರುಕಟ್ಟೆ ಮಧ್ಯ ಪ್ರವೇಶ ಯೋಜನೆ) ಅಡಿಯಲ್ಲಿ ಖರೀದಿಸಲು ತೋಟಗಾರಿಕೆ ಇಲಾಖೆ ಅಧಿಕಾರಿಗಳು ಶಿಫಾರಸ್ಸು ಮಾಡಿದ್ದರು.

ಆದರೆ ಪಿಡಿಪಿಎಸ್ ಅಡಿ ಈರುಳ್ಳಿ ಖರೀದಿ ಸೂಕ್ತ ಎಂಬ ಅಭಿಪ್ರಾಯ ವ್ಯಕ್ತವಾದ ಹಿನ್ನೆಲೆಯಲ್ಲಿ ಅನುಮತಿ ಕೋರಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುತ್ತಿದೆ ಎಂದು ಸಚಿವರು ತಿಳಿಸಿದ್ದಾರೆ.

# ಸಂಭ್ರಮದಿಂದ ಜರುಗಿದ ಹನುಮಾನ ಜಾತ್ರಾ ಮಹೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.24:ತಾಲ್ಲೂಕಿನ ಚಾಳಕಾಪೂರ ಗ್ರಾಮದಲ್ಲಿ ಹನುಮಾನ ದೇವರ ಜಾತ್ರಾ ಮಹೋತ್ಸವ ನಿಮಿತ್ತ ಅದ್ದೂರಿಯಾಗಿ ನಡೆದ ಹನುಮಾನ ದೇವರ ಅಂಬಾರಿ ಉತ್ಸವ, ಪಲ್ಲಕ್ಕಿ ಮೆರವಣಿಗೆಯ ವೈಭವವನ್ನು ಸಾವಿರಾರು ಭಕ್ತರು ಕಣ್ತುಂಬಿಕೊಂಡು ಕತಾರ್ಥರಾದರು. ಮಂಗಳವಾರ ತಡರಾತ್ರಿ ಆರಂಭವಾದ ಆನೆ ಮೇಲಿನ ಹನುಮಾನ ದೇವರ ಅಂಬಾರಿ ಉತ್ಸವ ಬೆಳಗಿನ ಜಾವದವರೆಗೆ ಜರುಗಿತು. ಈ ಅಂಬಾರಿ ಉತ್ಸವದಲ್ಲಿ ರಾಜ್ಯದ ನಾನಾ ಜಿಲ್ಲೆಗಳು ಸೇರಿದಂತೆ ಪಕ್ಕದ ರಾಜ್ಯಗಳಾದ ಮಹಾರಾಷ್ಟ್ರ, ತೆಲಂಗಾಣ, ಆಂಧ್ರಪ್ರದೇಶ ಸೇರಿದಂತೆ ಇತ-ರೆಡೆಯ ಭಕ್ತರು ಸಂಭ್ರಮದಿಂದ ಪಾಲ್ಗೊಂಡು ಹನುಮಾನ ದೇವರ ಕೃಪೆಗೆ ಪಾತ್ರರಾದರು. ಈ ಅಂಬಾರಿ ಉತ್ಸವದಲ್ಲಿ ವಿವಿಧೆಡೆಯಿಂದ ಆಗಮಿಸಿದ ಕಲಾ ತಂಡಗಳು ತಮ್ಮ ಕಲೆಯನ್ನು ಪ್ರದರ್ಶಿಸಿ ಸಭಿಕರಿಂದ ಸೈ ಎನಿಸಿಕೊಂಡವು.

ಬುಧವಾರ ಸಂಜೆ ಅನೇಕ ಭಕ್ತರ ಸಮ್ಮುಖದಲ್ಲಿ ಹನುಮಾನ ದೇವಸ್ಥಾನದಲ್ಲಿ ಧ್ವಜಾರೋಹಣ ನೆರವೇರಿತು.

ನಂತರ ಗ್ರಾಮದ ಹನುಮಾನ ದೇವಸ್ಥಾನದಿಂದ ಸಂಜೀವಿನಿ ಪರ್ವತದವರೆಗೆ ಬೆಳ್ಳಿ ಪಲ್ಲಕ್ಕಿ ಉತ್ಸವ ಸಡಗರ, ಸಂಭ್ರಮದ ಮಧ್ಯೆ ಜರುಗಿತು. ಗುರುವಾರ ರಾಜ್ಯದ ವಿವಿಧ ಜಿಲ್ಲೆಗಳು ಒಳಗೊಂಡಂತೆ ರಾಜ್ಯಗಳಿಂದಲೂ ಆಗಮಿಸಿದ ಕುಸ್ತಿಪಟುಗಳು ತಮ್ಮ ಜಂಗಿ ಕುಸ್ತಿಯ ಕಲೆಯನ್ನು ಪ್ರದರ್ಶಿಸಿ ಸಭಿಕರ ಮನರಂಜಿಸಿದರು.

## ಐ.ಎಂ.ಎ. ಅಧ್ಯಕ್ಷರಾಗಿ ಡಾ. ಬಲ್ಲೂರಕರ್



ಬೀದರ. ಅ. 24 : ಇಂಡಿಯನ್ ಮೆಡಿಕಲ್ ಅಸೋಸಿಯೇಷನ್ (ಐಎಂಎ) ಬೀದರ್ ಘಟಕದ ನೂತನ ಅಧ್ಯಕ್ಷರಾಗಿ ಡಾ. ವಿಜಯ ಬಲ್ಲೂರಕರ್ ಆಯ್ಕೆಯಾಗಿದ್ದಾರೆ.

ನೂತನ ಪದಾಧಿಕಾರಿಗಳು: ಡಾ. ಎಂ.ಡಿ. ಅಹಮೆದುದ್ದೀನ್, ಡಾ. ಪ್ರಜ್ಞಾ ಮದನಾ (ಉಪಾಧ್ಯಕ್ಷರು), ಡಾ. ಧರ್ಮರಾಜ ಬಿರಾದಾರ (ಕಾರ್ಯದರ್ಶಿ), ಡಾ. ಮಹೇಶ್ ಕಾಕನಾಳೆ (ಜಂಟಿ ಕಾರ್ಯದರ್ಶಿ) ಮತ್ತು ಡಾ. ಸಂದೀಪ್ ಗಾದಾ (ಖಜಾಂಚಿ).

ಸನ್ಮಾನ: ಅಸೋಸಿಯೇಷನ್ ಅಧ್ಯಕ್ಷರಾಗಿ ಆಯ್ಕೆಯಾದ ಡಾ. ವಿಜಯ ಬಲ್ಲೂರಕರ್ ಅವರನ್ನು ರೋಟರಿ ಕ್ಲಬ್ ಆಫ್ ಬೀದರ್ ನ್ಯೂ ಸೆಂಚುರಿ ವತಿಯಿಂದ ನಗರದ ಐ.ಎಂ.ಎ. ಹಾ???ನಲ್ಲಿ ಸನ್ಮಾನಿಸಲಾಯಿತು.

ಬಲ್ಲೂರಕರ್ ಅವರ ಅವಧಿಯಲ್ಲಿ ಐ.ಎಂ.ಎ ವತಿಯಿಂದ ವಿವಿಧ ಉತ್ತಮ ಕಾರ್ಯಗಳು ಆಗಲಿವೆ ಎಂದು ಕ್ಲಬ್ ಅಧ್ಯಕ್ಷ ಡಾ. ನಾಗೇಶ ಪಾಟೀಲ ವಿಶ್ವಾಸ ವ್ಯಕ್ತಪಡಿಸಿದರು.

ಕ್ಲಬ್ ಕಾರ್ಯದರ್ಶಿ ರಾಜಕುಮಾರ ಅಳ್ಳೆ, ಖಜಾಂಚಿ ಬಸವರಾಜ ಮಡಕಿ, ಜಂಟಿ ಕಾರ್ಯದರ್ಶಿ ಸತೀಶಕುಮಾರ ಸ್ವಾಮಿ, ಸದಸ್ಯರಾದ ವೀರಶೆಟ್ಟಿ ಮಣಗೆ, ನಿತಿನ್ ಕರ್ಪೂರ, ಸುಮೀತ್ ಸಿಂದೋಲ್, ಚೇತನ್ ಮೇಗೂರ್ ಮತ್ತಿತರರು ಇದ್ದರು.

## ವ್ಯಕ್ತಿ ಕಾಣೆ: ಪತ್ತೆಗಾಗಿ ಮನವಿ



ಬೀದರ, ಅ.24 : ಬೀದರನ ಮಮದಾಪೂರ ಗ್ರಾಮ ಸಧ್ಯ ಮರಖಲ ಗ್ರಾಮದ ನಿವಾಸಿಯಾದ ಸಂದೀಪ ತಂದೆ ಬಾಬು ಖಂದಾರೆ (21) ಇತನು ದಿನಾಂಕ: 16-10-2025 ರಂದು ಮನೆಯಿಂದ ಹೊರಗಡೆ ಹೋಗಿ ಕಾಣೆಯಾಗಿರುತ್ತಾನೆ.

ಕಾಣೆಯಾದ ವ್ಯಕ್ತಿ 5 ಅಡಿ 8 ಇಂಚ ಎತ್ತರ ಇದ್ದು, ನೋಡಲು ದುಂಡು ಮುಖ, ನೀಳ ಮೂಗು, ಸಾಧಾರಣ ಮೈಕಟ್ಟು ಇದ್ದು, ಕಾಣೆಯಾಗುವ ಸಮಯದಲ್ಲಿ ಮೈಮೇಲೆ ಗೆರೆ ಉಳ್ಳ ಕಪ್ಪು ಬಣ್ಣದ ಟೀ ಶರ್ಟ, ಬಿಳಿ ಬಣ್ಣದ ಪ್ಯಾಂಟ ಧರಿಸಿರುವ ಇತನು ಕನ್ನಡ ಮತ್ತು ಹಿಂದಿ ಭಾಷೆಯಲ್ಲಿ ಮಾತನಾಡುತ್ತಾನೆ.

ಈ ವ್ಯಕ್ತಿಯ ಬಗ್ಗೆ ಯಾರಿಗಾದರೂ ಸುಳಿವು ಸಿಕ್ಕಲ್ಲಿ ಜನವಾಡಾ ಪೊಲೀಸ್ ಠಾಣೆ ಮೊಬೈಲ್ ಸಂಖ್ಯೆ:9480803450, ಸಿಪಿಐ ಬೀದರ ಗ್ರಾಮೀಣ ವೃತ್ತ ಮೊಬೈಲ್ ಸಂಖ್ಯೆ:9480803439, ಬೀದರ ಡಿಎಸ್‌ಪಿ ಮೊಬೈಲ್ ಸಂ-ಖ್ಯೆ: 9480803420, ಕಂಟ್ರೋಲ್ ರೂಮ ನಂಬರ 08482-226700 ಗೆ ಸಂಪರ್ಕಿಸುವಂತೆ ಜನವಾಡಾ ಪೊಲೀಸ್ ಠಾಣೆಯ ಸಹಾಯಕ ಪೊಲೀಸ್ ಉಪ ನಿರೀಕ್ಷಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಮೃತ ವ್ಯಕ್ತಿ ವಾರಸುದಾರರ ಪತ್ತೆಗಾಗಿ ಮನವಿ

ಬೀದರ, ಅ.24 : ಬೀದರ ಜಿಲ್ಲಾ ಸರ್ಕಾರಿ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಾಗಿದ್ದ ಅಪರಿಚಿತ ಗಂಡು ವ್ಯಕ್ತಿ (50 ರಿಂದ 55 ವರ್ಷ) ಚಿಕಿತ್ಸೆ ಫಲಕಾರಿಯಾಗದೇ ದಿನಾಂಕ: 05-04-2025 ರಂದು ಆಸ್ಪತ್ರೆಯಲ್ಲಿ ಮೃತಪಟ್ಟಿರುತ್ತಾನೆ, ಈವರೆಗೆ ಮೃತ ವ್ಯಕ್ತಿಯ ವಾರಸುದಾರರು ಯಾ-ರೆಂದು ಪತ್ತೆಯಾಗಿರುವುದಿಲ್ಲ. ಬೀದರ ಜಿಲ್ಲಾ ಸರ್ಕಾರಿ ಆಸ್ಪತ್ರೆಯ ವೈದ್ಯಾಧಿಕಾರಿಗಳು ನೀಡಿದ ದೂರಿನ ಮೇರೆಗೆ ಯು.ಡಿ.ಆರ್.ನಂ. 06/2025 ಕಲಂ 194 ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ-2023 ಅಡಿಯಲ್ಲಿ ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲಾಗಿರುತ್ತಾರೆ. ಮೃತ ವ್ಯಕ್ತಿಯು 5 ಅಡಿ 4 ಇಂಚ್ ಎತ್ತರ ಇದ್ದು, ನೋಡಲು ಕೋಲು ಮುಖ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಮೈಮೇಲೆ ಒಂದು ಬಿಳಿ ಬಣ್ಣದ ಚಕ್ಸ ಶರ್ಟ, ಒಂದು ಕಪ್ಪು ಬಣ್ಣದ ಪ್ಯಾಂಟು ಒಂದು ಮೆಹಂದಿ ಬಣ್ಣದ ಅಂಡರವಿಯರ್ ಧರಿಸಿರುತ್ತಾನೆ. ಮೃತ ವ್ಯಕ್ತಿಯ ವಾರಸುದಾರರು ಯಾರಾದರೂ ಪತ್ತೆಯಾದ್ದಲ್ಲಿ ಜನವಾಡಾ ಪೊಲೀಸ್ ಠಾಣೆ ಮೊಬೈಲ್ ಸಂಖ್ಯೆ: 9480803450, ಸಿಪಿಐ ಬೀದರ ಗ್ರಾಮೀಣ ವೃತ್ತ ಮೊಬೈಲ್ ಸಂಖ್ಯೆ: 9480803439, ಬೀದರ ಡಿಎಸ್‌ಪಿ ಮೊಬೈಲ್ ಸಂಖ್ಯೆ: 9480803420, ಕಂಟ್ರೋಲ್ ರೂಮ ನಂಬರ 08482-226700 ಗೆ ಸಂಪರ್ಕಿಸುವಂತೆ ಜನವಾಡಾ ಪೊಲೀಸ್ ಠಾಣೆಯ ಸಹಾಯಕ ಪೊಲೀಸ್ ಉಪ ನಿರೀಕ್ಷಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಅನುಭವ ಮಂಟಪ ಉತ್ಸವಕ್ಕೆ ಶ್ರೀಮಂತ ಶಾಹುಮಹಾರಾಜ್‌ಗೆ ಆಹ್ವಾನ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.24: ಬಸವಕಲ್ಯಾಣ ನಗರದಲ್ಲಿ ನ.29 ಮತ್ತು 30 ರಂದು ಅನುಭವ ಮಂಟಪ ವಿಶ್ವ ಬಸವಧರ್ಮ ಟ್ರಸ್ಟ್ ವತಿಯಿಂದ ಜರುಗಲಿರುವ ಅನುಭವ ಮಂಟಪ ಉತ್ಸವ ಮತ್ತು ಶರಣ ಕಮ್ಮಟ ಸಮಾರಂಭಕ್ಕೆ ಕೊಲ್ಹಾಪುರ ಜಿಲ್ಲೆಯ ಸಂಸದ ಶ್ರೀಮಂತ ಶಾಹು ಮಹಾರಾಜ್ ಅವರನ್ನು ಆಹ್ವಾನಿಸಲಾಗಿದೆ.ಮಹಾರಾಷ್ಟ್ರ ರಾಜ್ಯದ ಕೊಲ್ಹಾಪುರ ನಗರದ ಸಂಸದ ಶ್ರೀಮಂತ ಶಾಹು ಮಹಾರಾಜ್ ಅವರ ನಿವಾಸಕ್ಕೆ ಈಚೆಗೆ ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ನೇತೃತ್ವದಲ್ಲಿ ಪ್ರಮುಖರು ಭೇಟಿ ನೀಡಿ ಸಂಸದ ಶ್ರೀಮಂತ ಶಾಹು ಮಹಾರಾಜ್ ಅವರನ್ನು ಸನ್ಮಾನಿಸಿ, ಶರಣರು ನಾಡಿದಾಡಿದ ಭೂಮಿಯಲ್ಲಿ ಎರಡು ದಿನ ನಡೆಯಲಿರುವ ಅನುಭವ ಮಂಟಪ ಉತ್ಸವ ಸಮಾರಂಭದಲ್ಲಿ ಭಾಗವಹಿಸುವಂತೆ ಕೋರಲಾಯಿತು. ಈ ಸಂದರ್ಭದಲ್ಲಿ ಸರಳಾತಾಯಿ ಪಾಟೀಲ್, ರಾಜಶೇಖರ ತಂಬಾಕೆ, ಯಶ್ ಅಂಬೋಲೆ, ರಾಜು ಜುಬರೆ, ಸುಭಾಷ ಮಹಾಜನ, ಸುರೇಶ ಜಾಂಬುರೆ, ವಿಜಯ ಪಾಟೀಲ್ ಸೇರಿದಂತೆ ಹಲವರು ಇದ್ದರು.

## ಲಕ್ಷ್ಮೀಬಾಯಿ ಗಂಡ ಗುಂಡಪ್ಪಾ ಹೋಡಗೆ ದಂಪತಿಗಳ ನಿಧನ



ಮಲ್ಲಮ್ಮ ನುಡಿ ವಾರ್ತೆಕಮಲನಗರ:ತಾಲೂಕಿನ ಮುಧೋಳ ಗ್ರಾಮದ ಹಿರಿಯ ಜವಿ ಸ್ವ. ಗುಂಡಪ್ಪಾ ಹೋಡಗೆ (85) ಹಾಗೂ ಸ್ವ. ಲಕ್ಷ್ಮೀಬಾಯಿ ಗುಂಡಪ್ಪಾ ಹೋಡಗೆ (84) ಗುರುವಾರ ರಾತ್ರಿ ವಯೋ ಸಹಜವಾಗಿ ಒಂದೇ ದಿನ ದಂಪತಿಗಳಿಗೆ ಇರ್ವರೂ ಲಿಂಗೈಕ್ಯರಾಗಿರುತ್ತಾರೆ. ಶುಕ್ರವಾರ ಸಂಜೆ ವಿಧಿ ವಿಧಾನ ದೊಂದಿದೆ ಸ್ವ ಗ್ರಾಮದಲ್ಲಿ ಮೋಕ್ಷ ಕಾರ್ಯ ನಡೆಯಿತು.ಮೃತ ದಂಪತಿಗಳ ಅತ್ಮಕ್ಕೆ ಶಾಂತಿ ಸಿಗಲಿ ಎಂದು ಕುಟುಂಬಸ್ಥರು ಮತ್ತು ಗ್ರಾಮಸ್ಥರು ಶೋಕ ವ್ಯಕ್ತ ಪಡಿಸಿದ್ದರು.

## ಮರಕುಂದಾ ಗ್ರಾಮದ ವಾರ್ಡ 02 ರಲ್ಲಿ ಗ್ಯಾರಂಟಿ ಜಾಗೃತಿ



ಬೀದರ್. ಅ. 24 : ರಾಜ್ಯ ಸರ್ಕಾರದ ಜನಪರ ಕಾರ್ಯಕ್ರಮಗಳಾದ ಗ್ಯಾರಂಟಿ ಯೋಜನೆಗಳನ್ನು ಪ್ರತಿ ಮನೆಗೂ ತಲುಪಿಸುವ ನಿಟ್ಟಿನಲ್ಲಿ ಮಾನ್ಯ *ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣಿ* ಸರ್ ರವರ ಮಾರ್ಗದರ್ಶನದಲ್ಲಿ ಬೀದರ ದಕ್ಷಿಣ ಕ್ಷೇತ್ರದ ತಾಲ್ಲೂಕ ಪಂಚ ಗ್ಯಾರಂಟಿ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮವನ್ನು ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ ಮರಕುಂದಾ ಗ್ರಾಮದ ವಾರ್ಡ್ 02 ರಲ್ಲಿ ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ,

**ಯುವನಿಧಿ:** ಈ ಯೋಜನೆ ಪದವೀಧರರು ಮತ್ತು ಡಿಪ್ಲೋಮಾ ಮುಗಿಸಿದ ಯುವಕರಿಗೆ ಯೋಜನೆಯ ಕುರಿತು ಪೂರ್ಣ ಮಾಹಿತಿ ಇಲ್ಲದಿರುವ ಕಾರಣ, ಸಮಿತಿಯು ಕಾಲೇಜುಗಳಲ್ಲಿ ಮತ್ತು ಗ್ರಾಮ ಮಟ್ಟದಲ್ಲಿ ವಿಶೇಷ ಪ್ರಚಾರ ಆಂದೋಲನಗಳನ್ನು ನಡೆಸುತ್ತಿದೆ. ನೋಂದಣಿ ಪ್ರಕ್ರಿಯೆಯಲ್ಲಿ ಸಹಾಯ ಮಾಡುತ್ತಿದೆ. ಅನ್ನಭಾಗ್ಯ ಯೋಜನೆ, ಗೃಹ ಲಕ್ಷ್ಮಿ, ಶಕ್ತಿ ಯೋಜನೆ, ಗೃಹ ಜ್ಯೋತಿ, ಯೋಜನಗಳ ಸೌಲಭ್ಯಗಳಿಂದ ವಂಚಿತರಾದ ಅರ್ಹರನ್ನು ಗುರುತಿಸಿ, ಅವರಿಗೆ ಅರ್ಜಿ ಸಲ್ಲಿಸುವ ಅಥವಾ ತಾಂತ್ರಿಕ ಸಮಸ್ಯೆಗಳನ್ನು ಪರಿಹರಿಸಲು ನೆರವು ನೀಡಿವುದು, ಮತ್ತು ಜನ ಸಾಮಾನ್ಯರಿಂದ ಸಮಸ್ಯೆಗಳನ್ನು ಆಲಿಸಿ ಅವುಗಳನ್ನು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತರುತ್ತಿದೆ, ಮತ್ತು ಯೋಜನೆಯ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು.

ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರಾದ ಉದಯಕುಮಾರ ಚಟನಳ್ಳಿ, ಶಿವಕುಮಾರ ಕುತ್ತಾಬಬಾದ್, ಮೊಹಮ್ಮದ್ ಖುದುಸ್, ಸೇವಾದಳ ಅಧ್ಯಕ್ಷ ಮೋಹಿನ್ ಪಠಾಣ್, ಗ್ರಾಮ ಪಂಚಾಯತ ಸದಸ್ಯರಾದ ಬೀರಪ್ಪಾ, ಪವನ ಬಾಪೂರೆ ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.



ಬಸವಕಲ್ಯಾಣ:- ತಾಲೂಕಿನ ಸುಕ್ಷೇತ್ರ ಹಾರಕೂಡ ಸಂಸ್ಥಾನ ಹಿರೇಮಠದ ದಾಸೋಹ ಮನೆಯಲ್ಲಿ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚೆನ್ನವೀರ ಶಿವಾಚಾರ್ಯರ ಪಾವನ ಸಾನಿಧ್ಯದಲ್ಲಿ ದೀಪಾವಳಿ ಹಬ್ಬದ ನಿಮಿತ್ಯ ಮಹಾಲಕ್ಷ್ಮಿ ಪೂಜೆ ಕಾರ್ಯಕ್ರಮ ಜರಗಿತು. ಈ ಸಂದರ್ಭದಲ್ಲಿ ಬೀದರ ಜಿಲ್ಲಾ ಪಂಚಾಯಿತಿ ನಿವೃತ್ತ ಉಪ ಕಾರ್ಯದರ್ಶಿಗಳಾದ ಬಿ.ಕೆ. ಹಿರೇಮಠ, ಮಲ್ಲಿನಾಥ ಹಿರೇಮಠ ಹಾರಕೂಡ, ಡಾ. ಶಿವಶರಣಯ್ಯ ಮಠಪತಿ, ಹೇಮಲತಾ ಎಂ. ಹಿರೇಮಠ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).

## ರಾಜ್ಯದ ವೈದ್ಯಕೀಯ ಶಿಕ್ಷಣ ಸಚಿವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.24-ರಾಜ್ಯದವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆಮತ್ತುಜೀವನೋಪಾಯ ಸಚಿವರಾದಡಾ.ಶರಣಪ್ರಕಾಶಆರ್. ಪಾಟೀಲ್ ಅವರು ಬೀದರದಿಂದ ರಸ್ತೆ ಮೂಲಕ ಅಕ್ಟೋಬರ್ 26 ರಂದು ಭಾನುವಾರ ಬೆಳಿಗ್ಗೆ 11.30 ಗಂಟೆಗೆ ಕಲಬುರಗಿಗೆ ಆಗಮಿಸಿ, ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ವಾಸ್ತವ್ಯ ಮಾಡುವರು.

ಅಕ್ಟೋಬರ್ 27ರಂದುಸೋಮವಾರ ಹಾಗೂ ಅಕ್ಟೋಬರ್ 28 ರಂದು ಮಂಗಳವಾರ ಕಲಬುರಗಿಯಲ್ಲಿ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ವಾಸ್ತವ್ಯ ಮಾಡುವರು.

ಅಕ್ಟೋಬರ್ 29 ರಂದು ಬುಧವಾರ ಬೆಳಿಗ್ಗೆ 5 ಗಂಟೆಗೆ ಕಲಬುರಗಿಯಿಂದ ರಸ್ತೆ ಮೂಲಕ ಬೀದರಿಗೆ ಪ್ರಯಾಣಿಸಿ, ನಂತರ ಬೆಳಿಗ್ಗೆ 8 ಗಂಟೆಗೆ ಬೀದರಿಂದ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

## ಕಲಬುರಗಿ-ವಾಸ್ಕೊ ಹಾಗೂ ಕಲಬುರಗಿ-ಪಣಜಿ ಮಾರ್ಗದಲ್ಲಿ ಅಮೋಘವರ್ಷ (ನಾನ್ ಎಸಿ ಸ್ಲೀಪರ್) ಸಾರಿಗೆ ಕಾರ್ಯಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.24-ಸಾರ್ವಜನಿಕ ಪ್ರಯಾಣಿಕರ ಬೇಡಿಕೆ ಮೇರೆಗೆ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಕಲಬುರಗಿ ವಿಭಾಗ-1 (ಕಲಬುರಗಿ ಘಟಕ-1)ರ ವತಿಯಿಂದ ಕಲಬುರಗಿಯಿಂದ ವಾಸ್ಕೊಪ್ರಯಾಣಿಸುವ ಪ್ರಯಾಣಿಕರ ಅನುಕೂಲಕ್ಕಾಗಿ ಇದೇ ಅಕ್ಟೋಬರ್ 25 ರಿಂದ ಕಲಬುರಗಿ-ವಾಸ್ಕೊ-ಕಲಬುರಗಿ ಹಾಗೂ ಕಲಬುರಗಿ-ಪಣಜಿ-ಕಲಬುರಗಿ ಮಾರ್ಗಗಳ ಮಧ್ಯದಲ್ಲಿ ಅಮೋಘವರ್ಷ (ನಾನ್ ಎಸಿ ಸ್ಲೀಪರ್) ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ ಎಂದು ಕಲಬುರಗಿ ವಿಭಾಗ-1ರ ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ. ಕಲಬುರಗಿ-ವಾಸ್ಕೋ-ಕಲಬುರಗಿ: ಈ ಬಸ್ಸು ಕಲಬುರಗಿ ಬಸ್ ನಿಲ್ದಾಣದಿಂದ ಸಂಜೆ 4.30 ಗಂಟೆಗೆ ಹೊರಟು ಮರುದಿನ ಬೆಳಿಗ್ಗೆ 6.30 ಗಂಟೆಗೆ ವಾಸ್ಕೋಗೆ ತಲುಪಲಿದೆ. ಅದೇ ರೀತಿ ಈ ಬಸ್ ವಾಸ್ಕೋ ಬಸ್ ನಿಲ್ದಾಣದಿಂದ ಸಂಜೆ 6.15 ಗಂಟೆಗೆ ಹೊರಟು ಮರುದಿನ ಬೆಳಿಗ್ಗೆ 8.15 ಗಂಟೆಗೆ ಕಲಬುರಗಿಗೆ ತಲುಪಲಿದೆ. ಈ ಬಸ್ಸು ವ್ಹಾಯಾ: ಶಹಾಪೂರ, ಹುಣಸಗಿ, ತಾಳಿಕೋಟಿ, ಮುದ್ದೇಬಿಹಾಳ, ಬಾಗಲಕೋಟ, ಬೆಳಗಾವಿ, ಪೊಂಡಾ, ಮಡಗಾಂವ ಮಾರ್ಗವಾಗಿ ಸಂಚರಿಸಲಿದೆ.

ಕಲಬುರಗಿ-ಪಣಜಿ-ಕಲಬುರಗಿ: ಈ ಬಸ್ಸು ಕಲಬುರಗಿ ಬಸ್ ನಿಲ್ದಾಣದಿಂದ ಸಂಜೆ 6 ಗಂಟೆಗೆ ಹೊರಟು ಮರುದಿನ ಬೆಳಿಗ್ಗೆ 6.15 ಗಂಟೆಗೆ ಪಣಜಿಗೆ ತಲುಪಲಿದೆ. ಅದೇ ರೀತಿ ಈ ಬಸ್ ಸಂಜೆ 6 ಗಂಟೆಗೆ ಪಣಜಿ ಬಸ್ ನಿಲ್ದಾಣದಿಂದ ಹೊರಟು ಮರುದಿನ ಬೆಳಿಗ್ಗೆ 6.15 ಗಂಟೆಗೆ ಕಲಬುರಗಿಗೆ ತಲುಪಲಿದೆ. ಈ ಬಸ್ಸು ಅಫಜಲಪುರ, ಸಿಂದಗಿ, ವಿಜಯಪುರ, ಬೆಳಗಾವಿ, ಪೊಂಡಾ ಮಾರ್ಗವಾಗಿ ಸಂಚರಿಸಲಿದೆ. ಸಾರ್ವಜನಿಕ ಪ್ರಯಾಣಿಕರು ಈ ಸಾರಿಗೆಗಳ ಸದುಪಯೋಗ ಪಡೆದುಕೊಳ್ಳಬೇಕೆಂದು ಅವರು ತಿಳಿಸಿದ್ದಾರೆ.

## ಅತ್ಯುತ್ತಮ ಸಾಧನೆಗೈದ ಪ್ರಗತಿಪರ ರೈತರಿಗೆ ಕೃಷಿ ರತ್ನ ಪ್ರಶಸ್ತಿ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.24-ರಾಯಚೂರಿನಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ 17ನೇ ಸಂಸ್ಥಾಪನಾದಿನಾಚರಣೆಯನ್ನು ನವೆಂಬರ್ 22ರಂದು ಹಮ್ಮಿಕೊಳ್ಳಲಾಗುತ್ತಿರುವ ಪ್ರಯುಕ್ತ ಕಲ್ಯಾಣ ಕರ್ನಾಟಕ ಭಾಗದ ಅತ್ಯುತ್ತಮ ಸಾಧನೆಗೈದ ಪ್ರಗತಿಪರ ಕೃಷಿಕರಿಗೆ 2024-25ನೇ ಸಾಲಿಗೆ ಕೃಷಿ ರತ್ನ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುತ್ತಿದೆ. ಈ ಪ್ರಶಸ್ತಿಗಾಗಿ ಕಲ್ಯಾಣ ಕರ್ನಾಟಕ ಭಾಗದ ರೈತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ರಾಯಚೂರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕರು ತಿಳಿಸಿದ್ದಾರೆ.

ಆಸಕ್ತ ರೈತರು ನಿಗದಿತ ಅರ್ಜಿ ನಮೂನೆಯನ್ನು ಆಯಾ ಜಿಲ್ಲೆಗಳ ಕೃಷಿ ವಿಜ್ಞಾನ ಕೇಂದ್ರ, ರಾಯಚೂರಿನ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ ಹಾಗೂ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ ಅಥವಾ ವಿಶ್ವವಿದ್ಯಾಲಯದ್ಯುಣಣಘಿ://ಣಾಛಿ-ಡಿಚುಛಿಣಡಿ.ಇಚಿಡಿಟಚಿಣಚಿಞಚಿ.ರಿಠಿ.ಎಟಿ ವೆಬ್‌ಸೈಟ್‌ದಿಂದ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಸಂಬಂಧಪಟ್ಟ ಎಲ್ಲಾ ದಾಖಲೆಗಳೊಂದಿಗೆ ಅರ್ಜಿಯನ್ನು 2025ರ ನವೆಂಬರ್ 10ರ ಸಂಜೆ 5 ಗಂಟೆಯೊಳಗಾಗಿ ಆಯಾ ಜಿಲ್ಲೆಗಳ ಕೃಷಿ ವಿಜ್ಞಾನ ಕೇಂದ್ರಗಳ ಮುಖ್ಯಸ್ಥರಿಗೆ ಅಥವಾ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರಗಳ ಮುಖ್ಯಸ್ಥರ ಕಚೇರಿಯಲ್ಲಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರು, ಕೃಷಿ ವಿಜ್ಞಾನ ಕೇಂದ್ರ, ರಾಯಚೂರು, ಬೀದರ, ಕಲಬುರಗಿ, ರದ್ದೇವಾಡಗಿ, ಕೊಪ್ಪಳ (ಗಂಗಾವತಿ), ಯಾದಗಿರಿ (ಕವಡಿಮಟ್ಟಿ), ಬಳ್ಳಾರಿ (ಹಗರಿ) ಮತ್ತು ಮುಖ್ಯಸ್ಥರು, ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ, ಭೀಮರಾಯನಗುಡಿ, ಲಿಂಗಸೂಗೂರು, ಕೊಪ್ಪಳ, ನಾಲವಾರ, ದೇವದುರ್ಗ, ವಿಜಯನಗರ (ಹೂವಿನಹಡಗಲಿ) ಇವರನ್ನು ಸಂಪರ್ಕಿಸಬೇಕು. ದೂರವಾಣಿ ಸಂಖ್ಯೆಗಳು: 9480696314/315/316/317/318/319/334/335/336 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

## ಇ-ಸ್ವತ್ತು ಅಭಿಯಾನ:1 ಕೋಟಿ ಡಿಜಿಟಲ್ ಪ್ರಮಾಣ ಪತ್ರ ವಿತರಣೆ ಗುರಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.24:ಗ್ರಾಮೀಣ ಭಾಗಗಳಲ್ಲಿ ಆಸ್ತಿ ಪ್ರಮಾಣ ಪತ್ರ ಪಡೆಯಲು ಸುಲಭವಾಗುವಂತೆ ಸರ್ಕಾರವು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025 ನ್ನು ಜಾರಿಗೊಳಿಸಿದೆ. ಈ ನಿಯಮಗಳ ಜಾರಿಯಿಂದ ಇ-ಸ್ವತ್ತು ಅಭಿಯಾನಕ್ಕೆ ರೆಕ್ಕೆ ಬಂದಿದ್ದು, ಒಂದು ಕೋಟಿ ಗ್ರಾಮೀಣ ಆಸ್ತಿಗಳಿಗೆ ಡಿಜಿಟಲ್ ಆಸ್ತಿ ಪ್ರಮಾಣ ಪತ್ರ ವಿತರಿಸುವ ಗುರಿ ಸಾಧ್ಯವಾಗಲಿದೆ.

## ಶ್ರೀಪತ ಯೋಗಿ ಮಹಾರಾಜರ ತತ್ವಾದರ್ಶಗಳು ಪ್ರತಿಯೊಬ್ಬರು ಪಾಲಿಸಿ:ಮನೋಹರ ಜಾಧವ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ತಾಲ್ಲೂಕಿನ ಸಿಂಧನಕೇರಾ ಗ್ರಾಮದ ಹತ್ತಿರವಿರುವ ಪವಾಡ ಪುರುಷ ಶ್ರೀಪತ ಯೋಗಿ ಮಹಾರಾಜರ 61ನೇ ಆರಾಧನಾ ಕಾರ್ಯಕ್ರಮವನ್ನು ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಅತಿ ವಿಜೃಂಭಣೆಯಿಂದ ನೆರವೇರಿಸಲಾಯಿತು. ಶುಕ್ರವಾರರಂದು ಮಧ್ಯಾಹ್ನ ವಿಶೇಷ ಪೂಜೆಯಲ್ಲಿ ಪಾಲ್ಗೊಂಡ ಭಕ್ತರು ಪ್ರಹಾ ಪ್ರಸಾದ ಸ್ವೀಕರಿಸಿ ಧನ್ಯರಾದರು. ಹಲವಾರು ಲೀಲೆ, ಪವಾಡಗಳಿಂದ ಭಕ್ತರ ಮನದಲ್ಲಿ ಶಾಶ್ವತವಾಗಿ ಉಳಿದುಕೊಂಡ ಶ್ರೀಪತ ಯೋಗಿ ಮಹಾರಾಜರು ಒಬ್ಬರಾಗಿದ್ದಾರೆ. ಇವರ ಗದ್ದುಗೆಗೆ ದಿನನಿತ್ಯ ಬೆಳಿಗ್ಗೆ ಪೂಜೆಸಲ್ಲಪಡುತ್ತದೆ. ಆರಾಧನಾ ದಿನವು ಧಾರ್ಮಿಕ ಆಚರಣೆ ಮಾತ್ರವಲ್ಲ, ಅದು ಶೃದ್ಧೆ,



ಶಾಂತಿ ಮತ್ತು ಧರ್ಮದ ಬೆಳಕನ್ನು ಹರಡುವ ಪವಿತ್ರ ದಿನವಾಗಿದೆ. ಸದ್ಭಕ್ತರು ಶ್ರೀಪತ ಯೋಗಿ ಮಹಾರಾಜರ ತತ್ವಾದರ್ಶಗಳನ್ನು ಅನುಸರಿಸಬೇಕೆಂದು ಮನೋಹರ ಜಾಧವ ತಿಳಿಸಿದರು. ಹಾಗೂ ಭಕ್ತರಿಂದ ರಾತ್ರಿ ಇಡಿ ಭಜನೆ ಕೀರ್ತನೆಗಳೊಂದಿಗೆ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲಾಯಿತು. ಈ ಸಂದರ್ಭದಲ್ಲಿ ಸುಧಾಕರರಾವ್ ಜಾಧವ್, ದೇವಕರ್ ಜಾಧವ್, ಪ್ರಭಾಕರ್ ಜಾಧವ್, ಗಂಗಾರಾಮ್ ಜಾಧವ್, ನಾಗೇಂದ್ರ ಜಾಧವ್, ರಮೇಶ ಜಾಧವ್, ವಿನಾಯಕ ಜಾಧವ್, ತುಳಜಾರಾಮ್ ಜಾಧವ್, ಶಿವರಾಮ್ ಜಾಧವ್, ಮಛೇಂದ್ರ ಜಾಧವ್, ಶೈಲೇಶ್ ಜಾಧವ್, ಜ್ಞಾನದೇವ ಧುಮಾಳೆ, ಆಶ್ರಯ ದೀಪ ಚಾರಿಟೇಬಲ್ ಟ್ರಸ್ಟ್‌ನ ಅಧ್ಯಕ್ಷ ಭೀಮರೆಡ್ಡಿ ಸಿಂಧನಕೇರಾ, ಉಪಾಧ್ಯಕ್ಷ ಅರವಿಂದ ಜೋಗಿರೆ, ಹಾಗೂ ಮಹಿಳೆಯರು, ಚಿಕ್ಕಮಕ್ಕಳು ಉಪಸ್ಥಿತರಿದ್ದರು. ಕೊನೆಯಲ್ಲಿ ಭಕ್ತಾದಿಗಳು ಶ್ರೀಪತ ಯೋಗಿ ಮಹಾರಾಜರ ಮಂದಿರದಲ್ಲಿ ಟೆಂಗು ಕರ್ಪೂರ ಆರತಿ ಬೆಳಗಿಸಿ ಪ್ರಸಾದ ಸ್ವೀಕರಿಸಿ ದರ್ಶನ ಪಡೆದು ಪುನಿತರಾದರು.

ಅಕ್ಟೋಬರ್ 27 ಮತ್ತು 30 ಹಾಗೂ ನವೆಂಬರ್ 3 ರಂದು

## ಜಿಲ್ಲೆಯಾದ್ಯಂತ ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನ -ಬಿ.ಫೌಜಿಯಾ ತರನ್ನುಮ್

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.24-ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಈಗಾಗಲೇ ಆರಂಭವಾಗಿದ್ದು, ಇದೇ ಅಕ್ಟೋಬರ್ 27 ಮತ್ತು 30 ಹಾಗೂ ನವೆಂಬರ್ 3ರಂದು ಕಲಬುರಗಿ ಜಿಲ್ಲೆಯಾದ್ಯಂತ ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಈಶಾನ್ಯ ಶಿಕ್ಷಕರ ಕ್ಷೇತ್ರದ ಎಲ್ಲಾ ಮತದಾರರರು ಈ ಅಭಿಯಾನವನ್ನು ಯಶಸ್ವಿಗೊಳಿಸಬೇಕೆಂದು ಕ್ಷೇತ್ರದ ಸಹಾಯಕ ಮತದಾರರ ನೊಂದಣಾಧಿಕಾರಿಯಾಗಿರುವ ಕಲಬುರಗಿ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ತಿಳಿಸಿದ್ದಾರೆ.



01.11.2025ಕ್ಕೆ ಅರ್ಹತಾ ದಿನಾಂಕಕ್ಕೆ ಅನ್ವಯಿಸುವಂತೆ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಕ್ಷೇತ್ರದಾದ್ಯಂತ ನಡೆದಿದ್ದು, ಅರ್ಹ ಮತದಾರರು ಪಟ್ಟಿಯಲ್ಲಿ ಹೆಸರು ಸೇರ್ಪಡೆಗೆ ನವೆಂಬರ್ 6 ಕೊನೆಯ ದಿನವಾಗಿರುತ್ತದೆ. ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯಬಾರದು ಎಂಬ ಉದ್ದೇಶದಿಂದ ಈ ಮತದಾರರ ವಿಶೇಷ ನೊಂದಣಿ ಆಯೋಜಿಸಿದ್ದು, ಶಿಕ್ಷಕ ಮತದಾರರು ಇದರ ಲಾಭ ಪಡೆಯುವಂತೆ ಅವರು ಮನವಿ ಮಾಡಿದ್ದಾರೆ.

ಯಾವುದೇ ಒಂದು ಚುನಾವಣೆಯು ಪಾರದರ್ಶಕವಾಗಿ, ನ್ಯಾಯಸಮ್ಮತವಾಗಿ, ಯಾವುದೇ ಅಹಿತಕರ ಘಟನೆಗೆ ಆಸ್ಪದ ನೀಡದೆ ಶಾಂತಿಯುತವಾಗಿ ನಡೆಯಬೇಕಾದಲ್ಲಿ ದೋಷರಹಿತ ಮತದಾರರ ಪಟ್ಟಿ ತಯಾರಿಸುವುದು ಅತ್ಯಗತ್ಯವಾಗಿರುತ್ತದೆ. ಈರೀತಿ ಮತದಾರರ ಪಟ್ಟಿ ಸಿದ್ಧಪಡಿಸಬೇಕಾದಲ್ಲಿ ಅರ್ಹ ಮತದಾರರು ನೊಂದಾಯಿಸುವುದು ಅವಶ್ಯಕವಾಗಿರುತ್ತದೆ. ಸುಭದ್ರ ಮತ್ತು ಪ್ರಜಾಪ್ರಭುತ್ವ ವ್ಯವಸ್ಥೆ ಬಲಪಡಿಸುವ ನಿಟ್ಟಿನಲ್ಲಿ ಜಿಲ್ಲಾಯಾದ್ಯಂತ ವಾಸವಿರುವ ಎಲ್ಲಾ ಅರ್ಹ ಮತದಾರರು ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಗೆ ಹೆಸರು ಸೇರಿಸಿಕೊಳ್ಳಬೇಕೆಂದು ಡಿ.ಸಿ. ಬಿ.ಫೌಜಿಯಾ ತರನ್ನುಮ್ ಕೋರಿದ್ದಾರೆ.

## ಪ್ರಿಯಾಂಕ್ ಖರ್ಗೆ ಕೊಲೆ ಬೆದರಿಕೆ ಪ್ರಕರಣ ಪ್ರತಿಭಟನೆಯಲ್ಲಿ ರಾಜಶೇಖರ ಪಾಟೀಲ ಭಾಗವಹಿಸದಿದಕ್ಕೆ ಖಂಡನೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಸಚಿವ ಪ್ರಿಯಾಂಕ ಖರ್ಗೆ ಅವರಿಗೆ ಜೀವ ಬೆದರಿಕೆ ಪ್ರಕರಣ ಖಂಡಿಸಿ ಪಟ್ಟಣದಲ್ಲಿ ವಿವಿಧ ದಲಿತ ಸಂಘಟನೆಗಳು ಹಾಗೂ ಬ್ಲಾಕ್ ಕಾಂಗ್ರೆಸ್ ಬೆಂಬಲಿತ ಹೋರಾಟದಲ್ಲಿ ಮಾಜಿ ಮಂತ್ರಿ ರಾಜಶೇಖರ್ ಪಾಟೀಲ್ ಭಾಗವಹಿಸದೇ ಇದ್ದುದಕ್ಕಾಗಿ ದಲಿತ ಮುಖಂಡ ಗೌತಮ್ಮ ಶೆಡೋಳ ಶುಕ್ರವಾರಂದು ಕರೆದ ಪತ್ರಿಕಾಗೋಷ್ಠಿಯಲ್ಲಿ ತೀವ್ರವಾಗಿ ಖಂಡಿಸಿದ್ದಾರೆ. ಮಲ್ಲಿಕಾರ್ಜುನ ಖರ್ಗೆಯವರ ಆಶೀರ್ವಾದದಿಂದ ಹಲವಾರು ಸ್ಥಾನಮಾನಗಳು ಪಡೆದಿರುವ ರಾಜಶೇಖರ್ ಪಾಟೀಲ್ ಅವರು ಪ್ರಿಯಾಂಕ್ ಖರ್ಗೆ ವಿರುದ್ಧ ರಾಜ್ಯಾದ್ಯಂತ ಪ್ರತಿಭಟನೆ ನಡೆದಿರುವ ಸಂದರ್ಭದಲ್ಲಿ ಹುಮ್ನಾಬಾದ್ ಪಟ್ಟಣದಲ್ಲಿ ನಡೆದಿರುವ ಪ್ರತಿಭಟನೆಯಲ್ಲಿ ರಾಜಶೇಖರ್ ಪಾಟೀಲ್ ಅವರು ಪ್ರತಿಭಟನೆಯಲ್ಲಿ ಭಾಗವಹಿಸದೆ ಇದ್ದುದಕ್ಕಾಗಿ ಖರ್ಗೆಯವರ ಕುಟುಂಬಕ್ಕೆ ಅನ್ಯಾಯ ಮಾಡಿದ್ದಾರೆ ಎಂದು ಗೌತಮ್ಮ ಶೆಡೋಳ ಪತ್ರಿಕಾಗೋಷ್ಠಿಯಲ್ಲಿ ಖಂಡಿಸಿದ್ದಾರೆ. ಚುನಾವಣೆ ಸಂದರ್ಭದಲ್ಲಿ ಖರ್ಗೆಯವರ ಆಶೀರ್ವಾದದಿಂದ ಅತಿ ಹೆಚ್ಚು ಮತವನ್ನು ಪಡೆದು ಆಯ್ಕೆಯಾಗುತ್ತಿರುವ ರಾಜಶೇಖರ ಪಾಟೀಲರವರಿಗೆ ಮುಂದಿನ ಚುನಾವಣೆಯಲ್ಲಿ ದಲಿತ ಬಾಂಧವರು ಪಾಠ ಕಲಿಸುತ್ತಾರೆ ಎಂದು ತಿಳಿಸಿದ್ದಾರೆ. ಪ್ರಿಯಾಂಕ್ ಖರ್ಗೆ ಅವರ ಕೊಲೆ ಬೆದರಿಕೆ ಪ್ರಕರಣದ ಬಗ್ಗೆ ಪ್ರತಿಭಟನೆ ಭಾಗವಹಿಸಿದೆ ಮೌನವಾಗಿ ಉಳಿದಿದ್ದನ್ನು ತೀವ್ರವಾಗಿ ಶಶಿಕಾಂತ್ ಭಂಡಾರಿ. ತುಕಾರಾಂ ಸೋನಕೇರಾ ಪಂಢಾರಿ ಕಾಂಬಳೆ ಉಪಸ್ಥಿತರಿದ್ದರು.

## ದೀಪಾವಳಿ ಹಬ್ಬ: ಕಲಬುರಗಿ-ಬೆಂಗಳೂರು ನಡುವೆ ವಿಶೇಷ ರೈಲುಗಳ ಸೇವೆಯು ಮುಂದುವರಿಕೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.24-2025ರದೀಪಾವಳಿ ಹಬ್ಬದ ಸಮಯದಲ್ಲಿ ಪ್ರಯಾಣಿಕರ ದಟ್ಟಣೆಯನ್ನುಗಮನದಲ್ಲಿಟ್ಟುಕೊಂಡು, ರೈಲ್ವೆ ಇಲಾಖೆಯು ಕಲಬುರಗಿ-ಬೆಂಗಳೂರು ಕಂಟೋನ್ಮೆಂಟ್ ಮತ್ತು ಯಶವಂತಪುರ ನಡುವೆ ಸಂಚರಿಸಲಿರುವ ವಿಶೇಷ ರೈಲುಗಳ ಸೇವೆಯನ್ನು ಮುಂದುವರೆಸಲಾಗಿದೆ ಎಂದು ಕೇಂದ್ರ ರೈಲ್ವೆಯ ಸೋಲಾಪುರ ವಿಭಾಗದ ಸಾರ್ವಜನಿಕ ಸಂಪರ್ಕ ಇಲಾಖೆಯು ಹೊರಡಿಸಿರುವ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಬೆಂಗಳೂರು ಕಂಟೋನ್ಮೆಂಟ್-ಕಲಬುರಗಿ ವಿಶೇಷ ರೈಲು (ರೈಲು ಸಂಖ್ಯೆ 06203) ಹಾಗೂ ಕಲಬುರಗಿ-ಯಶವಂತಪುರ ವಿಶೇಷ ರೈಲು (ರೈಲು ಸಂಖ್ಯೆ 06204) ಇದೇ ಅಕ್ಟೋಬರ್ 26 ರಂದು ಸಂಚರಿಸಲಿದೆ.

ಬೆಂಗಳೂರು ಕಂಟೋನ್ಮೆಂಟ್-ಕಲಬುರಗಿ ವಿಶೇಷ ರೈಲು (ರೈಲು ಸಂಖ್ಯೆ 06207) ಈ ರೈಲಿನ ಸೇವೆಯು ಅಕ್ಟೋಬರ್ 27 ರಂದು ಹಾಗೂ ಕಲಬುರಗಿ-ಬೆಂಗಳೂರು ಕಂಟೋನ್ಮೆಂಟ್ ವಿಶೇಷ ರೈಲುಗಳು (ರೈಲು ಸಂಖ್ಯೆ 06208) ಅಕ್ಟೋಬರ್ 28 ರಂದು ಸಂಚರಿಸಲಿದೆ.

ಬೆಂಗಳೂರು ಕಂಟೋನ್ಮೆಂಟ್-ಕಲಬುರಗಿ ವಿಶೇಷ ರೈಲು (ರೈಲು ಸಂಖ್ಯೆ 06209) ಅಕ್ಟೋಬರ್ 28 ರಂದು ಹಾಗೂ ಕಲಬುರಗಿ - ಬೆಂಗಳೂರು ಕಂಟೋನ್ಮೆಂಟ್ (ರೈಲು ಸಂಖ್ಯೆ 06210) ಈ ವಿಶೇಷ ರೈಲುಗಳು ಅಕ್ಟೋಬರ್ 29 ರಂದು ಸಂಚರಿಸಲಿದೆ. ಮೇಲಿನ ವಿಶೇಷ ರೈಲುಗಳ ನಿಲುಗಡೆ ಸಮಯದಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ವಿಶೇಷ ಶುಲ್ಕದ ಮೇಲೆ ವಿಶೇಷ ರೈಲುಗಳಿಗೆ ಬುಕಿಂಗ್‌ಗಳು ಎಲ್ಲಾ ಗಣಕೀಕೃತ ಕೇಂದ್ರಗಳಲ್ಲಿ ಮತ್ತು www.irctc.co.in ವೆಬ್‌ಸೈಟ್‌ದಲ್ಲಿ ಮಾಡಬಹುದಾಗಿದೆ. ಕಾಯ್ದಿರಿಸದ ಬೋಗಿಗಳಿಗೆ ಬುಕಿಂಗ್‌ಗಳನ್ನು ನಿಲ್ದಾಣಗಳಲ್ಲಿನ ಬುಕಿಂಗ್ ಕೌಂಟರ್‌ಗಳಲ್ಲಿ ಮತ್ತು ಯುಟಿಎಸ್ (ಗಖಿಖ) ಅಪ್ಲಿಕೇಶನ್ ಮೂಲಕವೂ ಮಾಡಬಹುದು.

ಆದ್ದರಿಂದ ಪ್ರಯಾಣಿಕರು ಅನಾನುಕೂಲತೆಗಳನ್ನು ತಪ್ಪಿಸಲು ತಪ್ಪಿದೇ ಟಿಕೆಟ್ ಪಡೆದು ಪ್ರಯಾಣಿಸಬೇಕು. ಈ ವಿಶೇಷ ರೈಲುಗಳ ನಿಲುಗಡೆ, ವಿವರವಾದ ಸಮಯದ ಕುರಿತು ಹೆಚ್ಚಿನ ಮಾಹಿತಿಗಾಗಿ www.enquiry.indianrail.gov.in ಗೆ ಭೇಟಿ ನೀಡಿ ಅಥವಾ ಎನ್.ಟಿ.ಇ.ಎಸ್. (NTES) ಅಪ್ಲಿಕೇಶನ್ ಡೌನ್‌ಲೋಡ್ ಮೂಲಕ ಮಾಡಬಹುದಾಗಿದೆ.

ಅರ್ಜಿಯಲ್ಲಿ ಯಾವುದೇ ತಪ್ಪು ಅಥವಾ ದೋಷಗಳು ಇದ್ದಲ್ಲಿ

## ಸರಿಪಡಿಸಿಕೊಳ್ಳಲು ಅಕ್ಟೋಬರ್ 26 ರವರೆಗೆ ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.24-ನವೋದಯ ವಿದ್ಯಾಲಯ ಸಮಿತಿ ವತಿಯಿಂದ 2026-27ನೇ ಸಾಲಿನಲ್ಲಿ 9ನೇ ಹಾಗೂ 11ನೇ ತರಗತಿಯ ಪ್ರವೇಶಕ್ಕೆ ಸಂಬಂಧಿಸಿದಂತೆ ವಿದ್ಯಾರ್ಥಿಗಳಿಂದ ಅರ್ಜಿ ಸಲ್ಲಿಕೆ ಪ್ರಕ್ರಿಯೆಯು 23-10-2025 ರಂದು ಪೂರ್ಣಗೊಂಡಿದ್ದು, ಇದೀಗ ಅರ್ಜಿಯಲ್ಲಿ ಯಾವುದೇ ತಪ್ಪು ಅಥವಾ ದೋಷಗಳನ್ನು ಸರಿಪಡಿಸಿಕೊಳ್ಳಲು 2025ರ ಅಕ್ಟೋಬರ್ 26 ರವರೆಗೆ ಶುದ್ಧೀಕರಣ ವಿಂಡೋ ತೆರೆದಿರುತ್ತದೆ ಎಂದು ತಾಡತೆಗನೂರ (ಕಲಬುರಗಿ-01) ಜವಾಹರ ನವೋದಯ ವಿದ್ಯಾಲಯದ ಪ್ರಾಚಾರ್ಯರು ತಿಳಿಸಿದ್ದಾರೆ.


ಅರ್ಜಿದಾರರು ತಾವು ಅರ್ಜಿ ಸಲ್ಲಿಸಿದ ಮಾಹಿತಿಯಲ್ಲಿ ಯಾವುದೇ ತಪ್ಪುಗಳು ಇದ್ದಲ್ಲಿ ಅಥವಾ ದೋಷಗಳನ್ನು ಇದ್ದಲ್ಲಿ ಶುದ್ಧೀಕರಣ (ಅಂಡಿಡಿಜಛಿಣುಂಟ) ಮಾಡಲು (ಸರಿಪಡಿಸಿಕೊಳ್ಳಲು) 2025ರ ಅಕ್ಟೋಬರ್ 26 ರವರೆಗೆ ಅವಕಾಶ ನೀಡಲಾಗಿದೆ. ಕೊನೆಯ ದಿನಾಂಕದ ನಂತರ ಯಾವುದೇ ಬದಲಾವಣೆಗಳನ್ನು ಮಾಡಲು ಅವಕಾಶ ಇರುವುದಿಲ್ಲ. ಆದ್ದರಿಂದ ಈ ವಿದ್ಯಾಲಯದ ವ್ಯಾಪ್ತಿಗೊಳಪಡುವ ಅಳಂದ, ಆಫಜಲಪುರ, ಜೇವರ್ಗಿ, ಕಲಬುರ್ಗಿ ಉತ್ತರ ಹಾಗೂ ಕಲಬುರಗಿ ದಕ್ಷಿಣ ತಾಲೂಕುಗಳ ವಿದ್ಯಾರ್ಥಿಗಳು ಮತ್ತು ಪೋಷಕರು ಇದರ ಸದುಪಯೋಗ ಪಡೆಯಬೇಕೆಂದು ಅವರು ತಿಳಿಸಿದ್ದಾರೆ.

## ನ. 1ರಂದು ಲಿಂಗ ದೀಕ್ಷೆ ಇಷ್ಟಲಿಂಗ ಪೂಜೆ

ಮಲ್ಲಮ್ಮ ನುಡಿ ವಾರ್ತೆ


ಕಲಬುರಗಿ: ನವೆಂಬರ್ 1 ರಂದು ಶ್ರೀ ಶರಣಬಸವೇಶ್ವರ ಸಂಸ್ಥಾನದ ಪೀಠಾಧಿಪತಿಗಳಾದ ಚಿ. ದೊಡ್ಡಪ್ಪಅಪ್ಪಾಜಿ ಅವರ ಜನ್ಮದಿನದ ಪ್ರಯುಕ್ತ ಶ್ರೀ ಶರಣಬಸವೇಶ್ವರ ಗದ್ದುಗೆಗೆ ಲಕ್ಷ ಪುಷ್ಪ ಬಿಲ್ವಾ ಅರ್ಚನೆ, ಲಿಂಗ ದೀಕ್ಷೆ, ಇಷ್ಟಲಿಂಗ ಪೂಜೆ ಹಾಗೂ ನಡೆಯಲಿದೆ ಎಂದು ವೀರಶೈವ ಲಿಂಗಾಯತ ಮಹಾ ವೇದಿಕೆ ತಿಳಿಸಿದೆ.

ವೇದಿಕೆಯ ರಾಜ್ಯಾಧ್ಯಕ್ಷ ಪ್ರಶಾಂತ್ ಕಲ್ಲೂರ್ ನೇತೃತ್ವದ ವೀರಶೈವ ಲಿಂಗಾಯತ ಮಹಾ ವೇದಿಕೆ (ರಿ) ಜಿಲ್ಲಾ ಸಮಿತಿ ವತಿಯಿಂದ ಎಂಟನೇ ಪೀಠಾಧಿಪತಿಗಳಾದ ಪೂಜ್ಯ ಡಾ.ಶ್ರೀ ಶರಣಬಸಪ್ಪ ಅಪ್ಪ ಹಾಗೂ ಪೂಜ್ಯ ಒಂಬತ್ತನೇ ಪೀಠಾದೀಪತಿಗಳಾದ ಪೂಜ್ಯ ಶ್ರೀ ಚಿರಂಜೀವಿ ದೊಡ್ಡಪ್ಪ ಅಪ್ಪ ಅವರ ಜನ್ಮದಿನದ ಅಂಗವಾಗಿ ಪ್ರತಿ ವರ್ಷದಂತೆ ತೃತೀಯ ವರ್ಷದಂದು ಶ್ರೀ ಶರಣಬಸವೇಶ್ವರ ಗದ್ದುಗೆ ಒಂದು ಲಕ್ಷ ಪುಷ್ಪ ಬಿಲ್ವಾರ್ಚನೆ, ಲಿಂಗದೀಕ್ಷೆ ಮತ್ತು



1001 ಸಾಮೂಹಿಕ ಇಷ್ಟಲಿಂಗ ಪೂಜೆ ಹಾಗೂ ಜಂಗಮ ವಟುಗಳಿಗೆ ಅಯ್ಯಚಾರ ಕಾರ್ಯಕ್ರಮವನ್ನು ವೇದಿಕೆ ವತಿಯಿಂದ ಹಮ್ಮಿಕೊಳ್ಳಲಾಗಿದೆ. ಆದ್ದರಿಂದ ಕಾರ್ಯಕ್ರಮಕ್ಕೆ ಜಿಲ್ಲೆಯ ಹೆಚ್ಚಿನ ಜನರು ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಯುವ ಮುಖಂಡ ಶ್ರೀಧರ್ ನಾಗನಹಳ್ಳಿ, ವೇದಿಕೆಯ ಜಿಲ್ಲಾಧ್ಯಕ್ಷ ದಯಾನಂದ ಪಾಟೀಲ್, ಉಪಾಧ್ಯಕ್ಷ ಕಲ್ಯಾಣರಾವ್ ಪಾಟೀಲ್ ಕಣ್ಣಿ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಶ್ರೀ ಮರಿಯಮ್ಮದೇವಿ ಮತ್ತು ಶ್ರೀ ಸೇವಾಲಾಲ ಮಹಾರಾಜರ ನೂತನ ದೇವಸ್ಥಾನ, ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಶಹಾಬಾದ ರಸ್ತೆಯ ಶ್ರೀ ಸೇವಾಲಾಲ ನಗರ, ನೃಪತುಂಗ ಕಾಲೋನಿ ಹತ್ತಿರ ಶ್ರೀ ಮರಿಯಮ್ಮ ದೇವಿ ಮತ್ತು ಶ್ರೀ ಸೇವಾಲಾಲ ಮಹಾರಾಜರ ದೇವಸ್ಥಾನದ ಶ್ರೀ ಮರಿಯಮ್ಮದೇವಿ ಮತ್ತು ಶ್ರೀ ಸೇವಾಲಾಲ ಮಹಾರಾಜರ ನೂತನ ದೇವಸ್ಥಾನ, ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ ಕಾರ್ಯಕ್ರಮ ಹಾಗೂ ಧಾರ್ಮಿಕ ಕಾರ್ಯಕ್ರಮವನ್ನು ಮಠಾಧಿಶರು, ಗಣ್ಯರು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಸುಕ್ಷೇತ್ರ ಮುಗಳನಾಗಾವಿಯ ಪರಮ ಪೂಜ್ಯ ಶ್ರೀ ಷ. ಬ್ರ ಅಭಿನವ ಸಿದ್ದಲಿಂಗ ಶಿವಾಚಾರ್ಯರು, ಪರಮ ಪೂಜ್ಯ ಶ್ರೀ ಪರ್ವತಲಿಂಗ ಪರಮೇಶ್ವರ ಮಹಾರಾಜರು, ಪರಮ ಪೂಜ್ಯ ಶ್ರೀ ಜೇಮಸಿಂಗ್ ಮಹಾರಾಜರು,

ಪರಮ ಪೂಜ್ಯ ಶ್ರೀ ಬಳಿರಾಮ ಮಹಾರಾಜರು, ಪರಮ ಪೂಜ್ಯಶ್ರೀ ದತ್ತದಿಗಂಬರ ಶರಣ ಶಂಕರಲಿಂಗ ಮಹಾರಾಜರು, ಪರಮ ಪೂಜ್ಯ ಶ್ರೀ ಮುರಾಹಲ ಮಹಾರಾಜರು, ಪರಮ ಪೂಜ್ಯ ಮಾತೋಶ್ರೀ ಲತಾದೇವಿ, ಪರಮ ಪೂಜ್ಯ ಶ್ರೀ ಸೋಮನಾಥ ಮಹಾರಾಜರು, ಪರಮ ಪೂಜ್ಯ ಮಾತೋಶ್ರೀ ಕಲಾವತಿದೇವಿ, ಪರಮ ಪೂಜ್ಯ ಶ್ರೀ ಅನೀಲ ಮಹಾರಾಜರು,

ಶಾಸಕರಾದ ಬಸವರಾಜ ಮತ್ತಿಮೂಡ, ಅಲ್ಲಮ ಪ್ರಭು ಪಾಟೀಲ, ಮಾಜಿ ಸಚಿವ ರೇವುನಾಯಕ ಬೆಳಮಗಿ, ಮಾಜಿ ಸಂಸದರಾದ ಉಮೇಶ ಜಾಧವ, ಹರಿಬಾ ರಾಠೋಡ, ಕೆನಬ್ರಿಡ್ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ನವಶಾದ್ ಎನ್. ಇರಾನಿ, ಮಾಜಿ ಸಚಿವ ಬಾಬುರಾವ ಚವ್ಹಾಣ, ಶ್ರೀ ಸೇವಾಲಾಲ ದೇವಸ್ಥಾನ ಟ್ರಸ್ಟ್‌ನ ಅಧ್ಯಕ್ಷ ಸುಭಾಷ ಹೆಚ್ ಚವ್ಹಾಣ ಹಾಗೂ ಉಪಾಧ್ಯಕ್ಷ ರಾಜು ಎಮ್. ಚವ್ಹಾಣ (ಆರ್‌ಎಮ್‌ಸಿ) ಸೇರಿದಂತೆ ಶ್ರೀ ಸೇವಾಲಾಲ ದೇವಸ್ಥಾನ ಟ್ರಸ್ಟ್‌ನ ಸದಸ್ಯರು, ರಾಜಕಿಯ ಮುಖಂಡರು, ಬಡಾವಣೆಯ ಮುಖಂಡರು, ಮಹಿಳೆಯರು, ಯುವಕರು ಇದ್ದರು.

IN THE COURT OF SENIOR CIVIL JUDGE AND JMFC COURT AT HUMNABAD

Crl. Misc No. 103/2025

1. Paramma W/o Sharanappa W/o Kallappa Age 75 years, occu: House hold, R/o Bemalkheda Tq Chitagappa
2. Chandramma W/o John Age 78 years, occu: House hold,
R/o Aliamber Tq & Dist Bidar.
3. Kalalavati W/o Shankar Age 62 years, occu: House hold.
R/o Chincholi Tq:Chincholi Dist Kalaburagi.

...Petitioner.

- -V/S - -

The Thasildar Chitaguppa.

..Respondents.

Petition Under section 13(3) Birth & Death Registration Act-1969

PAPER PUBLICATION

Whereas the above named petitioner has filed the petition under section 13(3) of Birth and Death Registration Act 1969 praying this Honorable court to issue Death certificate of Saibanna S/o Late Rayappa The petitioners are Sons of deceased and his name shown as above.


Saibanna S/o Late Rayappa was died on 26.07.2003. The petitioners are claiming the death certificate of their father for transfer of property and other official purpose and home record.

Therefore it is hereby proclaimed that if any person or persons have got any objection in this regard she/they may approach to this Honorable court on 04-11-2025 at 11.00 AM in person or authorized pleader to answer such claim otherwise the matter will be heard and determined in your absence as per law.

Given under my hand seal of the Court on this 24/10/2025

//By Order of the Court//
Chief Ministerial Officer.
Senior Civil Judge &JMFC Court
Humnabad.

# ಕೆ.ಎಸ್.ಡಿ.ಎಲ್ ನಿಂದ ಸರ್ಕಾರಕ್ಕೆ ರೂ 135 ಕೋಟಿ ಡಿವಿಡೆಂಡ್ ಚೆಕ್ ಹಸ್ತಾಂತರ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಅ 24 :ಸಾರ್ವಜನಿಕ ವಲಯದ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತವು (ಕೆಎಸ್‌ಡಿಎಲ್) 2024-25ನೇ ಸಾಲಿನ ಲಾಭದಲ್ಲಿ ರೂ 135 ಕೋಟಿಯನ್ನು ಸರ್ಕಾರಕ್ಕೆ ಹಸ್ತಾಂತರಿಸಿತು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿಂದು ಸಂಸ್ಥೆಯ ಪರವಾಗಿ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಮತ್ತು ಕೆ.ಎಸ್.ಡಿ.ಎಲ್ ಅಧ್ಯಕ್ಷ ಅಪ್ಪಾಜಿ ನಾಡಗೌಡ ಅವರು ಈ ಮೊತ್ತದ ಚೆಕ್ ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ನೀಡಿದರು.

ಸಚಿವ ಎಂ.ಬಿ.ಪಾಟೀಲ ಅವರು ಮಾತನಾಡಿ, ಕೆ.ಎಸ್.ಡಿ.ಎಲ್ ಸಂಸ್ಥೆಯು ಕಳೆದ ಹಣಕಾಸು ವರ್ಷದಲ್ಲಿ ರೂ 1,700 ಕೋಟಿ ವಹಿವಾಟು ನಡೆಸಿ, ರೂ. 451 ಕೋಟಿ ಲಾಭವನ್ನು ಕಂಡಿದೆ. ಇದರ ಪೈಕಿ ನಿಯಮದಂತೆ ಶೇ.30ರಷ್ಟು ಲಾಭಾಂಶವನ್ನು ಸರಕಾರಕ್ಕೆ ಕೊಡಲಾಗಿದೆ. ವಹಿವಾಟು, ಲಾಭ ಮತ್ತು ಲಾಭಾಂಶ ಮೂರರಲ್ಲೂ ಇದು ಸಾರ್ವಕಾಲಿಕ ದಾಖಲೆ ಆಗಿದೆ ಎಂದಿದ್ದಾರೆ.

2022-23 ರಲ್ಲಿ ಹಿಂದಿನ ಸರ್ಕಾರವಿದ್ದಾಗ ಸಂಸ್ಥೆಯ ವತಿಯಿಂದ ಸರಕಾರಕ್ಕೆ ರೂ. 54 ಕೋಟಿ ಡಿವಿಡೆಂಡ್ (ಲಾಭಾಂಶ) ಕೊಡಲಾಗಿತ್ತು.

2023-24ರಲ್ಲಿ ರೂ. 108 ಕೋಟಿ ಲಾಭಾಂಶ ಹಸ್ತಾಂತರಿಸಲಾಗಿತ್ತು. ಇದಕ್ಕೆ ಹೋಲಿಸಿದರೆ ಲಾಭಾಂಶದಲ್ಲಿ ಈಗ ರೂ. 27 ಕೋಟಿ ಹೆಚ್ಚಳವಾಗಿದೆ. ಮುಂಬರುವ ವರ್ಷಗಳಲ್ಲಿ ಇದು ಮತ್ತಷ್ಟು ಹೆಚ್ಚಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಕೆ.ಜೆ.ಜಾರ್ಜ್, ಪ್ರಿಯಾಂಕ್ ಖರ್ಗೆ, ಡಾ.ಎಂ.ಸಿ.ಸುಧಾಕರ್, ಸಂತೋಷ ಲಾಡ್, ಸರ್ಕಾರದ ಮುಖ್ಯಕಾರ್ಯದರ್ಶಿ ಡಾ.ಶಾಲಿನಿ ರಜನೀಶ್, ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಡಾ.ಪಿ.ಕೆ.ಪ್ರಶಾಂತ್ ಉಪಸ್ಥಿತರಿದ್ದರು.

# ಜಿಲ್ಲಾ ಉಸ್ತುವಾರಿ ಸಚಿವ ದರ್ಶನಾಪೂರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅ 24 : ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು ಇದೇ ಅಕ್ಟೋಬರ್ 25 ಹಾಗೂ 26, 27 ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ ಪ್ರವಾಸವು ಕೆಳಗಿನಂತಿದೆ ಎಂದು ಸಚಿವರ ಆಪ್ತ ಕಾರ್ಯದರ್ಶಿ ಡಾ.ಶ್ರೀಶೈಲ ಜಿ.ಬಿದರಕುಂದಿ ಅವರು ತಿಳಿಸಿದ್ದಾರೆ.

2025ರ ಅಕ್ಟೋಬರ್ 25ರ ಶನಿವಾರ ರಂದು ಬೆಳಿಗ್ಗೆ 10.30 ಗಂಟೆಗೆ ಶಹಾಪೂರ ತಾಲ್ಲೂಕಿನ ಗೋಗಿ (ಕೆ) ಗ್ರಾಮಕ್ಕೆ ಆಗಮಿಸಿ, ಗೋಗಿ.ಕೆ ಗ್ರಾಮದಲ್ಲಿ ನೂತನವಾಗಿ ಜೈಗುರು ಮಠದ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸುವರು. ನಂತರ ಬೆಳಿಗ್ಗೆ 12.30 ಗಂಟೆಗೆ ಶಹಾಪೂರ ಸಾರ್ವಜನಿಕ ಕುಂದುಕೊರತೆಗಳ ವಿಚಾರಣೆ ಹಾಗೂ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು. ತದನಂತರ ಸಂಜೆ 5 ಗಂಟೆಗೆ ಕಲಬುರಗಿಗೆ ಪ್ರಯಾಣ ಬೆಳೆಸುವರು.

2025ರ ಅಕ್ಟೋಬರ್ 26ರ ಭಾನುವಾರ ರಂದು ಬೆಳಿಗ್ಗೆ 10.30 ಗಂಟೆಗೆ ಇಬ್ರಾಹಿಂಪುರ ರಸ್ತೆ, ಗುಂಡಳ್ಳಿ ತಾಂಡದಲ್ಲಿ ಶ್ರೀ ಮಣಿಕಂಠ ಕಾಟ್ಸೀಡ್ಸ್ ಕಾಟನ್ ಜಿನ್ನಿಂಗ್ ಫ್ಯಾಕ್ಟರಿ ಆರಂಭ ಕಾರ್ಯಕ್ರಮದಲ್ಲಿ ಭಾಗವಹಿಸುವರು. ನಂತರ ಮಧ್ಯಾಹ್ನ 12 ಗಂಟೆಗೆ ಕಲಬುರಗಿಗೆ ಪ್ರಯಾಣ ಬೆಳೆಸುವರು.

2025ರ ಅಕ್ಟೋಬರ್ 27ರ ಸೋಮವಾರ ರಂದು ಬೆಳಿಗ್ಗೆ 11 ಗಂಟೆಗೆ ಶಹಾಪೂರ ನಗರದ ವೈಷ್ಣವಿ ಫಂಕ್ಷನ್ ಹಾಲ್‌ದಲ್ಲಿ ಆಯೋಜಿಸಿರುವ ಪಕ್ಷದ ಕಾರ್ಯಕ್ರಮದಲ್ಲಿ ಹಾಗೂ ಸ್ಥಳೀಯ ಕಾರ್ಯಕ್ರಮ ಮತ್ತು ಸಾರ್ವಜನಿಕ ಕುಂದುಕೊರತೆಗಳ ವಿಚಾರಣೆ ಆಲಿಸುವರು. ನಂತರ ಸಂಜೆ 5 ಗಂಟೆಗೆ ಕಲಬುರಗಿಗೆ ಪ್ರಯಾಣ ಬೆಳೆಸುವರು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಾತಿ ನಿಂದನೆ ಹಲ್ಲೆ ಪ್ರಕರಣ ದಾಖಲು



ಮಲ್ಲಮ್ಮ ನುಡಿ ವಾರ್ತೆ

ಹುಣಸಗಿ: 24 ಜಾತಿ ನಿಂದನೆ ಮಾಡಿ ಅವಾಚ್ಯ ಶಬ್ದಗಳಿಂದ ಬೈದು ಚಪ್ಪಲಿಯಿಂದ ಹೊಡೆದು ಹಲ್ಲೆ ಮಾಡಿರುವಂತಹ ಘಟನೆ ಶುಕ್ರವಾರ ಸಾಯಂಕಾಲ ಸುಮಾರು 4:00 ಗಂಟೆಗೆ ನಡೆದಿದೆ.

ಯಾದಗಿರಿ ಜಿಲ್ಲೆಯ ಹುಣಸಗಿ ತಾಲೂಕಿನ ಅರಕೇರಾ ಜೇ ಗ್ರಾಮದ ಗ್ರಾಮ ಪಂಚಾಯತಿಯಲ್ಲಿ ಘಟನೆ ನಡೆದಿದ್ದು,ಗ್ರಾಮಪಂಚಾಯತಿಯಲ್ಲಿಕಾರ್ಯನಿರ್ವಹಿಸುತ್ತಿರುವ ಸಿಪಾಯಿಗೆ ಪರಶ್ಯಾ ನಿಂದ ಬಹಳ ಆಗ್ಯದಲೇ ಎಂದು ಒಮ್ಮಿಂದೊಮ್ಮಲೆ ಅವಾಚ್ಯ ಶಬ್ದಗಳಿಂದ ನಿಂದನೆ ಮಾಡಿ ಗ್ರಾಮ ಪಂಚಾಯತಿಯ ಸಿಪಾಯಿಗೆ ಚಪ್ಪಲಿಯಿಂದ ಹೊಡೆದು ಹಲ್ಲೆ ಮಾಡಿರುವಂತಹ ಘಟನೆ ಬೆಳಕಿಗೆ ಬಂದಿದೆ.

ಅರಕೇರಾ ಜೆ ಗ್ರಾಮ ಪಂಚಾಯಿತಿಯಲ್ಲಿ ಸಿಪಾಯಿಯಾಗಿ ಕಾರ್ಯ ನಿರ್ವಹಿಸುತ್ತಿರುವ

ಪರಶುರಾಮ್ ತಂದೆ ಮಾನಪ್ಪ ಹಾದಿಮನಿ ಎಂಬ ಸಿಪಾಯಿ ಮೇಲೆ ಅದೇ ಗ್ರಾಮದ ಸೀನಪ್ಪ ತಂದೆ ರಾಮಣ್ಣ ಫ್ಯಾಪ್ಲಿ ಎಂಬ ವ್ಯಕ್ತಿ ಹಲ್ಲೆ ಮಾಡಿ ಜಾತಿ ನಿಂದನೆ ಮಾಡಿದ ಘಟನೆ ಬೆಳಕಿಗೆ ಬಂದಿದೆ ಅರಕೆರಾ ಜೆ ಗ್ರಾಮ ಪಂಚಾಯಿತಿಯಲ್ಲಿ ಗ್ರಾಮ ಪಂಚಾಯತಿ ಲೆಕ್ಕಿಗ ಮತ್ತು ಪಂಚಾಯಿತಿ ಸದಸ್ಯರ ಸಮ್ಮುಖದಲ್ಲಿ ಘಟನೆ ನಡೆದಿದೆ ಎನ್ನಲಾಗಿದೆ.ಜಾತಿ ನಿಂದನೆ ಮಾಡಿ ಅವಾಚ್ಯ ಶಬ್ದಗಳಿಂದ ಬೈದ ಘಟನೆ ನಡೆದಿದೆ. ಈ ಸಂದರ್ಭದಲ್ಲಿ

ವಿಡಿಯೋ ಮಾಡುತ್ತಿರುವದನ್ನು ನೋಡಿ ಮೊಬೈಲ್ ಕಿತ್ತುಕೊಂಡಿದ್ದಾನೆ ನಂತರ ಪೊಲೀಸ್ ಕಚೇರಿಗೆ ದೂರು ನೀಡಲು ಹೋಗುವಾಗ ಹಿಂಬಾಲಿಸಿ ಕೊಂಡು ಹೋಗಿ ಜೀವ ಬೆದರಿಕೆ ಹಾಕಿದ್ದಾನೆ ಎಂದು ಸಿಪಾಯಿ ಪರಶುರಾಮ ಹಾದಿಮನಿ ಅವರು ಆರೋಪಿಸಿದ್ದಾರೆ ಈ ಘಟನೆಗೆ ಸಂಬಂಧ ಪಟ್ಟಂತೆ ಹುಣಸಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ತನಿಖೆ ನಡೆಸುತ್ತಿದ್ದಾರೆ.

# ಕಿತ್ತೂರ ರಾಣಿ ಚೆನ್ನಮ್ಮ ಮಹಿಳಾ ಶೌರ್ಯ ಮತ್ತು ದೇಶಭಕ್ತಿಯ ಪ್ರತೀಕ: ಸಂಗಣ್ಣ ಸಾಹುಕಾರ್ ತುಂಬಿಗಿ



ಮಲ್ಲಮ್ಮ ನುಡಿ ವಾರ್ತೆ

ಕೆಂಭಾವಿ:ಅ.24: ಪಟ್ಟಣದಲ್ಲಿ ಭವ್ಯವಾಗಿ ಜಯಂತಿ ಆಚರಣೆ ಕಿತ್ತೂರ ರಾಣಿ ಚೆನ್ನಮ್ಮ ವೃತ್ತದಲ್ಲಿ ಗುರುವಾರ ಮಹಿಳಾ ಶೌರ್ಯ ಮತ್ತು ಸ್ವಾತಂತ್ರ್ಯದ ಸಂಕೇತವಾದ ಕಿತ್ತೂರ ರಾಣಿ ಚೆನ್ನಮ್ಮ ಜಯಂತಿಯನ್ನು ಭವ್ಯವಾಗಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಪ್ರಮುಖ ಅತಿಥಿ ಸಂಗಣ್ಣ ಸಾಹುಕಾರ್ ತುಂಬಿಗಿ ಮಾತನಾಡಿ, "ಕಿತ್ತೂರ ರಾಣಿ ಚೆನ್ನಮ್ಮರು ಬ್ರಿಟಿಷರ ವಿರುದ್ಧ ಹೋರಾಡಿದ ಭಾರತದ ಮೊದಲ ಮಹಿಳಾ ಸ್ವಾತಂತ್ರ್ಯಹೋರಾಟಗಾರ್ತಿ. ಅವರು ಕಾಲದ ಬಲವಾದ ಅಡೆತಡೆಗಳ ನಡುವೆ ಸಹ ಧೈರ್ಯದಿಂದ ನಿಂತು ದೇಶದ ಸ್ವಾಭಿಮಾನದ ಪರ ಹೋರಾಡಿದರು. ಇಂದಿನ ಮಹಿಳೆಯರು ಅವರ ಹೋರಾಟದಿಂದ ಪ್ರೇರಣೆ ಪಡೆದು ಸಮಾಜದ ಎಲ್ಲ ಕ್ಷೇತ್ರಗಳಲ್ಲಿ ಮುನ್ನಡೆದರೆ, ನಿಜವಾದ ಗೌರವ ಅದು," ಎಂದು ಹೇಳಿದರು.

ಅವರು ಮುಂದುವರಿಸಿ, "ಕಿತ್ತೂರ ರಾಣಿ ಚೆನ್ನಮ್ಮರಂತಹ ನಾಯಕಿಯರನ್ನು ಸ್ಮರಿಸುವುದರಿಂದ ನಾವು ಕೇವಲ ಇತಿಹಾಸವನ್ನೇ ನೆನೆಸಿಕೊಳ್ಳುವುದಿಲ್ಲ; ಅವರ ಆದರ್ಶಗಳನ್ನು ಬದುಕಿನ ಭಾಗವನ್ನಾಗಿಸಿಕೊಳ್ಳಬೇಕು. ಯುವ ಜನರು ರಾಷ್ಟ್ರಪ್ರೇಮ ಮತ್ತು ತ್ಯಾಗದ ಮಾರ್ಗದಲ್ಲಿ ನಡೆಯುವ ಹೊಣೆಗಾರಿಕೆ ಹೊಂದಿದ್ದಾರೆ," ಎಂದು ಯುವಕರಿಗೆ ಸಂದೇಶ ನೀಡಿದರು. ಕಾರ್ಯಕ್ರಮದ ಆರಂಭದಲ್ಲಿ ರಾಣಿ ಚೆನ್ನಮ್ಮ ಅವರ ಪ್ರತಿಮೆಗೆ ಪೂಜೆ ಸಲ್ಲಿಸಿ ಮಾಲಾರ್ಪಣೆ ಮಾಡಲಾಯಿತು. ನಂತರ ಪಟಾಕಿ ಸಿಡಿಸಿ, ಸಿಹಿ ಹಂಚಿ ಹಬ್ಬದ ವಾತಾವರಣದಲ್ಲಿ ಜಯಂತಿ ಆಚರಿಸಲಾಯಿತು. ಮಹಿಳಾ ಸಂಘಗಳು, ವಿದ್ಯಾರ್ಥಿಗಳು ಹಾಗೂ ಸ್ಥಳೀಯ ನಾಗರಿಕರು ಉತ್ಸಾಹದಿಂದ ಭಾಗವಹಿಸಿದರು.

ಪುರಸಭೆ ಸದಸ್ಯರಾದ ಶರಣಪ್ಪ, ಭೀಮು ಹಾಗೂ ಪ್ರಮುಖ ರಾದ ಶಿವಣ್ಣ ಬಳಬಟ್ಟಿ "ಡಿ.ಸಿ. ಪಾಟೀಲ್", ವೀರೇಶ್ ಬಂಡೋಳಿ, ಸಂತೋಷ್, "ರವಿ ದೇವುರ್" ಈರಣ್ಣ ಕಲಿಕೇರಿ ಸೋಮ್ನಾಥ್ ಕೋರಳ್ಳಿ, ಗುರುರಾಜ್ ಅಂಗಡಿ, ಸೇರಿದಂತೆ ಅನೇಕರು ಹಾಜರಿದ್ದರು.

# ಅ.28 ರಂದು ಕುಷ್ಠರೋಗ ಪತ್ತೆಹಚ್ಚುವ ಆಂದೋಲನ ಸಭೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅ 24 : 2025-26ನೇ ಸಾಲಿನ ಕುಷ್ಠರೋಗ ಪತ್ತೆ ಹಚ್ಚುವ ಆಂದೋಲನ ಕಾರ್ಯಕ್ರಮಕ್ಕೆ ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಸಭಾಂಗಣದಲ್ಲಿ 2025ರ ಅಕ್ಟೋಬರ್ 28 ರಂದು ಬೆಳಿಗ್ಗೆ 11 ಗಂಟೆಗೆ ಸಭೆ ಆಯೋಜಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಮಹೇಶ ಬಿರಾದಾರ್ ಅವರು ತಿಳಿಸಿದ್ದಾರೆ.

ಕುಷ್ಠರೋಗ ಪತ್ತೆ ಹಚ್ಚುವ ಆಂದೋಲನದ ಸಭೆಯು ಯಾದಗಿರಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ ಅವರ ಅಧ್ಯಕ್ಷತೆಯಲ್ಲಿ ಕುಷ್ಠರೋಗ ಪತ್ತೆಹಚ್ಚುವ ಆಂದೋಲನ ಕಾರ್ಯಕ್ರಮವನ್ನು 2025ರ ನವೆಂಬರ್ 3 ರಿಂದ 19ರ ವರೆಗೆ ನಡೆಯಲಿದೆ. ಈ ಕುರಿತು ಜಿಲ್ಲಾ ಸಮನ್ವಯ ಸಮಿತಿಯ ಸಭೆಯನ್ನು ಜರುಗಿಸಲಾಗುವುದು ಈ ಸಭೆಗೆ ಸಂಬಂಧಿಸಿದ ಸದಸ್ಯರು ಕಡ್ಡಾಯವಾಗಿ ಸಭೆಗೆ ಹಾಜರಾಗುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರತಿಯೊಬ್ಬ ವಿದ್ಯಾರ್ಥಿ ಪಠ್ಯದ ಜತೆಗೆ ಸಾಂಸ್ಕೃತಿಕ ಚಟುವಟಿಕೆ ಬೆಳೆಸಿಕೊಳ್ಳಬೇಕು: ಅಲ್ಲಮಪ್ರಭು ಪಾಟೀಲ




ಕಲಬುರಗಿ: ಅ.24: ಪ್ರತಿಯೊಬ್ಬ ವಿದ್ಯಾರ್ಥಿಗಳು ಪಠ್ಯದ ಜತೆಗೆ ಸಾಂಸ್ಕೃತಿಕ ಚಟುವಟಿಕೆಗಳು ಬೆಳೆಸಿಕೊಳ್ಳಬೇಕು ಹಾಗೂ ವಿದ್ಯಾರ್ಥಿಗಳಿಗೆ ವಿಭಿನ್ನವಾದ ಕಲೆ ಇರುತ್ತದೆ ಅವರ ಪ್ರತಿಭೆಗಳನ್ನು ಗುರುತಿಸಲು ಪೋಷಕರು ಮತ್ತು ಶಿಕ್ಷಕರ ಪಾತ್ರ ಮಹತ್ವದಾಗಿದೆ ಎಂದು ಕಲಬುರಗಿ ದಕ್ಷಿಣ ಮತಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಹೇಳಿದರು. ಶುಕ್ರವಾರದಂದು ವಿವೇಕನಾಂದ ವಿದ್ಯಾನಿಕೇತನ ಶಾಲೆಯ ಸಭಾಂಗಣದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿವೇಕಾನಂದ ವಿದ್ಯಾನಿಕೇತನ ಶಾಲೆ, ಕರುಣೇಶ್ವರ ನಗರ, ಇವರುಗಳ ಸಂಯುಕ್ತ ಆಶ್ರಯದಲ್ಲಿ ಚಿಗುರು ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.ಮಕ್ಕಳ ಪ್ರತಿಭೆಯನ್ನು ಪ್ರೋತ್ಸಾಹಿಸಲು ಕರ್ನಾಟಕ ಸರ್ಕಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮುಖಾಂತರ ಇಂತಹ ಬಹಳಷ್ಟು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹವನ್ನು ನೀಡುತ್ತಿದೆ. ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳಿಗೆ ತಾವು ಏನು ಕಲ್ಲಿಯಲ್ಲೂ ಇಷ್ಟಪಡುತ್ತಾರೆ ಅದನ್ನೆ ಅವರಿಗೆ ಕಲ್ಲಿಸಲು ಅವರಿಗೆ ಸಹಕಾರ ನೀಡಬೇಕು ಎಂದು ಹೇಳಿದರು. ಇಂದಿನ ಆಧುನಿಕ ವಿಜ್ಞಾನ ಮತ್ತು ತಂತ್ರಜ್ಞಾನ ಯುಗದಲ್ಲಿ ಕ್ಷಣಾರ್ಧದಲ್ಲಿ ಮಾಹಿತಿಯನ್ನು ಸಾಮಾಜಿಕ ಮಾಧ್ಯಮಗಳಲ್ಲಿ ನೋಡುವ ಕಾರಣದಿಂದ ತಮ್ಮ ಪ್ರತಿಭೆಗೆ ತಕ್ಕಂತೆ ಹೆಚ್ಚಿನ ಸಾಧನೆ ಮಾಡಿ ಪೋಷಕರಿಗೆ ತಾವು ಕಲಿತ ವಿದ್ಯಾ ಸಂಸ್ಥೆಗೆ ಗೌರ ವಿದ್ಯಾನಿಕೇತನ ಶಾಲೆಯ ಪ್ರಾಂಶುಪಾಲರು ನೀಡಿದ ಸಹಕಾರದಿಂದ ಇಂತಹ ಕಾರ್ಯಕ್ರಮಗಳನ್ನು ಮಾಡಲು ಸಾಧ್ಯವಾಯಿತು ಎಂದರಾರ್ಯಕ್ರಮದದಲ್ಲಿ ವಿದ್ಯಾರ್ಥಿಗಳಿಂದ ಸುಗಮ ಸಂಗೀತ, ತಬಲ ವ್ಯಾದ್ಯವೃಂದ, ಜಾನಪದ ಗೀತೆಗಳು, ಸಮೂಹ ನೃತ್ಯ, ನಾಟಕ ಸಂಸ್ಕೃತಿಕ ಕಾರ್ಯಕ್ರಮಗಳು ಜರುಗಿತು. ವೇದಿಕೆ ಮೇಲೆ ವಿವೇಕಾನಂದ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಸುವರ್ಣ ಭಗವತಿ .ವಿವೇಕಾನಂದ ವಿದ್ಯಾನಿಕೇತನ ಶಾಲೆಯ ಪ್ರಾಂಶುಪಾಲರಾದ ಸಿದ್ದಪ್ಪ ಭಗವತಿ, ವಿವೇಕಾನಂದ ವಿದ್ಯಾನಿಕೇತನ ಶಾಲೆಯ ಎಲ್ಲಾ ಶಿಕ್ಷಕರು, ಕಲಾತಂಡದವರು ವಿದ್ಯಾರ್ಥಿಗಳು ಮತ್ತು ಅವರ ಪೋಷಕರು ಮತ್ತು ಸಂಸ್ಥೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಕಬ್ಬಿನ ಬೆಂಬಲ ಬೆಲೆ: ರೈತರ ಪ್ರತಿಭಟನೆ

ಕಲಬುರಗಿ: ಅ.24: ಕಬ್ಬು ಬೆಳೆಗಾರರಿಗೆ ಎಫ್‌ಆರ್‌ಪಿ ಬೆಂಬಲ ಬೆಲೆ ಮತ್ತು ಕಟಿಂಗ್ ಮತ್ತು ಸಾಗಾಣಿಕೆ ವೆಚ್ಚ ನಿಗದಿಪಡಿಸಿ ಸಕ್ಕರೆ ಕಾರ್ಖಾನೆಗಳನ್ನು ಆರಂಭಿಸಬೇಕು ಎಂದು ಒತ್ತಾಯಿಸಿ ಶುಕ್ರವಾರ ಕಬ್ಬು ಬೆಳೆಗಾರರ ಸಂಘದ ಕಾರ್ಯಕರ್ತರು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ಮಾಡಿದರು. ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದ ಜಿಲ್ಲಾಧ್ಯಕ್ಷ ರಮೇಶ್ ಹೂಗಾರ್, ಜಗದೀಶ್ ಪಾಟೀಲ್, ಧರ್ಮರಾಜ್ ಸಾಹು ಭೂಸನೂರು, ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾಧ್ಯಕ್ಷ ಶರಣಬಸಪ್ಪ ಮಮಶೆಟ್ಟಿ, ಹುಚ್ಚಪ್ಪ ವಠಾರ್ ಅವರೂ ಸೇರಿದಂತೆ ಹಲವಾರು ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ರೈತ ಮುಖಂಡರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು. ಪ್ರತಿಭಟನೆಕಾರರು ನಂತರ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿ, ಬೆಳಗಾವಿ ಮಾದರಿಯಲ್ಲಿ ಕಬ್ಬಿನ ಬೆಂಬಲ ಬೆಲೆಯನ್ನು ನಿಗದಿಪಡಿಸಬೇಕು ಎಂದು ಒತ್ತಾಯಿಸಿದರು. ಸಕ್ಕರೆ ಇಳುವರಿ ಯಲ್ಲಿ ಮೋಸ ಮಾಡುತ್ತಿರುವ ಸಕ್ಕರೆ ಕಾರ್ಖಾನೆಗಳು ಸರ್ಕಾರವೆ ರಚಿಸಿದ ಸಕ್ಕರೆ ಇಳುವರಿ ಪ್ರತಿ 15 ದಿನಕ್ಕೊಮ್ಮೆ ತೆಗೆಯಬೆಕೆಂದು ಸರ್ಕಾರದ ಆದೇಶವಿದ್ದರೂ ಸಹ ಅದನ್ನು ಜಾರಿಗೆ ತರುತ್ತಿಲ್ಲ. ಸರ್ಕಾರವೇ ರಚಿಸಿದ ಸಮಿತಿ ತಹಸಿಲ್ದಾರರ, ಆಹಾರ ಇಲಾಖೆ ಉಪ ನಿರ್ದೇಶಕರು, ಕೃಷಿ ಅಧಿಕಾರಿಗಳು ರೈತರ ಸಮ್ಮುಖದಲ್ಲಿ ಸಕ್ಕರೆ ಇಳುವರಿ ತೆಗೆಯಬೇಕು. ಆದರೆ ರೈತರಿಗೆ ಹೇಳದೇ ಕೆಳದೇ ಯಾರಿಗೂ ಸಹ ಗೊತ್ತು ಮಾಡಲಾರದೆ ರೈತರಿಗೆ ಸಕ್ಕರೆ ಇಳುವರಿಯಲ್ಲಿ ಸಹ ಮೋಸ ಮಾಡಲಾಗುತ್ತಿದೆ ಎಂದು ಅವರು ಆರೋಪಿಸಿದರು.

# ಶಿಕ್ಷಕರ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಗೆ ನ.6 ಕೊನೆದಿನ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.24: ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ನಡೆದಿದ್ದು, ಅರ್ಹ ಮತದಾರರು ನ.6 ರೊಳಗೇ ಹೆಸರು ಸೇರ್ಪಡೆಗೆ ಅರ್ಜಿ ಸಲ್ಲಿಸಬೇಕೆಂದು ತಸೀಲ್ದಾರ ಮಲ್ಲಿಕಾರ್ಜುನ ವದ್ದನಕೇರಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು, ಪ್ರೌಢ ಶಾಲೆಗಿಂತ ಕಡಿಮೆ ಇಲ್ಲದ ರಾಜ್ಯದೊಳಗಿನ ಸರ್ಕಾರದಿಂದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಗಳಲ್ಲಿ ಕನಿಷ್ಠ 3 ವರ್ಷ ಬೋಧನಾ ವೃತಿಯಲ್ಲಿ ನಿರತರಾಗಿರುವ ಪ್ರತಿಯೊಬ್ಬ ವ್ಯಕ್ತಿಯೂ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಸೇರಿಸಲು ಅರ್ಹರಾಗಿರುತ್ತಾರೆ.

ಈ ಹಿಂದೆ ತಮ್ಮ ಹೆಸರು ಇದ್ದರು ಸಹ ಪುನಃ ನಮುನೆ 19 ರಲ್ಲಿ ,

ಶಾಲಾ ಸಂಸ್ಥೆಯಿಂದ ಅನುಭಂದ 2 ರಲ್ಲಿ ಪಡೆದ ಪ್ರಮಾಣ ಪತ್ರ, ತಮ್ಮ ಭಾವಚಿತ್ರ, ಆಧಾರ್ ಕಾರ್ಡ್ ಮತ್ತು ಎಪಿಕ್ ಕಾರ್ಡ್ ಗಳ ಪ್ರತಿಯೊಂದಿಗೆ ಅರ್ಜಿ ಸಲ್ಲಿಸಬೇಕು ಎಂದು ತಿಳಿಸಿದ್ದಾರೆ.

# ನಾಳೆ ವೀರಸ್ತ್ರೀ ಪ್ರಶಸ್ತಿ ಪ್ರದಾನ



ಕಲಬುರಗಿ:ಅ.24:ಸ್ವಾತಂತ್ರ್ಯದ ಕಿಡಿ ಹೊತ್ತಿಸಿದ ವೀರ ಕನ್ನಡತಿ-ಬ್ರಿಟಿಷರ ವಿರುದ್ಧ ಖಡ್ಗ ಎತ್ತಿದ ಮೊದಲ ಮಹಿಳೆ ಕಿತ್ತೂರು ರಾಣಿ ಚೆನ್ನಮ್ಮ ಜಯಂತ್ಯೋತ್ಸವ ಹಾಗೂ ಜಿಲ್ಲೆಯ ಮಹಿಳಾ ಸಾಧಕರಿಗೆ ವೀರ ಸ್ತ್ರೀ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಅಕ್ಟೋಬರ್ 26ರಂದು ಭಾನುವಾರ ಬೆಳಿಗ್ಗೆ 11.15ಕ್ಕೆ ನಗರದ ಕನ್ನಡ ಭವನದಲ್ಲಿ ಏರ್ಪಡಿಸಲಾಗಿದೆ ಎಂದು ಪರಿಷತ್ ಜಿಲ್ಲಾಧ್ಯಕ್ಷ ವಿಜಯಕುಮಾರ್ ಪಾಟೀಲ್ ತೇಗಲತಿಪ್ಪಿ ಅವರು ತಿಳಿಸಿದ್ದಾರೆ.

ಕಿತ್ತೂರು ರಾಣಿ ಚೆನ್ನಮ್ಮಳ ಧೈರ್ಯ, ಸಾಹಸ, ಸ್ವಾಭಿಮಾನವಾದ ಇತಿಹಾಸವನ್ನು ಇಂದಿನ ಸಮಾಜಕ್ಕೆ ತಿಳಿಸಿಕೊಡುವ ಕಾರ್ಯ ಪರಿಷತ್ತು ಈ ಕಾರ್ಯಕ್ರಮದ ಮೂಲಕ ಮಾಡುತ್ತಿದೆ. ಕಿತ್ತೂರು ರಾಣಿ ಚೆನ್ನಮ್ಮ ನಮ್ಮ ಕನ್ನಡ ನಾಡಿನ ಹಾಗೂ ಈ ದೇಶದ ಬಹು ದೊಡ್ಡ ಆಸ್ತಿಯಾಗಿದ್ದಾಳೆ. ಈ ದಿಸೆಯಲ್ಲಿ ಅರ್ಥಪೂರ್ಣ ಜಯಂತಿಯನ್ನು ರೂಪಿಸಲಾಗಿದೆ ಎಂದು ಅವರು ಹೇಳಿಕೆಯಲ್ಲಿ ವಿವರಿಸಿದ್ದಾರೆ.

ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮದ ತಹಸಿಲ್ದಾರ್ ಶ್ರೀಮತಿ ಸಾವಿತ್ರಿ ಶರಣು ಸಲಗರ್ ಅವರು ಸಮಾರಂಭ ಉದ್ಘಾಟಿಸಿ, ಸಾಧಕರಿಗೆ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಯಾದಗಿರಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರದ ಅಧ್ಯಕ್ಷೆ ಮಾಲತಿ ರೇಷ್ಮಿ, ರಾಜ್ಯಮಟ್ಟದ ಕಿತ್ತುರು ರಾಣಿ ಚೆನ್ನಮ್ಮ ಪ್ರಶಸ್ತಿ ಪುರಸ್ಕೃತೆ ಅನ್ನಪೂರ್ಣ ಸಂಗೋಳಗಿ, ಉತ್ಸವ ಸಮಿತಿಯ ಅಧ್ಯಕ್ಷೆ - ಹಿರಿಯ ಲೇಖಕಿ ಶಕುಂತಲಾ ಪಾಟೀಲ್ ಜಾವಳಿ, ಗೌರವಾಧ್ಯಕ್ಷ ಸೈಯ್ಯದ್ ನಜಿರುದ್ದಿನ್ ಮುತ್ತವಲ್ಲಿ ಅವರು ಮುಖ್ಯಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ತಮ್ಮ ವೃತ್ತಿಯಲ್ಲಿದ್ದುಕೊಂಡೆ ಸಾಮಾಜಿಕ ಕ್ಷೇತ್ರದಲ್ಲಿ ತೊಡಗಿಸಿಕೊಂಡಿರುವ ಮಹಿಳಾ ಸಾಧಕರಾದ ಮಾಜಿ ಉಪ ಮೇಯರ್ ನಾಗವೇಣಿ ತಿಪ್ಪಣಪ್ಪ ಕಮಕನೂರ್, ಎಂಆರ್‌ಎಂಸಿ ಕಾಲೇಜಿನ ಪ್ರಾಧ್ಯಾಪಕಿ ಡಾ. ಶಾಂತಾ ಪಾಟೀಲ್, ಜೇಸ್ಕಾಂನ ಎಇಇ ಮಾಲಿನಿ ಸ್ವಾಮಿ, ಚಿತ್ತಾಪುರ ಪುರಸಭೆಯ ಮಾಜಿ ಅಧ್ಯಕ್ಷೆ-ಹಾಲಿ ಸದಸ್ಯೆ ಶೀಲಾ ಬಾಬು ಕಾಶಿ, ಶರಣ ಚಿಂತಕಿ ಶಾರದಾ ಓಗಿ, ಸಮಾಜ ಸೇವಕಿ ಸುಮಾ ಶರಣು ಪಪ್ಪಾ, ಕನ್ನಡಪರ ಚಿಂತಕಿ ಫಾತೀಮಾ ಶೇಖ್, ಜನಪರ ಹೋರಾಟಗಾರ್ತಿ ಚಂದಮ್ಮ ಗೋಳಾ ಅವರಿಗೆ ವೀರ ಸ್ತ್ರೀ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ ಅವರು ಹೇಳಿದ್ದಾರೆ.

# ಈಶಾನ್ಯ ಶಿಕ್ಷಕರ ಮತದಾರರ ಪಟ್ಟಿ ಸಿದ್ಧಪಡಿಸಿಕೊಳ್ಳಲು ವೇಳಾಪಟ್ಟಿ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅ 24 : ಭಾರತ ಚುನಾವಣಾ ಆಯೋಗವು ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರನ್ನು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ನೋಂದಣಾಧಿಕಾರಿಯನ್ನಾಗಿ ಹಾಗೂ ಈ ಚುನಾವಣಾ ಕ್ಷೇತ್ರ ವ್ಯಾಪ್ತಿಗೊಳಪಡುವ ವಿಭಾಗದ ಎಲ್ಲಾ ಜಿಲ್ಲಾಧಿಕಾರಿಗಳನ್ನು, ಆಯುಕ್ತರು ಮಹಾನಗರ ಪಾಲಿಕೆ ಕಲಬುರಗಿ, ಹಾಗೂ ಬಳ್ಳಾರಿ, ಕಲಬುರಗಿ ವಿಭಾಗದ ಆಯಾ ಉಪ ವಿಭಾಗಕ್ಕೆ ಸಂಬಂಧಪಟ್ಟ ಎಲ್ಲಾ ಸಹಾಯಕ ಆಯುಕ್ತರು, ವಿಭಾಗದ ಎಲ್ಲಾ ಸಂಬಂಧಪಟ್ಟ ತಾಲೂಕಿನ ತಹಸೀಲ್ದಾರರನ್ನು ಸಹಾಯಕ ಮತದಾರರ ನೊಂದಣಾಧಿಕಾರಿಯನ್ನಾಗಿ ನೇಮಿಸಿರುತ್ತದೆ. ಅರ್ಹತಾ 2025 ನವೆಂಬರ್ 1ಕ್ಕೆ ಅನ್ವಯಸುವಂತೆ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯು ನೂತನವಾಗಿ ಸಿದ್ದಪಡಿಸುವ ಕಾರ್ಯವು ಈಗಾಗಲೇ ಪ್ರಾರಂಭಿಸಲಾಗಿದೆ ಎಂದು ಯಾದಗಿರಿ ತಹಸೀಲ್ದಾರರು ಹಾಗೂ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರ ಸಹಾಯಕ ಮತದಾರರ ನೋಂದಣಾಧಿಕಾರಿ ಶ್ರೀ ಸುರೇಶ ಅಂಕಲಗಿ ಅವರು ತಿಳಿಸಿದ್ದಾರೆ.

ಭಾರತ ಚುನಾವಣಾ ಆಯೋಗವು 2025ರ ಸೆಪ್ಟೆಂಬರ್ 12ರ ಪತ್ರದನ್ವಯ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯು ಹೊಸದಾಗಿ ಸಿದ್ದಪಡಿಸಲಾಗುತ್ತಿರುವುದರಿಂದ ಈ ಹಿಂದಿನ ಮತದಾರರ ಪಟ್ಟಿಯಲ್ಲಿ ಹೆಸರು ಇರುವ ಮತದಾರರ ಸಹ ನಮೂನೆ-19ರಲ್ಲಿ ಹೊಸದಾಗಿ ಅರ್ಜಿ ಸಲ್ಲಿಸಬೇಕಾಗಿರುತ್ತದೆಂದು ನಿರ್ದೇಶನ ನೀಡಿರುತ್ತಾರೆ. ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ಸಿದ್ಧಪಡಿಸಿಕೊಳ್ಳಲು ಈ ಕೆಳಗಿನಂತೆ ವೇಳಾಪಟ್ಟಿಯನ್ನು ನಿಗದಿಪಡಿಸಲಾಗಿದೆ.

ವೇಳಾಪಟ್ಟಿ ವಿವರ : 2025ರ ನವೆಂಬರ್ 6ರ ಗುರುವಾರ ರಂದು ಅರ್ಜಿ ನಮೂನೆ -19ರಲ್ಲಿ ಅರ್ಜಿಯನ್ನು ಸ್ವೀಕರಿಸಲು ಕೊನೆಯ ದಿನವಾಗಿದೆ. 2025ರ ನವೆಂಬರ್ 25ರ ಮಂಗಳವಾರ ರಂದು ಕರಡು ಮತದಾರರ ಪಟ್ಟಿ ಪ್ರಕಟ. 2025ರ ನವೆಂಬರ್ 25 ರಿಂದ 2025ರ ಡಿಸೆಂಬರ್ 10ರ ಬುಧವಾರ ರಂದು ಹಕ್ಕು ಮತ್ತು ಆಕ್ಷೇಪಣೆಗಳಿಗಾಗಿ ನಿಗದಿಪಡಿಸಿದೆ. 2025ರ ಡಿಸೆಂಬರ್ 30ರ ಮಂಗಳವಾರ ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಣೆ.

ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ನೊಂದಾಯಿಸಲು ಈ ಕೆಳಕಂಡ ಮಾರ್ಗಸೂಚಿಗಳನ್ನು ಅನುಸರಿಸುವುದು. ಭಾರತದ ಪ್ರಜೆಯಾಗಿರುವ, ಆಯಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸಾಮಾನ್ಯ ನಿವಾಸಿಯಾಗಿರುವ ಹಾಗೂ 2025ರ ನವೆಂಬರ್ 1ಕ್ಕೆ ಮೊದಲ 6 ವರ್ಷಗಳ ಅವಧಿಯಲ್ಲಿ ಸೆಕೆಂಡರಿ ದರ್ಜೆಯಲ್ಲಿ ಪ್ರೌಢ ಶಾಲೆಗಿಂತ ಕಡಿಮೆ ಇಲ್ಲದ ನಿರ್ಧಿಷ್ಟಪಡಿಸಿದಂತಹ ರಾಜ್ಯದೊಳಗಿನ ಯಾವುದೇ ಸರ್ಕಾರದಿಂದ ಮಾನ್ಯತೆ ಪಡೆದ ಶೈಕ್ಷಣಿಕ ಸಂಸ್ಥೆಗಳಲ್ಲಿ ಒಟ್ಟು ಕನಿಷ್ಠ 3 ವರ್ಷ ಬೋಧನಾ ವೃತ್ತಿಯಲ್ಲಿ ನಿರತವಾಗಿರುವ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ಸೇರಿಸಲು ಅರ್ಹನಾಗಿರುತ್ತಾನೆ. ಹಾಗೆ ನಿರ್ಧಷ್ಟಪಡಿಸಿದ ಶೈಕ್ಷಣಿಕ ಸಂಸ್ಥೆಗಳ ಪಟ್ಟಿಯು ಮೊದಲನೇ ಅನುಸೂಚಿಯಲ್ಲಿ ತಿಳಿಸಲಾದ ಅಧಿಕಾರಿಗಳ ಬಳಿ ಇರುತ್ತದೆ.

ಖುದ್ದಾಗಿ ಅಥವಾ ಅಂಚೆ ಮುಖಾಂತರ ಒಟ್ಟಾರೆಯಾಗಿ ಸಲ್ಲಿಸಿದ ಅರ್ಜಿಗಳನ್ನು ಮತದಾರರ ನೋಂದಣಾಧಿಕಾರಿಯು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗಾಗಿ ಪರಿಗಣಿಸಬೇಕು, ಆದರೆ ಸಂಸ್ಥೆಯ ಮುಖ್ಯಸ್ಥರು ಅವರ ಸಿಬ್ಬಂದಿಯವರ ಎಲ್ಲಾ ಅರ್ಜಿಗಳನ್ನು ಒಟ್ಟಾಗಿ ಮತದಾರರ ನೊಂದಣಾಧಿಕಾರಿಗಳಿಗೆ ಕಳುಹಿಸಬಹುದು. ಒಂದೇ ಕುಟುಂಬದ ಎಲ್ಲಾ ಸದಸ್ಯರು ನಮೂನೆ 19 ರಲ್ಲಿ ಅರ್ಜಿಗಳನ್ನು ಕುಟುಂಬ ಯಾವುದಾದರೂ ಸದಸ್ಯರು ಸಲ್ಲಿಸಬಹುದು ಹಾಗೂ ಪ್ರತಿ ಸದಸ್ಯನಿಗೆ ಸಂಬಂಧಿಸದಂತೆ ಮೂಲ ಪ್ರಮಾಣ ಪತ್ರಗಳನ್ನು ಒದಗಿಸಿ, ಪ್ರಮಾಣ ಪತ್ರವನ್ನು ಪರಿಶೀಲಿಸಿಕೊಳ್ಳಬೇಕು. ಅರ್ಜಿಯಲ್ಲಿನ ತಪ್ಪು ಅಥವಾ ತಪ್ಪೆಂದು ಅವನು ತಿಳಿದಿರುವ ಅಥವಾ ನಂಬುವಂತಹ ಅಥವಾ ಸತ್ಯವೆಂದು ನಂಬಲಾಗದಿರುವಂತಹ ಹೇಳಿಕೆಗಳನ್ನು ಅಥವಾ ಘೋಷಣೆಗಳನ್ನು ಮಾಡುವ ಯಾವುದೇ ವ್ಯಕ್ತಿಯನ್ನು ಪ್ರಜಾಪ್ರಾತಿನಿಧ್ಯ ಅಧಿನಿಯಮ 1950ರ 31ನೇ ಪ್ರಕರಣ ಮೇರೆಗೆ ಶಿಕ್ಷೆಗೆ ಗುರಿಪಡಿಸಲಾಗುವುದೆಂಬುದನ್ನು ಗಮನಿಸಬೇಕು. ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಬಯಸುವ ಪ್ರತಿಯೊಬ್ಬರು ಅರ್ಜಿ ನಮೂನೆ 19ನ್ನು ಭರ್ತಿಮಾಡಿ ಅದರೊಂದಿಗೆ ಶೈಕ್ಷಣಿಕ ಸಂಸ್ಥೆಗಳಲ್ಲಿ 2025ರ ನವೆಂಬರ್ 1ಕ್ಕೆ ಮೊದಲು 6 ವರ್ಷಗಳ ಅವಧಿಯಲ್ಲಿ ಒಟ್ಟು ಕನಿಷ್ಠ 3 ವರ್ಷ ಭೋದನಾ ವೃತ್ತಿಯಲ್ಲಿ ನಿತವಾಗಿರುವ ಬಗ್ಗೆ ಶೈಕ್ಷಣಿಕ ಸಂಸ್ಥೆಗಳಿಂದ ಅನುಬಂಧ 2ರಲ್ಲಿ ಪ್ರಮಾಣ ಪತ್ರ ಸಲ್ಲಿಸಬೇಕು. ಯಾವುದೇ ವ್ಯಕ್ತಿ ಅಂಚೆ ಮೂಲಕ ಮತದಾರರ ನೋಂದಣಾಧಿಕಾರಿಗಳು, ಸಹಾಯಕ ಮತದಾರರ ನೋಂದಣಾಧಿಕಾರಿಗಳು, ಗೊತ್ತುಪಡಿಸಿದ ಅಧಿಕಾರಿಗೆ ಸಲ್ಲಿಸಿದಲ್ಲಿ ಅಂತಹ ಅರ್ಜಿದಾರರಿಗೆ ಗೊತ್ತು ಪಡಿಸಿದ ಅಧಿಕಾರಿಯು ವಿಚಾರಣೆಗೆ ಹಾಜರಾಗಲು ನೋಟಿಸ್ ನೀಡುತ್ತಾರೆ. ವಿಚಾರಣೆಗೆ ಹಾಜರಾಗದೇ ಅಥವಾ ದಾಖಲೆಗಳನ್ನು ಹಾಜರುಪಡಿಸದಿದ್ದಲ್ಲಿ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಬಲ್ಕ (ಗುಚ್ಚಗಳಲ್ಲಿ) ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.

ಆಯೋಗವು ಮುಂಬರುವ ದಿನಗಳಲ್ಲಿ ಈ ನಮೂನೆ 19ರ ಅರ್ಜಿಗಳನ್ನು ಇಆರ್‌ಎಮ್‌ಎಸ್‌ನಲ್ಲಿ ಅಳವಡಿಸಲು ಉದ್ದೇಶಿಸಿರುತ್ತಾರೆ. ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಸಿದ್ದಪಡಿಸಿಕೊಳ್ಳುವ ಕುರಿತು ಹಾಗೂ ಚುನಾವಣಾ ಪೂರ್ವ ತಯಾರಿ ಮಾಡಿಕೊಳ್ಳುವಂತೆ ವಿಭಾಗದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಮತ್ತು ಸಂಬಂಧಪಟ್ಟವರಿಗೆ ಈ ಕಾರ್ಯಾಲಯದಿಂದ ನಿರ್ದೇಶನ ನೀಡಲಾಗಿದೆ. ಕರ್ನಾಟಕ ಈಶಾನ್ಯ ಶಿಕ್ಷಕರ ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳು ಇದ್ದಲ್ಲಿ ಮತದಾರರ ನೊಂದಣಾಧಿಕಾರಿಗಳು ಹಾಗೂ ಸಹಾಯಕ ಮತದಾರರ ನೊಂದಣಾಧಿಕಾರಿಗಳ ಕಚೇರಿಯಲ್ಲಿ ಮತ್ತು ಸಂಬಂಧಪಟ್ಟ ವಿಧಾನಸಭಾ ಮತಕ್ಷೇತ್ರದ ಸಹಾಯಕ ಮತದಾರರ ನೊಂದಣಾಧಿಕಾರಿಗಳ ಕಾರ್ಯಾಲಯದಲ್ಲಿ (ಮಹಾನಗರ ಪಾಲಿಕೆ ಹಾಗೂ ತಹಸೀಲ ಕಾರ್ಯಾಲಯದಲ್ಲಿ) ನಿಗದಿಪಡಿಸಿದ ಕಾಲಮಿತಿಯೊಳಗೆ ಸಲ್ಲಿಸಬೇಕು. ಅರ್ಹ ಶಿಕ್ಷಕರು ಹೆಚ್ಚಿನ ಆಸಕ್ತಿ ವಹಿಸಿ ಈ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೊಂದಾಯಿಸಿಕೊಂಡು, ಸುಭದ್ರ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಸಕ್ರೀಯವಾಗಿ ಪಾಲ್ಗೊಳ್ಳಬೇಕೆಂದು ಈ ಮೂಲಕ ಎಲ್ಲಾ ಅರ್ಹ ಮತದಾರರಲ್ಲಿ ವಿನಂತಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮುನಿರಾಬಾದ್‌ನಲ್ಲಿ ರಾಷ್ಟ್ರೀಯ ಅಯೋಡಿನ್ ಸಪ್ತಾಹ ಕಾರ್ಯಕ್ರಮ




ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕೊಪ್ಪಳ, ಸಮುದಾಯ ಆರೋಗ್ಯ ಕೇಂದ್ರ, ಮುನಿರಾಬಾದ್ ಇವರ ಸಂಯುಕ್ತಾಶ್ರಯದಲ್ಲಿ ಸಮುದಾಯ ಆರೋಗ್ಯಕೇಂದ್ರದಲ್ಲಿ ಶುಕ್ರವಾರದಂದು ರಾಷ್ಟ್ರೀಯ ಅಯೋಡಿನ್ ಕೊರತೆಯ ನ್ಯೂನ್ಯತೆಗಳ ನಿಯಂತ್ರಣ ದಿನ ಹಾಗೂ ಸಪ್ತಾಹ ಕಾರ್ಯಕ್ರಮ ಅಂಗವಾಗಿ ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಮುನಿರಾಬಾದ್‌ನ ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ. ಕೆ.ಹೆಚ್ ತೊಗರಿ ಅವರು, ಪ್ರತಿ ವರ್ಷ ಅಕ್ಟೋಬರ್ 21 ರಿಂದ 27 ರವರೆಗೆ ರಾಷ್ಟ್ರೀಯ ಅಯೋಡಿನ್ ಕೊರತೆಯ ನ್ಯೂನ್ಯತೆಗಳ ನಿಯಂತ್ರಣ ಸಪ್ತಾಹ ಕಾರ್ಯಕ್ರಮ ಆಚರಿಸಲಾಗುತ್ತದೆ. ಮನುಷ್ಯನಿಗೆ ಬದುಕಲು ಮುಖ್ಯವಾಗಿ ನೀರು, ಗಾಳಿ ಹಾಗೂ ಆಹಾರ ಅತ್ಯಂತ ಅವಶ್ಯಕವಾಗಿ ಬೇಕಾಗುತ್ತದೆ. ಅದರಂತೆ ಪೌಷ್ಠಿಕ ಆಹಾರ ಸೇವಿಸುವುದರ ಜೊತೆಗೆ ಅಯೋಡಿನ್ ಅಂಶವಿರುವ ಉಪ್ಪನ್ನೇ ಬಳಸಬೇಕು. ಇದು ಮನುಷ್ಯನ ದೈಹಿಕ, ಮಾನಸಿಕ, ಬೆಳವಣಿಗೆಗೆ ಅತೀ ಅವಶ್ಯಕವಾಗಿದೆ. ಈ ಅಯೋಡಿನ್ ಅಂಶ ಮುಖ್ಯವಾಗಿ ಗಜ್ಜರಿ, ಮೀನು, ಸಮುದ್ರಕಳೆ, ಸಿಗಡಿಮೀನು ಇವುಗಳಲ್ಲಿ ಹೆಚ್ಚಾಗಿ ದೊರೆಯುತ್ತದೆ. ಪ್ರತಿಯೊಬ್ಬರು ತಮ್ಮ ದಿನನಿತ್ಯದ ಆಹಾರದಲ್ಲಿ ಅಯೋಡಿನ್ ಅಂಶವಿರುವ ಉಪ್ಪನ್ನೇ ಬಳಸಬೇಕು. ಇದು ಮನುಷ್ಯನ ಬುದ್ದಿಮಟ್ಟ ಹೆಚ್ಚಿಸಲು ಪ್ರಮುಖ ಪಾತ್ರ ವಹಿಸುತ್ತದೆ. ವಿಶೇಷವಾಗಿ ಗರ್ಭಿಣಿಯರು, ಹಾಲುಣಿಸುವ ತಾಯಂದಿರು, ಮಕ್ಕಳು ಹಾಗೂ ಹದಿ-ಹರೆಯದವರು ಕಡ್ಡಾಯವಾಗಿ ಅಯೋಡಿನ್‌ಉಪ್ಪನ್ನೇಉಪಯೋಗಿಸಬೇಕು ಎಂದು ಹೇಳಿದರು.

ಅಯೋಡಿನ್ ಅಂಶವಿರುವ ಉಪ್ಪನ್ನು ಬಳಸದಿದ್ದರೆ ಗರ್ಭಿಣಿಯರಲ್ಲಿ ಪದೇ ಪದೇ ಗರ್ಭಪಾತ, ಸತ್ತು ಹುಟ್ಟುವ ಮಕ್ಕಳು, ಸಂತಾನೋತ್ಪತ್ತಿಯಲ್ಲಿ ತೊಂದರೆ, ದೈಹಿಕ ಬೆಳವಣಿಗೆ ಕುಂಠಿತ, ವಯಸ್ಕರಲ್ಲಿ ನಿಶಕ್ತಿ, ಕಾರ್ಯನಿರ್ವಹಣೆಯಲ್ಲಿ ವೈಫಲ್ಯತೆ, ಗಳಗಂಡರೋಗ ಉಂಟಾಗುತ್ತದೆ. ಮಕ್ಕಳಲ್ಲಿ ಬುದ್ದಿಮಾಂದ್ಯತೆ, ಕಲಿಕೆಯಲ್ಲಿ ಹಿಂದುಳಿಯುವಿಕೆ, ಸರಿಪಡಿಸಲಾಗದ ದೈಹಿಕ ಮತ್ತು ಮಾನಸಿಕ ವಿಕಲತೆ, ಕುಂಠಿತ ಬೆಳವಣಿಗೆ, ಕಿವುಡ ಹಾಗೂ ಮೂಕತನ, ಮೆಳ್ಳೆಗಣ್ಣು, ಕುಬ್ಜತನ ಉಂಟಾಗುತ್ತದೆ. ಆದ್ದರಿಂದ ಮೇಲ್ಕಾಣಿಸಿದ ಎಲ್ಲಾ ಗುಂಪಿನವರು ಕಡ್ಡಾಯವಾಗಿ ಅಯೋಡಿನ್ ಉಪ್ಪನ್ನೇ ಬಳಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವೈದ್ಯಾಧಿಕಾರಿಗಳಾದ ಡಾ.ರಾಜಲಕ್ಷ್ಮಿ, ಆಯುಷ್ ವೈದ್ಯಾಧಿಕಾರಿ ಡಾ.ಜ್ಯೋತಿ, ಎನ್.ಸಿ.ಡಿ ವೈದ್ಯಾಧಿಕಾರಿ ಡಾ.ಪವನ್‌ಸಿಂಗ್, ಡಾ.ರಾಜಶೇಖರ, ಜಿಲ್ಲಾ ಎನ್.ಸಿ.ಡಿ ಕಾರ್ಯಕ್ರಮದ ಸಯೋಜಕರಾದ ಡಾ.ಜಯಶ್ರೀ, ಡಾ.ಮಾಧವಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಲ್.ವಿ ಸಜ್ಜನರ, ಜಿಲ್ಲಾ ಮೈಕ್ರೋಬಯೋಲಜಿಸ್ಟ್ ಹರ್ಷವರ್ಧನ, ಹಿರಿಯಪ್ರಯೋಗಶಾಲಾ ತಂತ್ರಜ್ಞರಾದ ಸುಧೀರ, ಗರ್ಭಿಣಿ-ಬಾಣಂತಿಯರು, ತಾಯಂದಿರು ಹಾಗೂ ಇತರೆ ಸಿಬ್ಬಂದಿಗಳು ಭಾಗವಹಿಸಿದ್ದರು.

# ಕತ್ತಿ ವಿರುದ್ಧ ವಾಲ್ಮೀಕಿ ಸಮುದಾಯ ಪಂಜಿನ ಮೆರವಣಿಗೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲಾ ವಾಲ್ಮೀಕಿ ನಾಯಕ ಮಹಾಸಭಾದ ವತಿಯಿಂದ ಇಂದು ನಗರದ ವಾಲ್ಮೀಕಿ ಭವನದಿಂದ ಅಶೋಕ ವೃತ್ತದ ವರೆಗೆ ಪಂಜಿನ ಮೆರವಣಿಗೆ ನಡೆಸುವ ಮೂಲಕ ವಾಲ್ಮೀಕಿ ಸಮುದಾಯವನ್ನು ಅವಹೇಳನಕಾರಿಯಾಗಿ ನಿಂದಿಸಿದ ಬೆಳಗಾವಿ ಮಾಜಿ ಸಂಸದ ರಮೇಶ್ ಕತ್ತಿಯನ್ನು ಕೂಡಲೇ ಬಂಧಿಸುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸಲಾಯಿತು.




ಈ ಸಂದರ್ಭದಲ್ಲಿ ಮಾತನಾಡಿದ ಸಮುದಾಯದ ಮುಖಂಡ ಟಿ. ರತ್ನಾಕರ ರಾಜ್ಯದ ಬಹುದೊಡ್ಡ ಸಂ-ಖ್ಯೆಯ ವಾಲ್ಮೀಕಿ ಸಮುದಾಯವನ್ನು ನಿಂದಿಸುವ ಮೂಲಕ ರಮೇಶ್ ಕತ್ತಿ ದೊಡ್ಡ ತಪ್ಪು ಮಾಡಿದ್ದಾರೆ, ಸದಾ ಹೋರಾಟದ ಬದುಕನ್ನು ಸಾಗಿಸುವ, ಶಾಂತಿ ಸೌಹಾರ್ದಕ್ಕೆ ಹೆಸರಾಗಿರುವ ವಾಲ್ಮೀಕಿ ಸಮುದಾಯವನ್ನು ಕೆದಕುವ ಮೂಲಕ ರಾಜ್ಯದಲ್ಲಿ ದಂಗೆ ಏಳುವಂತೆ ಮಾಡುತ್ತಿದ್ದಾರೆ ಇದು ಅಕ್ಷಮ್ಯ ಅಪರಾಧ. ಕೂಡಲೇ ಸರ್ಕಾರ ಅವರನ್ನು ಬಂಧಿಸಬೇಕು ಇಲ್ಲವಾದಲ್ಲಿ ತೀವ್ರ ಸ್ವರೂಪದ ಹೋರಾಟ ರೂಪಿಸಲಾಗುವುದು ಎಂದು ಎಚ್ಚರಿಸಿದರು. ಈ ಸಂದರ್ಭದಲ್ಲಿ ವಾಲ್ಮೀಕಿ ನಾಯಕ ಮಹಾಸಭಾ ಅಧ್ಯಕ್ಷ

ಡಾ. ಕೆ. ಎನ್. ಪಾಟೀಲ್, ಜಿಲ್ಲಾ ವಾಲ್ಮೀಕಿ ಗುರುಪೀಠದ ಧರ್ಮದರ್ಶಿ ರಾಮಣ್ಣ ಕಲ್ಲನವರ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷ ಮಂಜುನಾಥ ಜಿ. ಗೊಂಡಬಾಳ, ಮುಖಂಡರುಗಳಾದ ಬಸವರಾಜ ಶಹಪೂರ, ಮಾಜಿ ಜಿ. ಪಂ. ಸದಸ್ಯರುಗಳಾದ ಹನುಮೇಶ ನಾಯಕ ಮತ್ತು ರಾಮಣ್ಣ ಚೌಡಕಿ, ಶಿವಮೂರ್ತಿ ಗುತ್ತೂರ, ಕೋಟೇಶ ದದೇಗಲ್, ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಜ್ಯೋತಿ ಎಂ. ಗೊಂಡಬಾಳ, ರಾಮಣ್ಣ ಬೆಳವಿನಾಳ, ಶಾಂತಪ್ಪ ಬೆಳವಿನಾಳ, ಸೋನು ವದಗನಾಳ, ಶರಣಪ್ಪ ಕನಕಗಿರಿ, ಭೀಮಣ್ಣ ಹವಳೆ, ನಾಗರಾಜ ಇದ್ಲಾಪೂರ, ವಿಶಾಲಾಕ್ಷಮ್ಮ ವಾಲ್ಮೀಕಿ, ಗಂಗಮ್ಮ, ದೀಪಮ್ಮ, ಸಂತೋಷ ಗುದಗಿ, ಲಕ್ಷ್ಮಣ ಚೌಡಕಿ, ರಮೇಶ ಚೌಡಕಿ ಇತರರಿದ್ದರು.

# ಸೈಬರ್ ಅಪರಾಧ ಜಾಗೃತಿ

## ಸಾರ್ವಜನಿಕರಿಗೆ ಅರಿವು ಮೂಡಿಸಿದರು




ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು : ರಾಯಚೂರು ಜಿಲ್ಲಾ ಪೋಲೀಸ್ ಇಲಾಖೆಯ ಲಿಂಗಸುಗೂರು ಉಪವಿಭಾಗದ ವತಿಯಿಂದ ಲಿಂಗಸುಗೂರು ಪೊಲೀಸ್ ಠಾಣೆಯಲ್ಲಿ ಸೈಬರ್ ಅಪರಾಧ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಯಿತು. ಈ ಕಾರ್ಯಕ್ರಮದಲ್ಲಿ ನಾಗರಿಕರಿಗೆ ಇತ್ತೀಚಿನ ಕಾಲದಲ್ಲಿ ಹೆಚ್ಚುತ್ತಿರುವ ಆನ್‌ಲೈನ್ ಮೋಸ, ಬ್ಯಾಂಕ್ ಔಖಿಕ ವಂಚನೆ, ಫೇಕ್ ಲಿಂಕ್‌ಗಳು, ಸಾಮಾಜಿಕ ಮಾಧ್ಯಮದ ಮೂಲಕ ನಡೆಯುವ ಮೋಸ ಪ್ರಕರಣಗಳ ಕುರಿತು ಮಾಹಿತಿ ನೀಡಲಾಯಿತು. ನಾಗರಿಕರು ಅಜ್ಞಾತ ಲಿಂಕ್‌ಗಳಿಗೆ ಕ್ಲಿಕ್ ಮಾಡಬಾರದು, ಖಾಸಗಿ ಮಾಹಿತಿಯನ್ನು ಯಾರಿಗೂ ಹಂಚಿಕೊಳ್ಳಬಾರದು ಎಂದು ಪೊಲೀಸರವರು ಎಚ್ಚರಿಕೆ ನೀಡಿದರು.

ಕಾರ್ಯಕ್ರಮವನ್ನು ಲಿಂಗಸುಗೂರು ಉಪವಿಭಾಗದ ಡಿವೈಎಸ್‌ಪಿ ದತ್ತಾತ್ರೇ-ಯ ಕರ್ನಾಡ್ ನೇತೃತ್ವದಲ್ಲಿ ನಡೆಸಲಾಗಿದ್ದು, ಠಾಣಾಧಿಕಾರಿ, ಪಟೇದಾರ ಪೊಲೀಸ್ ಠಾಣೆಯ ಸಿಬ್ಬಂದಿ, ವರ್ಗದವರರು ಬೈಕ್ ಗಳ ಲಿಂಗಸೂಗೂರು ಪಟ್ಟಣದ ಪ್ರಮುಖ ರಸ್ತೆಗಳಲ್ಲಿ

ಸೈಬರ್ ಸುರಕ್ಷತೆ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಪೊಲೀಸರು ಪೋಸ್ಟರ್ ಪ್ರದರ್ಶನ ನೆಡೆಸಿದರು ನಾಗರಿಕರು ಯಾವುದೇ ರೀತಿಯ ಸೈಬರ್ ವಂಚನೆಗೆ ಒಳಗಾದರೆ ತಕ್ಷಣ 1930 ಅಥವಾ www.cyber-crime.gov.in ಗೆ ದೂರು ನೀಡುವಂತೆ ಕೋರಲಾಯಿತು.

# ಪ್ರಿಯಾಂಕ್ ಖರ್ಗೆ ರವರಿಗೆ ಆರ್.ಎಸ್.ಎಸ್. ಸಂಘಟಕರು ಹಾಗೂ ಬಿಜೆಪಿ ನಾಯಕರಿಂದ ಜೀವ ಬೆದರಿಕೆ:ಕಾಂಗ್ರೆಸ್ ಸಮಿತಿಗಳಿಂದ ಭಾರಿ ಪ್ರತಿಭಟನೆ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು,ಅ.24:ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಐಟಿ-ಬಿಟಿ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ ರವರಿಗೆ ಆರ್.ಎಸ್.ಎಸ್. ಸಂಘಟಕರು ಹಾಗೂ ಬಿಜೆಪಿ ನಾಯಕ-ರಿಂದ ಜೀವ ಬೆದರಿಕೆ ಮತ್ತು ಅವಾಚ್ಯ ನಿಂದನೆಗಳು ಬಂದಿರುವುದನ್ನು ಖಂಡಿಸಿ, ಲಿಂಗಸುಗೂರು ಮತ್ತು ಮುದಗಲ್ ಬ್ಲಾಕ್ ಕಾಂಗ್ರೆಸ್ ಸಮಿತಿಗಳಿಂದ ಭಾರಿ ಪ್ರತಿಭಟನೆ ನಡೆಸಲಾಯಿತು.

ಮಾನ್ಯ ಪ್ರಿಯಾಂಕ್ ಖರ್ಗೆ ಅವರು ದಿನಾಂಕ 4 ಅಕ್ಟೋಬರ್ 2025ರಂದು ಮುಖ್ಯಮಂತ್ರಿಗಳಿಗೆ ಪತ್ರ ಬರೆದು, ಆರ್.ಎಸ್.ಎಸ್. ಸಂಘಟನೆಯು ಸರ್ಕಾರಿ ಮತ್ತು ಅನುದಾನಿತ ಶಾಲೆಗಳು ಹಾಗೂ ಸಾರ್ವಜನಿಕ ಮೈದಾನಗಳಲ್ಲಿ ಅನುಮತಿ ಇಲ್ಲದೆ ಶಾಖೆ, ಸಾಂಘಿಕ ಚಟುವಟಿಕೆಗಳನ್ನು ನಡೆಸುತ್ತಿರುವುದರಿಂದ ಯುವಕರಲ್ಲಿ ಅಸಂವಿಧಾನಿಕ ಮತ್ತು ನಕಾರಾತ್ಮಕ ಚಿಂತನೆ ಮೂಡುತ್ತಿದೆ ಎಂದು ತಿಳಿಸಿದ್ದಾರೆ. ಈ ಪತ್ರದ ಅರ್ಥವನ್ನು ತಪ್ಪಾಗಿ ತಿರುಚಿ, ಖರ್ಗೆ ಅವರನ್ನು ಆರ್.ಎಸ್.ಎಸ್. ನಿಷೇಧಕ್ಕೆ ಕರೆ ನೀಡಿದರು ಎಂದು ಆರೋಪಿಸಿ ಬಿಜೆಪಿ ನಾಯಕರು ಮತ್ತು ಸಂಘಟಕರು ಸಚಿವರ ವಿರುದ್ಧ ಅಪಮಾನಕಾರಿ ಟೀಕೆ ನಡೆಸಿದ್ದಾರೆ.

ಇದಲ್ಲದೇ ಕೆಲವರು ದೂರವಾಣಿ ಕರೆ ಮೂಲಕ ಅವಾಚ್ಯ ಶಬ್ದಗಳಿಂದ ನಿಂದನೆ ಮಾಡಿ, ಜೀವ ಬೆದರಿಕೆ ಹಾಕಿರುವ ಘಟನೆಗೆ ಕಾಂಗ್ರೆಸ್ ಕಾರ್ಯಕರ್ತರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಚಿತ್ತಾಪೂರ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯು "ಇದುವರೆಗೂ ಫೋನ್‌ನಲ್ಲಿ ಮಾತ್ರ ಬೆದರಿಕೆ ಹಾಕಲಾಗಿದೆ, ಮುಂದೆ ಮನೆಯವರೆಗೂ ಬರಬಹುದು" ಎಂಬ ಹೇಳಿಕೆ ನೀಡಿದ್ದು, ಇದು ಒಬ್ಬ ಸಚಿವರ ಜೀವಕ್ಕೆ ನೇರ ಅಪಾಯ ಉಂಟುಮಾಡುವಂತಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಈ ಹಿನ್ನೆಲೆಯಲ್ಲಿ ಲಿಂಗಸುಗೂರು ಮತ್ತು ಮುದಗಲ್ ಬ್ಲಾಕ್ ಕಾಂಗ್ರೆಸ್ ಸಮಿತಿಗಳಿಂದ ಮಾನ್ಯ ರಾಜ್ಯಪಾಲರು ಹಾಗೂ ಕರ್ನಾಟಕ ಸರ್ಕಾರದ ಗಮನಕ್ಕೆ ಮನವಿ ಸಲ್ಲಿಸಲಾಗಿದ್ದು, ಪ್ರಿಯಾಂಕ್ ಖರ್ಗೆ ಅವರಿಗೆ ಸೂಕ್ತ ಭದ್ರತೆ ಒದಗಿಸಬೇಕು ಹಾಗೂ ಜೀವ ಬೆದರಿಕೆ ಹಾಕಿದ ಮತ್ತು ಅವಾಚ್ಯ ಶಬ್ದಗಳಿಂದ ನಿಂದಿಸಿದವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಲಾಯಿತು.

ಪ್ರತಿಭಟನೆಯನ್ನು ಲಿಂಗಸುಗೂರು ಕ್ಷೇತ್ರದ ಮಾಜಿ ಶಾಸಕ ಡಿ.ಎಸ್. ಹೂಲಗೇರಿ ರವರ ನೇತೃತ್ವದಲ್ಲಿ ಸುಮಾರು 2000ಕ್ಕೂ ಹೆಚ್ಚು ಕಾಂಗ್ರೆಸ್ ಕಾರ್ಯಕರ್ತರು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಲಿಂಗಸುಗೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗೋವಿಂದ ನಾಯಕ, ಮುದಗಲ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಿವಶಂಕರಗೌಡ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಸವರಾಜ ಜೆಲ್ಲಿ, ಲಿಂಗಸುಗೂರು ಎಪಿಎಂಸಿ ಅಧ್ಯಕ್ಷ ಅಮರೇಶ ಹಿರೇಹೆಸರೂರು, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ವೆಂಕಟೇಶ ಗುತ್ತೇದಾರ, ಪ್ರಚಾರ ಸಮಿತಿ ಅಧ್ಯಕ್ಷ ಮಹ್ಮದ್ ರಫೀ, ಹಿರಿಯ ಮುಖಂಡ ಹೆಚ್. ಮುದಕಪ್ಪ ವಕೀಲರು, ಪದವೀಧರ ವಿಭಾಗ ಅಧ್ಯಕ್ಷ ಸಂಜೀವಪ್ಪ ಚಲುವಾದಿ, ಪರಿಶಿಷ್ಟ ಜಾತಿ ವಿಭಾಗ ಅಧ್ಯಕ್ಷ ಉಮೇಶ ಹುನ್ನಕುಂಟಿ, ಪರಿಶಿಷ್ಟ ಪಂಗಡ ವಿಭಾಗ ಅಧ್ಯಕ್ಷ ಸಂಗಮೇಶ ನಾಯಕ, ಯುವ ಕಾಂಗ್ರೆಸ್ ಅಧ್ಯಕ್ಷ ಮೌನೇಶ ಪೂಜಾರಿ, ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೀವನಕುಮಾರ ಬಾಳೆಗೌಡ್ರು ಹಾಗೂ ಹಲವಾರು ಕಾಂಗ್ರೆಸ್ ನಾಯಕರೊಂದಿಗೆ ನೂರಾರು ಕಾರ್ಯಕರ್ತರು ಉಪಸ್ಥಿತರಿದ್ದರು.

# ಇಂದು ಕವಿ ಸಮ್ಮೇಳನ ಹಾಗೂ ಮುಶಾಯರಾ ಕೊಪ್ಪಳಕ್ಕೆ 15 ಜನ ರಾಷ್ಟ್ರೀಯ ಕವಿಗಳ ಆಗಮನ

ಮಲ್ಲಮ್ಮ ನುಡಿ ವಾರ್ತೆ




ಕೊಪ್ಪಳ : ನಗರದ ಸಾಹಿತ್ಯ ಭವನದಲ್ಲಿ ದಿ, 25 ರ ಶನಿವಾರ ರಾತ್ರಿ 9:00 ಗಂಟೆಗೆ ಅಖಿಲ ಭಾರತ ಬೃಹತ್ ಕವಿಗೋಷ್ಠಿ ಹಾಗೂ ಮುಷಾಯರಾ ಕಾರ್ಯಕ್ರಮ ಪ್ರತಿ ವರ್ಷದಂತೆ ಈ ವರ್ಷವೂ ಸಹ ಕರ್ನಾಟಕ ಉರ್ದು ಅಕಾಡೆಮಿ ಅವರ ಸಂಯುಕ್ತ ಆಶ್ರಯ ದಲ್ಲಿ ಜರುಗಲಿದೆ ಇದರಲ್ಲಿ ಹದಿನೈದು ಜನ ಉರ್ದು ಮತ್ತು ಹಿಂದಿ ರಾಷ್ಟ್ರ ಮಟ್ಟದ ಕವಿಗಳು ಕೊಪ್ಪಳಕ್ಕೆ ಆಗಮಿಸಲಿದ್ದಾರೆ ಎಂದು ನಗರದ ಫಿರದೋಸ್ ಸಾಂಸ್ಕೃತಿ ಕ್ರೀಡೆ ಮತ್ತು ತರಬೇತಿ ಸಂಸ್ಥೆ ಯ ಅಧ್ಯಕ್ಷರಾದ ಮೊಹಮ್ಮದ್ ರಫಿಯುದ್ದೀನ್ ಅಹಮದ್ ರವರು ತಿಳಿಸಿದ್ದಾರೆ,

ಸದರಿ ಬೃಹತ್ ಕವಿ ಸಮ್ಮೇಳನ ಹಾಗೂ ಉರ್ದು ಮುಷಾಯರಾ ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಮತ್ತು ಅಂತರಾಷ್ಟ್ರ ಮಟ್ಟದ ಉರ್ದು ಹಿಂದಿ ಸಾಹಿತಿ ಮತ್ತು ಕವಿಗಳು ಪಾಲ್ಗೊಂಡು ಕವನ ವಾಚನ ಮಾಡಲಿದ್ದಾರೆ,

ಅಂದು ರಾತ್ರಿ ಒಂಬತ್ತು ಗಂಟೆಯಿಂದ ಬೆಳಗಿನ ಜಾವದ ವರೆಗೆ ನಡೆಯಲಿರುವ ಕಾರ್ಯಕ್ರಮದಲ್ಲಿ ನಮ್ಮ ದೇಶದ ಹಿರಿಯ ಕವಿ ಮತ್ತು ಸಾಹಿತಿಗಳಾದ ಗಾಜಿಯಾ ಬಾದಿನ ಗೋವಿಂದ್ ಗುಲ್ಶನ್, ಶಕೀಲ್ ಅಹಮದ್ ಮುಂಬೈ, ನದೀಮ್ ಶಾದ್ ದೇವಬಂಧ ,ಸುರೇಂದರ್ ಸಿಂಗ್ ಶಜರ್, ಅಬರಾರ ಕಾಶಿಫ್ ಅಮರಾವತಿ, ಅನಾ ದೆಹಲ್ವಿ ದೆಹಲಿ, ಹಾಮಿದ ಭೂಸಾವಲ್ಲಿ, ಚಾಚಾ ಪಾಲಂಪುರಿ ತೆಲಂಗಾಣ, ಚಾಂದನಿ ಪಾಂಡೆ ಕಾನ್ಪುರ್, ಸಿರಾಜ್ ಸೋಲಾಪುರಿ ಮುಂಬೈ, ಸುಹಾನಾ ನಾಜ್ ಮುಂಬೈ, ವಿನೀತ್ ಶಂಕರ್ ಪುಣೆ, ರಾಧಿಕಾ ಮಿತ್ತಲ್ ದೆಹಲಿ, ಮಡ್ಡಿ ಕ್ರಸ್ಟಿ ಪುಣೆ, ಹಾಗೂ ರಾಯಚೂರಿನ ಡಾ, ಇಫ್ತೆಕಾರ್ ಶಕೀಲ್, ಮತ್ತು ಸ್ಥಳೀಯ ಕೊಪ್ಪಳದ ಹಿರಿಯ ಸಾಹಿತಿ ಮತ್ತು ಕವಿಗಳಾದ ಅನ್ವರ್ ಹುಸೇನ್, ಮೌಲಾನ ಮಹಮ್ಮದ್ ಅಲಿ ಹಿಮಾಯಿತಿ ಹಾಗೂ ವಿಜಾರತ್ ಅಲಿ ತಾಯರ್ ರವರು ತಮ್ಮ ಕವನ ವಾಚನ ಮಾಡಲಿದ್ದಾರೆ ಇದರಲ್ಲಿ ಇಬ್ಬರು ಹಾಸ್ಯ ಕವಿಗಳು ಪಾಲ್ಗೊಂಡು ಎಲ್ಲರನ್ನು ಭಾರಿ ಪ್ರಮಾಣದ ಹಾಸ್ಯಮಯ ಕವನ ವಾಚನ ಮಾಡಿ ಜನರನ್ನು ರಂಜಿಸಲಿದ್ದಾರೆ, ಇದರ ನಿರೂಪಣೆಯನ್ನು ಕೊಪ್ಪಳದ ಉರ್ದು ಸಾಹಿತಿ ಮೊಹಮ್ಮದ್ ಬದಿಯುದ್ದೀನ್ ಅಹಮದ್ ನವೀದ ರವರು ನೆರವೇರಿಸಲಿದ್ದಾರೆ,

ಕಾರ್ಯಕ್ರಮದಲ್ಲಿ ಜಿಲ್ಲೆಯ ಜನಪ್ರತಿನಿಧಿಗಳು ವಿವಿಧ ಗಣ್ಯರು ಅಧಿಕಾರಿ ವರ್ಗದವರು ಕರ್ನಾಟಕ ಉರ್ದು ಅಕಾಡೆಮಿಯ ಅಧ್ಯಕ್ಷ ಮತ್ತು ಸದಸ್ಯರು ಪಾಲ್ಗೊಳ್ಳಲಿದ್ದಾರೆ,

ಸದರಿ ಬೃಹತ್ ಮುಷಾಯರಾ ಕಾರ್ಯಕ್ರಮದಲ್ಲಿ ಕೊಪ್ಪಳ ನಗರ ಮತ್ತು ಸುತ್ತಮುತ್ತಲಿನ ಊರಿನ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಸದರಿ ಕಾರ್ಯಕ್ರಮದಲ್ಲಿ ಮಹಿಳೆಯರಿಗೆ ಪ್ರತ್ಯೇಕ ಆಸನದ ವ್ಯವಸ್ಥೆಯನ್ನು ಸಹ ಮಾಡಲಾಗಿದೆ ಎಂದು ಕಾರ್ಯಕ್ರಮ ಸಂಘಟಕ ಸಮಿತಿಯ ಸಂಚಾಲಕರು ಪ್ರಕಟಣೆಯಲ್ಲಿ ತಿಳಿಸಿ ಸರ್ವರನ್ನು ಸ್ವಾಗತಿಸಿದ್ದಾರೆ,

# ದುಂಡಾಣು ಎಲೆ ಅಂಗಮಾರಿ ರೋಗ ನಿರ್ವಹಣೆಗೆ ಅಗತ್ಯ ಕ್ರಮಕೈಗೊಳ್ಳಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 24 -ಜಿಲ್ಲೆಯಲ್ಲಿ ಇತ್ತೀಚೆಗೆ ಸುರಿಯುತ್ತಿರುವ ಮಳೆಯಿಂದ ಸಿಂಧನೂರು ತಾಲ್ಲೂಕಿನ ಕೆಲವೊಂದು ಗ್ರಾಮಗಳಲ್ಲಿ ಭತ್ತದ ಬೆಳೆಯಲ್ಲಿ ದುಂಡಾಣು ಎಲೆ ಅಂಗಮಾರಿ ರೋಗ ಕಂಡುಬಂದಿದ್ದು, ರಾಯಚೂರಿನ ಕೃಷಿ ವಿಶ್ವವಿದ್ಯಾಲಯದ ವಿಜ್ಞಾನಿಗಳು ತಿಳಿಸಿರುವಂತೆ ಹೆಚ್ಚಿನ ಮಳೆ/ ತೇವಾಂಶವು ದುಂಡಾಣು ಎಲೆ ಅಂಗಮಾರಿ ರೋಗವು ಉಲ್ಬಣಗೊಳ್ಳಲು ಅನುಕೂಲಕರವಾದ ವಾತಾವರಣವಾಗಿದ್ದು, ರೋಗದ ನಿರ್ವಹಣಾ ಕ್ರಮಗಳನ್ನು ಕೈಗೊಳ್ಳುವಂತೆ ಕೋರಲಾಗಿದೆ.

ದುಂಡಾಣು ಎಲೆ ಅಂಗಮಾರಿ ರೋಗ ನಿರೋದಕ ತಳಿಗಳಾದ ಆರ್.ಪಿ.ಬಯೋ 226 (ಸುಧಾರಿತ ಸೋನಾ ಮಸೂರಿ) ಮತ್ತು ಡಿ.ಆರ್. ಆರ್ ದಾನ್ 53 ಬೆಳೆಯುವುದು. ಬಿತ್ತನೆ ಬೀಜವನ್ನು ಸ್ಟೆಪ್ಟೋಸೈಕ್ಲಿನ 0.1 ಗ್ರಾಂ. ಮತ್ತು 0.5 ಗ್ರಾಂ. ತಾಮ್ರದ ಆಕ್ಸಿಕ್ಲೋರೈಡ್ 50 ಡಬ್ಲೂಪಿ ಪ್ರತಿ ಲೀಟರ್ ನೀರಿನಲ್ಲಿ ಕರಗಿಸಿ ತಯಾರಿಸಿದ ದ್ರಾವಣದಲ್ಲಿ ಇಪ್ಪತ್ತು ನಿಮಿಷಗಳ ಕಾಲ ನೆನಸಿ ಬಿತ್ತಬೇಕು. ಕಣಿವೆಗಳಲ್ಲಿ ಬೆಳೆದ ಕಳೆಗಳನ್ನು ತೆಗೆದು ಬದುಗಳನ್ನು ಸ್ವಚ್ಛವಾಗಿಡಬೇಕು. ಹೊಲದಲ್ಲಿ ರೋಗದ ಲಕ್ಷಣ ಕಂಡ ತಕ್ಷಣ ಸ್ಟೆಪ್ಟೋಸೈಕ್ಲಿನ 0.1 ಗ್ರಾಂ. ಮತ್ತು 0.5 ಗ್ರಾಂ. ತಾಮ್ರದ ಆಕ್ಸಿಕ್ಲೋರೈಡ್ 50 ಡಬ್ಲೂಪಿ ಪ್ರತಿ ಲೀಟರ್ ನೀರಿನಲ್ಲಿ ಕರಗಿಸಿ ಸಿಂಪಡಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಆಯಾ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಚೇರಿ, ಕೃಷಿ ವಿಸ್ತರಣಾ ಘಟಕ ಅಥವಾ ಕೃಷಿ ವಿಜ್ಞಾನ ಕೇಂದ್ರವನ್ನು ಸಂಪರ್ಡಿಸುವಂತೆ ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ: 9449732000

# ವೈದ್ಯಾಧಿಕಾರಿಗಳು ಸಕಾಲದಲ್ಲಿ ಸೇವೆ ಒದಗಿಸಿ ತಾಯಿ ಮರಣ ತಡೆಗಟ್ಟಿ: ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.24-ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿಯವರು ನಿರಂತರ ನಿಗಾವಣೆಯೊಂದಿಗೆ ಸಕಾಲದಲ್ಲಿ ಸೇವೆ ಒದಗಿಸುವ ಮೂಲಕ ತಾಯಿ ಮರಣ ತಡೆಗಟ್ಟಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್‌ಬಾಬು ಅವರು ಸೂಚಿಸಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬಿಎಂಸಿಆರ್‌ಸಿ, ಪ್ರಾಥಮಿಕ ಆರೋಗ್ಯ ಕೇಂದ್ರಗಳ ವೈದ್ಯಾಧಿಕಾರಿಗಳು ಹಾಗೂ ಕ್ಷೇತ್ರ ಸಿಬ್ಬಂದಿಯವರೊಂದಿಗೆ ತಾಯಿ ಮರಣ ಕುರಿತು ಜಿಲ್ಲಾ ಮಟ್ಟದ ಉಪಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಗರ್ಭಿಣಿ ಮತ್ತು ಬಾಣಂತಿಯರ ಮರಣವನ್ನು ಶೂನ್ಯಕ್ಕೆ ತರಲು ಸೂಕ್ತ ಮುಂಜಾಗ್ರತೆಯೊಂದಿಗೆ ಕ್ರಮವಹಿಸಬೇಕು. ಗಂಭೀರ ಸಮಸ್ಯೆಗಳು ಕಂಡುಬಂದಾಗ ಪಾಲಕರಿಗೆ ತಿಳಿಸಿ ಮನವರಿಕೆ ಮಾಡಬೇಕು. ಚಿಕಿತ್ಸೆ ಅಗತ್ಯವಿದ್ದಲ್ಲಿ ಮಾತ್ರ ಮೇಲ್ಮಟ್ಟದ ಆಸ್ಪತ್ರೆಗೆ ಮುಂಚಿತವಾಗಿ ಮಾಹಿತಿ ನೀಡಿ ಆಂಬ್ಯುಲೆನ್ಸ್‌ನಲ್ಲಿ ಕಳುಹಿಸಬೇಕು. ಮನೆಯಲ್ಲಿ ಹೆರಿಗೆ ಮಾಡಿಸುವುದರಿಂದ ತಾಯಿ ಮಗುವಿಗೆ ಉಂಟಾಗುವ ತೊಂದರೆಗಳ ಬಗ್ಗೆ ಮಾಹಿತಿ ನೀಡಿ, ಆಸ್ಪತ್ರೆಯಲ್ಲಿ ಹೆರಿಗೆ ಮಾಡಿಸಲು ಇರುವ ವೈದ್ಯಕೀಯ ಸೌಲಭ್ಯಗಳ ಬಗ್ಗೆ ಕ್ಷೇತ್ರ ಮಟ್ಟದಲ್ಲಿ ಸಾರ್ವಜನಿಕರಿಗೆ ಜಾಗೃತಿ ನೀಡಬೇಕು ಎಂದು ವೈದ್ಯಾಧಿಕಾರಿಗಳಿಗೆ ತಿಳಿಸಿದರು.

ಗರ್ಭಿಣಿ ಎಂದು ತಿಳಿದ ದಿನದಿಂದಲೇ ಗರ್ಭಿಣಿಗೆ ಕಂಡು ಬರಬಹುದಾದ ಸಾಮಾನ್ಯ ಗಂಭೀರ ಸಮಸ್ಯೆಗಳ ಕುರಿತು ಮುತುವರ್ಜಿ ವಹಿಸಲು ಕ್ಷೇತ್ರ ಮಟ್ಟದ ಸಿಬ್ಬಂದಿಯವರು ಸದಾ ತಾಯಿಯೊಂದಿಗೆ ಹಾಗೂ ಪಾಲಕರೊಂದಿಗೆ ಸಂಪರ್ಕದಲ್ಲಿರಬೇಕು ಎಂದು ನಿರ್ದೇಶನ ನೀಡಿದರು.

ಕಬ್ಬಿಣಾಂಶ ಮಾತ್ರೆಗಳನ್ನು ನುಂಗಿಸುವ ಮೂಲಕ ರಕ್ತಹೀನತೆ ತಡೆಯಲು ಮತ್ತು ನಿಗಧಿತವಾಗಿ ರಕ್ತದೊತ್ತಡ, ಸಕ್ಕರೆ ಕಾಯಿಲೆ, ಹೆಚ್.ಐ.ವಿ ಹೆಚ್‌ಬಿಸಿಜಿ ಪರೀಕ್ಷೆಯನ್ನು ಕೈಗೊಳ್ಳುವಂತೆ ಸೂಚಿಸಬೇಕು. ಸ್ಕ್ಯಾನಿಂಗ್ ಅವಶ್ಯಕತೆ ಇದ್ದಲ್ಲಿ ವೈದ್ಯರ ಸಲಹೆಯಂತೆ ಮಾಡಿಸಿ ತಾಯಿ ಆರೋಗ್ಯದ ಬಗ್ಗೆ ಕಾಳಜಿ ವಹಿಸುವ ಕಾರ್ಯ ಮಾಡಬೇಕು ಎಂದು ಹೇಳಿದರು.

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ಮಾತನಾಡಿ, ಹದಿಹರೆಯದ ಗರ್ಭಿಣಿಯರು ಕಂಡುಬಂದಲ್ಲಿ ಅವರಿಗೆ ಆಪ್ತಸಮಾಲೋಚನೆ ನಡೆಸಿ ಅವರ ಆರೋಗ್ಯ ಹಿತದೃಷ್ಟಿಯಿಂದ ಗರ್ಭಾಪಾತ ಮಾಡಿಸಬೇಕು ಹಾಗೂ ಬೇಗ ಗರ್ಭ ಧರಿಸದೇ ಇರಲು ಕುಟುಂಬ ಕಲ್ಯಾಣ ಅಂತರ ವಿಧಾನಗಳನ್ನು ಆಪ್ತಸಮಾಲೋಚನೆ ಮೂಲಕ ಮನವೊಲಿಸಬೇಕು ಎಂದು ತಿಳಿಸಿದರು. ಶೇ.25ಕ್ಕಿಂತ ದೇಹದ ತೂಕ ಕಡಿಮೆ ಇರುವ ಗರ್ಭಿಣಿಯರಿಗೆ ಹೆಚ್ಚಿನ ಗಮನ ಹರಿಸಿ, ಆಸ್ಪತ್ರೆಯಲ್ಲಿ ಹೆರಿಗೆಯಾದಲ್ಲಿ ಸಹಜ ಹೆರಿಗೆಗೆ 3 ದಿನಗಳು, ಸಿಜೇರಿಯನ್ ಹೆರಿಗೆಗೆ ಏಳು ದಿನಗಳ ಕಾಲ ಕಡ್ಡಾಯವಾಗಿ ದಾಖಲು ಮಾಡಿಕೊಂಡು ನಿರಂತರವಾಗಿ ತಾಯಿಯ ಆರೋಗ್ಯದ ಕುರಿತು ಪರಿಶೀಲಿಸುವ ಮೂಲಕ ವೈದ್ಯರು ಮತ್ತು ಸಿಬ್ಬಂದಿಯವರು ಯಾವುದೇ ಲೋಪವಿಲ್ಲದಂತೆ ಕರ್ತವ್ಯ ನಿರ್ವಹಿಸಬೇಕು ಎಂದು ವೈದ್ಯಾಧಿಕಾರಿಗಳಿಗೆ ಸೂಚಿಸಿದರು.

ಜನನಿ ಶಿಶು ಸುರಕ್ಷಾ ಕಾರ್ಯಕ್ರಮ ಯೋಜನೆಯಡಿ ದೊರಕುವ ಉಚಿತ ಊಟ, ಉಚಿತ ಔಷಧಿ, ಉಚಿತ ರಕ್ತ, ಉಚಿತ ಪರೀಕ್ಷೆ, ಉಚಿತ ನಗು-ಮಗು ವಾಹನ ಮೂಲಕ ಮನೆಗೆ ಬಿಡುವ ಕುರಿತು ಹಾಗೂ ಜನನಿ ಸುರಕ್ಷಾ ಯೋಜನೆಯಡಿ ಸಹಾಯಧನವನ್ನು ಅವರ ಖಾತೆಗೆ ಜಮೆ ಮಾಡುವ ಬಗ್ಗೆ ನಿಗಾ ವಹಿಸುವುದರ ಮೂಲಕ ತಾಯಿ ಮತ್ತು ಮಗುವಿನ ಕಾಳಜಿಯೊಂದಿಗೆ ತಾಯಿ ಮರಣಗಳನ್ನು ಶೂನ್ಯಕ್ಕೆ ತರಲು ಸಾಧ್ಯ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಿಎಮ್‌ಸಿಆರ್‌ಸಿ ಪ್ರಸೂತಿ ವಿಭಾಗದ ಡಾ.ರಾಮರಾಜ್, ಜಿಲ್ಲಾ ಆಸ್ಪತ್ರೆಯ ಪ್ರಸೂತಿ ತಜ್ಞೆ ಡಾ.ಶ್ರೀಲಕ್ಷ್ಮೀ, ಪ್ರಭಾರಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಮ್, ಡಿಎನ್‌ಓ ಗಿರೀಶ್ ಸೇರಿದಂತೆ ವೈದ್ಯಾಧಿಕಾರಿಗಳು, ಕ್ಷೇತ್ರ ಸಿಬ್ಬಂದಿಗಳು ಇತರರು ಉಪಸ್ಥಿತರಿದ್ದರು.

# ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ನೋಂದಣಿ ಅಚ್ಚುಕಟ್ಟಾಗಿ ನಡೆಯಲಿ: ಜಿಪಂ ಸಿಇಓ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 24 : ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣಾ ಮತದಾರರ ನೋಂದಣಿ ಪ್ರಕ್ರಿಯೆ ಈಗಾಗಲೇ ಆರಂಭವಾಗಿದ್ದು, ನಿರೀಕ್ಷಿತ ಮಟ್ಟದಲ್ಲಿ ನೋಂದಣಿಗೆ ಕ್ರಮ ವಹಿಸಬೇಕು. ಇದಕ್ಕಾಗಿ ಎಲ್ಲಾ ಅಧಿಕಾರಿಗಳು, ನೋಡಲ್ ಅಧಿಕಾರಿಗಳು ಪ್ರೌಢಶಾಲೆ, ವಿಶ್ವವಿದ್ಯಾಲಯ, ವೈದ್ಯಕೀಯ ಕಾಲೇಜುಗಳು, ಪದವಿಪೂರ್ವ, ಪದವಿ ಕಾಲೇಜುಗಳಲ್ಲಿ ವ್ಯಾಪಕ ಪ್ರಚಾರ ಮಾಡಿ ನೋಂದಣಿ ಸಂಖ್ಯೆಯನ್ನು ಹೆಚ್ಚಿಸುವಂತೆ ಸ್ವೀಪ್ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕುಮಾರ್ ಕಾಂದೂ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಭಾರತ ಚುನಾವಣಾ ಆಯೋಗದ ಹಾಗೂ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರ ನಿರ್ದೇಶನದಂತೆ ದಿನಾಂಕ: 06.11.2025ರೊಳಗೆ ಮತದಾರರ ನೋಂದಣಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕಿದೆ.

ಆದ್ದರಿಂದ ಎಲ್ಲಾ ಅರ್ಹ ಮತದಾರರ ನೋಂದಣಿಯನ್ನು ಮಾಡಿಸಲು ಅಕ್ಟೋಬರ್ 27, 30 ಹಾಗೂ ನವಂಬರ್ 03ರಂದು ಮತದಾರರ ಮಿಂಚಿನ ನೋಂದಣಿ ಅಭಿಯಾನ ಆಯೋಜಿಸಲು ಅಧಿಸೂಚನೆಯನ್ನು ಹೊರಡಿಸಲಾಗಿದ್ದು, ಅಭಿಯಾನದ ದಿನಾಂಕಗಳಂದು ಮಹಾನಗರ ಪಾಲಿಕ ಆಯುಕ್ತರು, ತಹಶೀಲ್ದಾರರು ಹಾಗೂ ಸಹಾಯಕ ಮತದಾನ ನೋಂದಣಾಧಿಕಾರಿಗಳು ತಮ್ಮ ಕ್ಷೇತ್ರವ್ಯಾಪ್ತಿಗೆ ಒಳಪಡುವ ಎಲ್ಲಾ ತಾಲೂಕು ಮಟ್ಟದ ಅಧಿಕಾರಿಗಳ ಸೇವೆಯನ್ನು ಪಡೆದು ಅವರೊಂದಿಗೆ ಕಂದಾಯ ಇಲಾಖೆ, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಇತರೆ ಇಲಾಖೆಯ ಅಧಿಕಾರಿಗಳೊಂದಿಗೆ ತಂಡಗಳನ್ನು ರಚಿಸಿ ಅರ್ಹ ಶಿಕ್ಷಣ ಸಂಸ್ಥೆಗಳನ್ನು ಗುರುತಿಸಿ ಅಲ್ಲಿ ನೋಂದಣಿಗಾಗಿ ಅರ್ಹರಿರುವ ಮತದಾರರನ್ನು ಕಚೇರಿ ಮುಖ್ಯಸ್ಥರ ಮುಖಾಂತರ ಸಂಪರ್ಕಿಸಿ, ನಿಗದಿಪಡಿಸಿದ ಸಮಯದೊಳಗೆ ನಿಯಮಾನುಸಾರ ನಮೂನೆ-19ರ ಅರ್ಜಿಯೊಂದಿಗೆ ಪೂರಕ ದಾಖಲೆಗಳನ್ನು ಸ್ವೀಕರಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಜಿಲ್ಲಾ ಮಟ್ಟದಲ್ಲಿ ಸಂಬಂಧಿಸಿದ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರು, ಕಲಬುರಗಿ ಕಾಲೇಜು ಶಿಕ್ಷಣ ಇಲಾಖೆಯ ಜಂಟಿ ನಿರ್ದೇಶಕರು, ವಿಶ್ವವಿದ್ಯಾನಿಲಯದ ಕುಲಸಚಿವರು ಹಾಗೂ ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ನೋಡಲ್ ಅಧಿಕಾರಿಗಳೆಂದು ನೇಮಕ ಮಾಡಿ ಆದೇಶಿಸಲಾಗಿದ್ದು, ಈ ಎಲ್ಲಾ ಅಧಿಕಾರಿಗಳು ಕೂಡಲೇ ಅರ್ಹ ಮತದಾರರನ್ನು ಗುರುತಿಸಿ ನೋಂದಣಿಗಾಗಿ ಅರ್ಜಿಗಳನ್ನು ಸ್ವೀಕರಿಸಲು ವ್ಯಾಪಕ ಪ್ರಚಾರ ನೀಡಲು ಮತ್ತು ಅರ್ಜಿ ಸ್ವೀಕೃತಿ ಸಂಖ್ಯೆಯನ್ನು ಹೆಚ್ಚಿಸಬೇಕು ಎಂದು ಸೂಚನೆ ನೀಡಿದ್ದಾರೆ. ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ-2026ರ ಚುನಾವಣೆಯ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವ ಸಂಬಂಧ ಜಿಲ್ಲಾ ಮಟ್ಟದ ಮೇಲ್ವಿಚಾರಣಾಧಿಕಾರಿಯನ್ನಾಗಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಯವರನ್ನು ನೇಮಿಸಲಾಗಿದ್ದು, ಸಂಬಂಧಿಸಿದ ಅಧಿಕಾರಿಗಳು ಪ್ರತಿ ದಿನ ಮಾಹಿತಿಯನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ನೀಡಿ ಅದರ ವರದಿಯನ್ನು ಕಡ್ಡಾಯ ಸಲ್ಲಿಸಬೇಕೆಂದು ಸೂಚನೆ ನೀಡಿದ್ದಾರೆ.

### ಬಳ್ಳಾರಿ: ಹೆಣ್ಣು ಮಕ್ಕಳ ಜನ್ಮೋತ್ಸವ ಕಾರ್ಯಕ್ರಮದಲ್ಲಿ ನ್ಯಾ.ರಾಜೇಶ್ ಎನ್.ಹೊಸಮನೆ ಹೇಳಿಕೆ

# ವಿವಿಧ ಕ್ಷೇತ್ರಗಳಲ್ಲಿ ಹೆಣ್ಣು ಮಕ್ಕಳ ಸಾಧನೆ ಅಪಾರ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.24–ಸಮಾಜದಲ್ಲಿ ಹೆಣ್ಣು-ಗಂಡುಎರಡುಕಣ್ಣುಗಳಿದ್ದಂತೆ, ಇತ್ತೀಚಿನ ದಿನಗಳಲ್ಲಿ ಎಲ್ಲಾ ಕ್ಷೇತ್ರದಲ್ಲಿ ಹೆಣ್ಣು ಮಕ್ಕಳು ಸಾಧನೆಗೈತ್ತಿರುವುದು ಸಂತಸದ ವಿಷಯವಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಹೇಳಿದರು.



ಜಿಲ್ಲಾಡಳಿತ,ಜಿಲ್ಲಾಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ,ಪೊಲೀಸ್ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಬೇಟಿ ಬಚಾವೋ ಬೇಟಿ ಪಡಾವೋ ಅಭಿಯಾನದಡಿ ಅಂತರಾಷ್ಟ್ರೀಯ ಹೆಣ್ಣುಮಕ್ಕಳ ದಿನಾಚರಣೆ ಅಂಗವಾಗಿ ನಗರದ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಶುಕ್ರವಾರ ಆಯೋಜಿಸಿದ್ದ ಹೆಣ್ಣುಮಕ್ಕಳ ಜನ್ಮೋತ್ಸವಕಾರ್ಯಕ್ರಮಉದ್ಘಾಟಿಸಿ ಅವರು ಮಾತನಾಡಿದರು.

ದೇಶದ ರಾಷ್ಟ್ರಪತಿಯವರು ಮತ್ತು ನಮ್ಮ ಜಿಲ್ಲೆಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಇನ್ನಿತರೆ ಉನ್ನತ ಹುದ್ದೆಗಳಲ್ಲಿ ಹೆಣ್ಣು ಮಕ್ಕಳು ಸೇವೆ ಸಲ್ಲಿಸುತ್ತಿದ್ದಾರೆ. ಇತ್ತೀಚೆಗೆ ನಡೆದ ಆಪರೇಷನ್ ಸಿಂಧೂರ ಎಂಬ ಕಾರ್ಯಾಚರಣೆಯನ್ನೂ ಹೆಣ್ಣುಮಕ್ಕಳು ನಿರ್ವಹಿಸಿರುವುದು ಹೆಮ್ಮೆಯ ವಿಚಾರ. ಸಮಾಜದಲ್ಲಿ ಅವರಿಗೆ ಶಿಕ್ಷಣ, ಸಮಾನತೆ, ಮೂಲಭೂತ ಸೌಲಭ್ಯಗಳನ್ನು ದೊರಕಿಸಿಕೊಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಹೇಳಿದರು.

ಪ್ರಸ್ತುತ ದಿನಗಳಲ್ಲಿ ಬಾಲ್ಯವಿವಾಹ, ಹೆಣ್ಣು ಭ್ರೂಣ ಹತ್ಯೆ, ಲೈಂಗಿಕ ಶೋಷಣೆ, ಲಿಂಗ ತಾರತಮ್ಯ ಸೇರಿದಂತೆ ಇನ್ನಿತರೆ ದೌರ್ಜನ್ಯಗಳು ಹೆಣ್ಣುಮಕ್ಕಳ ಮೇಲೆ ನಡೆಯುತ್ತಿವೆ. ಇವುಗಳನ್ನು ಪ್ರೋತ್ಸಾಹಿಸದೇ ನಾವೆಲ್ಲರೂ ಒಗ್ಗೂಡಿ ತಡೆಗಟ್ಟಬೇಕಿದೆ. ಹೆಣ್ಣು ಮಕ್ಕಳು ಸರ್ಕಾರದ ಹಲವಾರು ಯೋಜನೆಗಳು ಮತ್ತು ಸೌಲಭ್ಯಗಳನ್ನು ಪಡೆದು ಆರ್ಥಿಕವಾಗಿ ಸಬಲರಾಗಬೇಕು ಎಂದು ಕಿವಿಮಾತು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣನಾಯಕ.ಎಂ ಅವರು ಪ್ರಸ್ತಾವಿಕವಾಗಿ ಮಾತನಾಡಿ, ಬೇಟಿ ಬಚಾವೋ ಬೇಟಿ ಪಡಾವೋ ಎಂಬುದು ಭಾರತ ಸರ್ಕಾರದ ಒಂದು ಸಾಮಾಜಿಕ ಅಭಿಯಾನವಾಗಿದ್ದು, ಇದರ ಮುಖ್ಯ ಉದ್ದೇಶ ಹೆಣ್ಣು ಮಕ್ಕಳನ್ನು ಉಳಿಸುವುದು, ಹೆಣ್ಣು ಮಕ್ಕಳಿಗೆ ಶಿಕ್ಷಣ ನೀಡುವುದು ಮತ್ತು ದೇಶದಲ್ಲಿ ಹೆಣ್ಣು ಮಕ್ಕಳ ಲಿಂಗಾನುಪಾತವನ್ನು ಸುಧಾರಿಸುವುದಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರು 2015 ರ ಜನವರಿ 22 ರಂದು ಹರಿಯಾಣದ ಪಾಣಿಪತ್‌ನಲ್ಲಿ ಈ ಯೋಜನೆ ಪ್ರಾರಂಭಿಸಿದರು ಎಂದು ತಿಳಿಸಿದರು.

ಹೆಣ್ಣು ಮಕ್ಕಳಿಗೆ ಸಮಾನವಾದ ಶಿಕ್ಷಣದ ಅವಕಾಶ ಒದಗಿಸಬೇಕಿದೆ. ಕುಸಿಯುತ್ತಿರುವ ಮಕ್ಕಳ ಲಿಂಗಾನುಪಾತದ ಸಮಸ್ಯೆಯನ್ನು ನಿವಾರಿಸಬೇಕಿದೆ. ಹೆಣ್ಣು ಮಕ್ಕಳ ಸಬಲೀಕರಣ ಮತ್ತು ಅವರ ಹಕ್ಕುಗಳನ್ನು ಉತ್ತೇಜಿಸುವುದು. ಹೆಣ್ಣು ಮಕ್ಕಳ ಆರೋಗ್ಯ ಮತ್ತು ಪೌಷ್ಟಿಕಾಂಶದ ಸ್ಥಿತಿಯನ್ನು ಸುಧಾರಿಸುವುದು. ಸಮಾಜದಲ್ಲಿ ಹೆಣ್ಣು ಮಕ್ಕಳನ್ನು ಉಳಿಸುವ ಮಹತ್ವದ ಬಗ್ಗೆ ಜಾಗೃತಿ ಮೂಡಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದರು.

ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ ಅವರು ಮಾತನಾಡಿ, ಸಮಾಜದಲ್ಲಿ ಪ್ರತಿಯೊಬ್ಬರೂ ಹೆಣ್ಣುಮಕ್ಕಳಿಗೆ ಗೌರವ ಮತ್ತು ಪ್ರಾಮುಖ್ಯತೆ ನೀಡಬೇಕು. ಅವರು ಚೆನ್ನಾಗಿದ್ದರೆ ಸಮಾಜ ಮತ್ತು ನಮ್ಮ ಮನೆ ಚೆನ್ನಾಗಿರುತ್ತದೆ. ಎಲ್ಲಾ ಪೋಷಕರು ಲಿಂಗ ತಾರತಮ್ಯ, ಭೇದ-ಭಾವ, ಹೆಣ್ಣುಮಕ್ಕಳು ಕುಟುಂಬಕ್ಕೆ ಹೊರೆ ಎಂದು ಭಾವಿಸದೇ ಅವರಿಗೆ ಉನ್ನತ ಶಿಕ್ಷಣ ಕೊಡಿಸಿ ಆರ್ಥಿಕವಾಗಿ ಸದೃಢರಾಗುವಂತೆ ಮಾಡಬೇಕು. ಎಲ್ಲಾ ಕ್ಷೇತ್ರಗಳಲ್ಲಿ ಹೆಣ್ಣುಮಕ್ಕಳಿಗೆ ಮೀಸಲಾತಿ ಇದ್ದು, ಅದನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದರು.

ಜಿಲ್ಲಾ ಆಸ್ಪತ್ರೆಯಲ್ಲಿ ಇತ್ತೀಚಿನ ನಾಲ್ಕೈದು ದಿನದಲ್ಲಿ ಹೆರಿಗೆ ವಿಭಾಗದಲ್ಲಿ ಹೆಣ್ಣು ಮಗುವಿನ ಜನನ ಅಧಿಕವಾಗಿದ್ದು, ಅ.17 ರಿಂದ 23 ರ ವರೆಗೆ ಸಂಭವಿಸಿದ 79 ಹೆರಿಗೆಯಲ್ಲಿ 50 ಹೆಣ್ಣು ಮಗು ಮತ್ತು 29 ಗಂಡು ಮಗು ಜನಿಸಿವೆ ಎಂದು ಮಾಹಿತಿ ನೀಡಿದರು.

ಇದೇ ವೇಳೆ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನವೀನ್ ಕುಮಾರ್ ಅವರು ಹೆಣ್ಣ ಮಕ್ಕಳನ್ನು ಉಳಿಸಿ, ಹೆಣ್ಣು ಮಕ್ಕಳನ್ನು ಓದಿಸಿ ಎಂಬ ಪ್ರತಿಜ್ಞಾ ವಿಧಿ ಭೋದಿಸಿದರು.

ಕಾರ್ಯಕ್ರಮದಲ್ಲಿ ಕೇಕ್ ಕತ್ತರಿಸುವ ಮೂಲಕ ಹೆಣ್ಣುಮಗುವಿನ ಜನನ ಆಚರಣೆ ಮಾಡಲಾಯಿತು ಮತ್ತು ತಾಯಂದಿರಿಗೆ ಮಕ್ಕಳ ಕಿಟ್ ವಿತರಿಸಲಾಯಿತು.

ಬಳಿಕ ಗಣ್ಯರು ಮಿಷನ್ ಶಕ್ತಿ ಯೋಜನೆ ಮತ್ತು ಪ್ರಧಾನಮಂತ್ರಿ ಮಾತೃ ವಂದನಾ ಯೋಜನೆಯ ಭಿತ್ತಿಪತ್ರ ಅನಾವರಣಗೊಳಿಸಿದರು.

ಹೆಣ್ಣು ಮಕ್ಕಳ ರಕ್ಷಣೆ ಹಾಗೂ ಪೋಷಣೆಯ ಸಲುವಾಗಿ ಏರ್ಪಡಿಸಿದ್ದ ಸಹಿ ಸಂಗ್ರಹಣಾ ಫಲಕಕ್ಕೆ ನ್ಯಾ.ರಾಜೇಶ್ ಎನ್. ಹೊಸಮನೆ ಅವರು ಸಹಿ ಹಾಕುವ ಮೂಲಕ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಆಕರ್ಷಕ ಮಗುವಿನ ತೊಟ್ಟಿಲನ್ನು ಏರ್ಪಡಿಸಲಾಗಿತ್ತು. ತಾಯಂದಿರು ತಮ್ಮ ಮಗುವನ್ನು ತೊಟ್ಟಿಲಲ್ಲಿ ಹಾಕಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಉಮಾದೇವಿ, ಜಿಲ್ಲಾ ಮಕ್ಕಳ ರಕ್ಷಣ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸುಭದ್ರ ದೇವಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರೂಪಣಾಧಿಕಾರಿ ಸವಿತಾ, ಬಳ್ಳಾರಿ ನಗರ ಮತ್ತು ಗ್ರಾಮಾಂತರ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮೋಹನ್ ಕುಮಾರಿ, ವೈದ್ಯಾಧಿಕಾರಿಗಳಾದ ಡಾ.ವಿಶ್ವನಾಥ, ಡಾ.ವಿಮಲಾ ಸೇರಿದಂತೆ ವೈದ್ಯಾಧಿಕಾರಿಗಳು, ಕಚೇರಿಯ ಅಧಿಕಾರಿಗಳು ಮತ್ತು ಸಿಬ್ಬಂದಿವರ್ಗದವರು, ತಾಯಂದಿರು, ಇತರರು ಉಪಸ್ಥಿತರಿದ್ದರು.

## ಅ.28 ರಂದು ಬಳ್ಳಾರಿ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.24–ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್,ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜಿಲ್ಲೆಯ ಸಮಸ್ತ ಸಂಘ ಸಂಸ್ಥೆಗಳ ಇವರ ಸಹಯೋಗದಲ್ಲಿ ಬಳ್ಳಾರಿ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಅ.28 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣ ರಸ್ತೆಯ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ವಸತಿ,ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವರಾದ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಬಿ.ನಾಗೇಂದ್ರ, ಜೆ.ಎನ್.ಗಣೇಶ್, ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಶೀಲ್ ಜಿ.ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಕರ್ನಾಟಕ ರಾಜ್ಯ ಖನಿಜ ನಿಗಮ ನಿಯಮಿತದ ಉಪಾಧ್ಯಕ್ಷ ಹೆಚ್.ಲಕ್ಷ್ಮಣ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಮಹಮ್ಮದ್ ಹಾರಿಸ್ ಸುಮೇರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಕೆ.ಗ್ರೇಸಿ ಅವರು ತಿಳಿಸಿದ್ದಾರೆ.

### ಲಘು ವಾಹನ ಚಾಲನಾ ತರಬೇತಿ ಉದ್ಘಾಟಿಸಿ ಜಿಪಂ ಉಪಕಾರ್ಯದರ್ಶಿ ಶಶಿಕಾಂತ ಶಿವಪೂರೆ ಕರೆ

# ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿ ಮುನ್ನೆಡೆಯಿರಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.24–ಮಹಿಳೆಯರಿಗೆ ಸಮಾನತೆ ಇದ್ದು, ಸರ್ಕಾರದ ವಿವಿಧ ಯೋಜನೆಗಳು ಬಳಿಸಿಕೊಂಡು ಎಲ್ಲಾ ಕ್ಷೇತ್ರಗಳಲ್ಲಿ ಮುನ್ನೆಡೆಯಬೇಕು ಎಂದು ಜಿಲ್ಲಾ ಪಂಚಾಯತ್ ನ ಉಪಕಾರ್ಯದರ್ಶಿ ಶಶಿಕಾಂತ ಶಿವಪೂರೆ ಅವರು ಕರೆ ನೀಡಿದರು.

ಶುಕ್ರವಾರ, ನಗರದ ಕೆನರಾ ಬ್ಯಾಂಕ್ ಗ್ರಾಮೀಣ ಸ್ವಉದ್ಯೋಗ ತರಬೇತಿ ಸಂಸ್ಥೆಯ ಆವರಣದಲ್ಲಿ ಜಿಲ್ಲಾ ಪಂಚಾಯತ್ ಸಹಯೋಗದೊಂದಿಗೆ ಎನ್‌ಆರ್‌ಎಲ್‌ಎಂ ಯೋಜನೆಯಡಿ ಘನ ಮತ್ತು ದ್ರವ ತ್ಯಾಜ್ಯ ಘಟಕಗಳ ವಾಹನಗಳಿಗೆ ಎಸ್‌ಎಚ್‌ಜಿ ಮಹಿಳೆಯರಿಗೆ ಹಾಗೂ ಪುರುಷರಿಗೆ ನಾಲ್ಕು ಚಕ್ರದ ಲಘು ವಾಹನ ಚಾಲನಾ ತರಬೇತಿ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಗ್ರಾಮ ಪಂಚಾಯತ್ ಮಟ್ಟದಲ್ಲಿ ಘನ ಮತ್ತು ದ್ರವ ತ್ಯಾಜ್ಯ ವಾಹನಗಳಿಗೆ ವಾಹನ ಚಾಲಕಿಯರನ್ನಾಗಿ ಸ್ವ-ಸಹಾಯ ಗುಂಪಿನ ಮಹಿಳೆಯರನ್ನು ಆಯ್ಕೆ ಮಾಡಲಾಗಿದ್ದು, ಧೈರ್ಯದಿಂದ ವಾಹನ ಚಲಾಯಿಸುವ ತರಬೇತಿಯನ್ನು ಆಸಕ್ತಿ ವಹಿಸಿ ಕಲಿಯಬೇಕು ಎಂದು ಆಶಿಸಿದರು.

ಯುವಕರು ಸಹ ಜೀವನ ನಿರ್ವಹಣೆಗಾಗಿ ಲಘು ವಾಹನಾ ಚಾಲನೆಯನ್ನು ಸ್ವ-ಉದ್ಯೋಗವನ್ನಾಗಿ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕ ರಾಜೇಸಾಬ್ ಎಚ್. ಎರಿಮನಿ ಅವರು ಮಾತನಾಡಿ, ಸಂಸ್ಥೆಯಲ್ಲಿ ಕೌಶಲ್ಯ ತರಬೇತಿ ಜೊತೆಗೆ ವ್ಯಕ್ತಿತ್ವ ವಿಕಸನ, ಆತ್ಮ ವಿಶ್ವಾಸ, ಸ್ವ-ಉದ್ಯೋಗಕ್ಕೆ ಮಾರ್ಗದರ್ಶನ ನೀಡಲಾಗುತ್ತದೆ. ಅರ್ಹರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್‌ನ ಜಿಲ್ಲಾ ವ್ಯವಸ್ಥಾಪಕ ವಿಜಯ ಕುಮಾರ್ ಅವರು ಮಾತನಾಡಿ, ಗ್ರಾಮೀಣ ಭಾಗದಲ್ಲಿ ಸ್ವಚ್ಛತಾ ಕಾರ್ಯಕ್ರಮದಲ್ಲಿ ಮಹಿಳೆಯರ ಪಾತ್ರ ಬಹು ಮುಖ್ಯವಾಗಿದ್ದು, ಪ್ರಸ್ತುತದಲ್ಲಿ ಎಲ್ಲಾ ರಂಗಗಳಲ್ಲಿ ಮಹಿಳೆಯರಿಗೆ ತುಂಬಾ ಅವಕಾಶಗಳಿದ್ದು, ಅವಕಾಶ ಬಳಸಿಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಳ್ಳಾರಿ ತಾಪಂ ತಾಲ್ಲೂಕು ವ್ಯವಸ್ಥಾಪಕ ಗಂಗಾಧರ, ಉಪನ್ಯಾಸಕರಾದ ಜಡೇಶ, ದಿನೇಶ್ ಕುಮಾರ್, ಸಿದ್ದಲಿಂಗಮ್ಮ, ಸಂತೋಷಕುಮಾರ್, ಪರಮೇಶ ಸೇರಿದಂತೆ ಜಿಲ್ಲೆಯ 27 ಜನ ಶಿಬಿರಾರ್ಥಿಗಳು ಮತ್ತು ಸಂಸ್ಥೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಬಳ್ಳಾರಿ: ವಕ್ಫ್ ಸಂಸ್ಥೆಯ ದಾಖಲೆಗಳನ್ನು ಯುಡಬ್ಲ್ಯೂಎಂಇಇಡಿ ಪೋರ್ಟಲ್‌ನಲ್ಲಿ ಅಪ್ ಲೋಡ್ ಮಾಡಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.24–ಜಿಲ್ಲೆಯಲ್ಲಿರುವ ವಕ್ಫ್ ಸಂಸ್ಥೆಗಳು ವಕ್ಫ್ ಕಾಯ್ದೆ ಕಲಂ 32(2),(ಡ) ಅಡಿ ಏಕೀಕೃತ ವಕ್ಫ್ ನಿರ್ವಹಣೆ, ಸಬಲೀಕರಣ, ದಕ್ಷತೆ ಮತ್ತು ಅಭಿವೃದ್ಧಿ ಕಾಯ್ದೆ (ಯುಡಬ್ಲ್ಯೂಎಂಇಇಡಿ) ಪೋರ್ಟಲ್‌ನಲ್ಲಿ ಮೇಕರ್ ಆಗಿ ನೋಂದಣಿ ಮತ್ತು ವಕ್ಫ್ ಸಂಸ್ಥೆಯ ದಾಖಲೆಗಳನ್ನು ಕಡ್ಡಾಯವಾಗಿ ಅಪ್‌ಲೋಡ್ ಮಾಡಬೇಕು ಎಂದು ಜಿಲ್ಲಾ ವಕ್ಫ್ ಅಧಿಕಾರಿ ತಿಳಿಸಿದ್ದಾರೆ. ಇತ್ತೀಚೆಗೆ ನಡೆದ 364ನೇ(ಎ) ರಾಜ್ಯ ವಕ್ಫ್ ಮಂಡಳಿ ಸಭೆಯಲ್ಲಿ ಅಂಗೀಕರಿಸಿದ ನಿರ್ಣಯದ ಮೇರೆಗೆ ಪ್ರದತ್ತವಾದ ಅಧಿಕಾರ ಚಲಾಯಿಸಿ, ರಾಜ್ಯ ವಕ್ಫ್ ಮಂಡಳಿಯ ಎಲ್ಲಾ ವಕ್ಫ್ ಸಂಸ್ಥೆಗಳ ಮುತವಲ್ಲಿಗಳು/ನಿರ್ವಹಣಾ ಸಮಿತಿಗಳು/ಆಡಳಿತಾಧಿಕಾರಿಗಳು/ಕೇರ್ ಟೇಕರ್‌ಗಳಿಗೆ ತಕ್ಷಣವೇ ಯುಡಬ್ಲ್ಯೂಎಂಇಇಡಿ ಪೋರ್ಟ್ಲ್‌ನಲ್ಲಿ ಮೇಕರ್ ಆಗಿ ಕಡ್ಡಾಯವಾಗಿ ನೋಂದಾಯಿಸಿಕೊಳ್ಳಬೇಕು.

ಯುಡಬ್ಲ್ಯೂಎಂಇಇಡಿ ಕಾಯ್ದೆ, 2025 ಮತ್ತು ಅದರ ನಿಯಮಗಳಡಿ ನಿಗದಿಪಡಿಸಿದ ದಾಖಲೆಗಳನ್ನು 30 ದಿನಗಳೊಳಗಾಗಿ ಅಪ್ಲೋಡ್ ಮಾಡಬೇಕು ಹಾಗೂ ಎಲ್ಲಾ ಅಪ್ಲೋಡ್‌ಗಳು ಪೋರ್ಟಲ್ ನಲ್ಲಿ ಲಭ್ಯವಿರುವ ಸ್ವರೂಪ ಮತ್ತು ಫೈಲ್ ಗಾತ್ರದ ಮಾರ್ಗಸೂಚಿಗಳಿಗೆ ಅನುಗುಣವಾಗಿ ಬಗ್ಗೆ ಖಚಿತಪಡಿಸಿಕೊಂಡು ದಾಖಲಿಸಬೇಕು ಎಂದು ಅವರು ತಿಳಿಸಿದ್ದಾರೆ.

ಈ ಪರಿಶೀಲನೆ ಮತ್ತು ಅನುಮೋದನೆಗಾಗಿ ಯುಡಬ್ಲ್ಯೂಎಂಇಇಡಿ ಪೋರ್ಟಲ್‌ನಲ್ಲಿ ವಕ್ಫ್ ಅಧಿಕಾರಿಯನ್ನು ಪರಿಶೀಲಕ(ವೆರಿಫೈಯರ್), ವಿಭಾಗೀಯ ವಕ್ಫ್ ಅಧಿಕಾರಿ, ಸಹಾಯಕ ಕಾರ್ಯದರ್ಶಿ ಆಡಳಿತ, ಅಪರ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳನ್ನು ಅನುಮೋದಕ(ಅಪ್ರೂವರ್) ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ. ಅಧಿಕೃತ ವಕ್ಫ್ ಅಧಿಕಾರಿಗಳು ಏಳು ದಿನದೊಳಗೆ ದಾಖಲೆಗಳನ್ನು ಪರಿಶೀಲಿಸುತ್ತಾರೆ ಮತ್ತು ಅಧಿಕೃತ ಅನುಮೋದಿಸುವ ಅಧಿಕಾರಿಗಳು ಏಳು ದಿನದೊಳಗೆ ಕ್ರಮ ಕೈಗೊಂಡು ಅನುಮೋದನೆ ಪ್ರಕ್ರಿಯೆ ಪೂರ್ಣಗೊಳಿಸುತ್ತಾರೆ. ಡಿಸೆಂಬರ್ 05 ರೊಳಗೆ ಸಂಪೂರ್ಣ ಅಪ್‌ಲೋಡ್ ಪ್ರಕ್ರಿಯೆ ಪೂರ್ಣಗೊಳಿಸಬೇಕು. ತಪ್ಪಿದ್ದಲ್ಲಿ ವಕ್ಫ್ ಕಾಯ್ದೆ ಮತ್ತು ಸಂಬಂಧಿತ ನಿಯಮಗಳಡಿ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾ ವಕ್ಫ್ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಭಕ್ತ ಕನಕದಾಸರ ಜಯಂತಿ: ಅ.28 ರಂದು ಪೂರ್ವಭಾವಿ ಸಿದ್ಧತಾ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.24–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜಿಲ್ಲಾ ಕೇಂದ್ರದಲ್ಲಿ ನ.08 ರಂದು ಭಕ್ತ ಕನಕದಾಸರ ಜಯಂತಿ ಆಚರಣೆ ಸಂಬಂಧಿಸಿದಂತೆ ಚರ್ಚಿಸಲು ಅ.28 ರಂದು ಸಂಜೆ 04 ಗಂಟೆಗೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಿದ್ಧತಾ ಸಭೆ ಏರ್ಪಡಿಸಲಾಗಿದೆ.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರ ಅಧ್ಯಕ್ಷತೆ ವಹಿಸುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ತಿಳಿಸಿದ್ದಾರೆ.

### ವೀರವನಿತೆ ಒನಕೆ ಓಬವ್ವ ಜಯಂತಿ: ಅ.30 ರಂದು ಪೂರ್ವಭಾವಿ ಸಿದ್ಧತಾ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.24–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜಿಲ್ಲಾ ಕೇಂದ್ರದಲ್ಲಿ ನ.11 ರಂದು ವೀರವನಿತೆ ಒನಕೆ ಓಬವ್ವ ಜಯಂತಿ ಆಚರಣೆ ಕುರಿತಂತೆ ಚರ್ಚಿಸಲು ಅ.30 ರಂದು ಸಂಜೆ 04.30 ಗಂಟೆಗೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಿದ್ಧತಾ ಸಭೆ ಏರ್ಪಡಿಸಲಾಗಿದೆ.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರ ಅಧ್ಯಕ್ಷತೆ ವಹಿಸುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ತಿಳಿಸಿದ್ದಾರೆ.

## ಇಂದು ಕವಿ ಸಮ್ಮೇಳನ ಹಾಗೂ ಮುಶಾಯರಾ ಕೊಪ್ಪಳಕ್ಕೆ 15 ಜನ ರಾಷ್ಟ್ರೀಯ ಕವಿಗಳ ಆಗಮನ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನಗರದ ಸಾಹಿತ್ಯ ಭವನದಲ್ಲಿ ದಿ, 25 ರ ಶನಿವಾರ ರಾತ್ರಿ 9:00 ಗಂಟೆಗೆ ಅಖಿಲ ಭಾರತ ಬೃಹತ್ ಕವಿಗೋಷ್ಠಿ ಹಾಗೂ ಮುಷಾಯರಾ ಕಾರ್ಯಕ್ರಮ ಪ್ರತಿ ವರ್ಷದಂತೆ ಈ ವರ್ಷವೂ ಸಹ ಕರ್ನಾಟಕ ಉರ್ದು ಅಕಾಡೆಮಿ ಅವರ ಸಂಯುಕ್ತ ಆಶ್ರಯ ದಲ್ಲಿ ಜರುಗಲಿದೆ ಇದರಲ್ಲಿ ಹದಿನೈದು ಜನ ಉರ್ದು ಮತ್ತು ಹಿಂದಿ ರಾಷ್ಟ ಮಟ್ಟದ ಕವಿಗಳು ಕೊಪ್ಪಳಕ್ಕೆ ಆಗಮಿಸಲಿದ್ದಾರೆ ಎಂದು ನಗರದ ಫಿರ ದೋಸ್ ಸಾಂಸ್ಕೃತಿ ಕ್ರೀಡೆ ಮತ್ತು ತರಬೇತಿ ಸಂಸ್ಥೆ ಯ ಅಧ್ಯಕ್ಷರಾದ ಮೊಹಮ್ಮದ್ ರಫಿಯುದ್ದೀನ್ ಅಹಮದ್ ರವರು ತಿಳಿಸಿದ್ದಾರೆ,

ಸದರಿ ಬೃಹತ್ ಕವಿ ಸಮ್ಮೇಳನ ಹಾಗೂ ಉರ್ದು ಮುಷಾಯರಾ ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಮತ್ತು ಅಂತರಾಷ್ಟ ಮಟ್ಟದ ಉರ್ದು ಹಿಂದಿ ಸಾಹಿತಿ ಮತ್ತು ಕವಿಗಳು ಪಾಲ್ಗೊಂಡು ಕವನ ವಾಚನ ಮಾಡಲಿದ್ದಾರೆ,

ಅಂದು ರಾತ್ರಿ ಒಂಬತ್ತು ಗಂಟೆಯಿಂದ ಬೆಳಗಿನ ಜಾವ ದ ವರೆಗೆ ನಡೆಯಲಿರುವ ಕಾರ್ಯಕ್ರಮದಲ್ಲಿ ನಮ್ಮ ದೇಶದ ಹಿರಿಯ ಕವಿ ಮತ್ತು ಸಾಹಿತಿಗಳಾದ ಗಾಜಿಯಾ ಬಾದಿನ ಗೋವಿಂದ್ ಗುಲ್ಶನ್, ಶಕೀಲ್ ಅಹಮದ್ ಮುಂಬೈ, ನದೀಮ್ ಶಾದ್ ದೇವಬಂಧ ,ಸುರೇಂದರ್ ಸಿಂಗ್ ಶಜರ್, ಅಬರಾರ ಕಾಶಿಫ್ ಅಮರಾವತಿ, ಅನಾ ದೆಹಲ್ವಿ ದೆಹಲಿ, ಹಾಮಿದ ಭೂಸಾವಲ್ಲಿ, ಚಾಚಾ ಪಾಲಂಪುರಿ ತೆಲಂಗಾಣ, ಚಾಂದನಿ ಪಾಂಡೆ ಕಾನ್ಪುರ್, ಸಿರಾಜ್ ಸೋಲಾಪುರಿ ಮುಂಬೈ, ಸುಹಾನಾ ನಾಜ್ ಮುಂಬೈ, ವಿನೀತ್ ಶಂಕರ್ ಪುಣೆ, ರಾಧಿಕಾ ಮಿತ್ತಲ್ ದೆಹಲಿ, ಮಡ್ಡಿ ಕ್ರಸ್ಟಿ ಪುಣೆ, ಹಾಗೂ ರಾಯಚೂರಿನ ಡಾ, ಇಫ್ತೆ ಕಾರ್ ಶಕೀಲ್, ಮತ್ತು ಸ್ಥಳೀಯ ಕೊಪ್ಪಳದ ಹಿರಿಯ ಸಾಹಿತಿ ಮತ್ತು ಕವಿಗಳಾದ ಅನ್ವರ್ ಹುಸೇನ್, ಮೌಲಾನ ಮಹಮ್ಮದ್ ಅಲಿ ಹಿಮಾಯಿತಿ ಹಾಗೂ ವಿಜಾರತ್ ಅಲಿ ತಾಯರ್ ರವರು ತಮ್ಮ ಕವನ ವಾಚನ ಮಾಡಲಿದ್ದಾರೆ ಇದರಲ್ಲಿ ಇಬ್ಬರು ಹಾಸ್ಯ ಕವಿಗಳು ಪಾಲ್ಗೊಂಡು ಎಲ್ಲರನ್ನು ಭಾರಿ ಪ್ರಮಾಣದ ಹಾಸ್ಯಮಯ ಕವನ ವಾಚನ ಮಾಡಿ ಜನರನ್ನು ರಂಜಿಸಲಿದ್ದಾರೆ, ಇದರ ನಿರೂಪಣೆಯನ್ನು ಕೊಪ್ಪಳದ ಉರ್ದು ಸಾಹಿತಿ ಮೊಹಮ್ಮದ್ ಬದಿಯುದ್ದೀನ್ ಅಹಮದ್ ನವೀದ ರವರು ನೆರವೇರಿಸಲಿದ್ದಾರೆ,

ಕಾರ್ಯಕ್ರಮದಲ್ಲಿ ಜಿಲ್ಲೆಯ ಜನಪ್ರತಿನಿಧಿಗಳು ವಿವಿಧ ಗಣ್ಯರು ಅಧಿಕಾರಿ ವರ್ಗದವರು ಕರ್ನಾಟಕ ಉರ್ದು ಅಕಾಡೆಮಿಯ ಅಧ್ಯಕ್ಷ ಮತ್ತು ಸದಸ್ಯರು ಪಾಲ್ಗೊಳ್ಳಲಿದ್ದಾರೆ,

ಸದರಿ ಬೃಹತ್ ಮುಷಾಯರಾ ಕಾರ್ಯಕ್ರಮದಲ್ಲಿ ಕೊಪ್ಪಳ ನಗರ ಮತ್ತು ಸುತ್ತಮುತ್ತಲಿನ ಊರಿನ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮಯಶಸ್ವಿಗೊಳಿಸಬೇಕು ಸದರಿ ಕಾರ್ಯಕ್ರಮದಲ್ಲಿ ಮಹಿಳೆಯರಿಗೆ ಪ್ರತ್ಯೇಕ ಆಸನದ ವ್ಯವಸ್ಥೆಯನ್ನು ಸಹ ಮಾಡಲಾಗಿದೆ ಎಂದು ಕಾರ್ಯಕ್ರಮ ಸಂಘಟಕ ಸಮಿತಿಯ ಸಂಚಾಲಕರು ಪ್ರಕಟಣೆಯಲ್ಲಿ ತಿಳಿಸಿ ಸರ್ವರನ್ನು ಸ್ವಾಗತಿಸಿದ್ದಾರೆ,

## ಅಕ್ರಮ ಮರಳು ತಡೆಗೆ ಕರವೇ ಪ್ರತಿಭಟನಾ ಮೆರವಣಿಗೆ, ಗಣಿ ಇಲಾಖೆ ಅಧಿಕಾರಿಗಳ ಮೇಲೆ ಕ್ರಮಕ್ಕೆ ಆಗ್ರಹ:ಬಿ ಗಿರೀಶಾನಂದ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯಲ್ಲಿ ಅನಧಿಕೃತ ಮರಳು ಹಾಗೂ ಮರಮ್ ಸಾಗಾಣೆಕೆ ತಡೆಗಟ್ಟದೇ, ಶಾಮಿಲಾಗಿ ಬ್ರಷ್ಟಾಚಾರ ನಡೆಸುತ್ತಿರುವ ಇಲಾಖೆ ಅಧಿಕಾರಿಗಳ ನಡೆ ಖಂಡಿಸಿ ತಪ್ಪಿತಸ್ಥರನ್ನು ಇಲಾಖಾ ವಿಚಾರಣೆ ಕಾಯ್ದಿರಿಸಿ ಕರ್ತವ್ಯದಿಂದ ಅಮಾನತ್ತು ಮಾಡಬೇಕು ಎಂದು ಕರವೇ ಜಿಲ್ಲಾಧ್ಯಕ್ಷ ಬಿ.ಗಿರೀಶಾನಂದ ಜ್ಞಾನಸುಂದರ ಆಗ್ರಹಿಸಿದ್ದಾರೆ.



ಶುಕ್ರವಾರದಂದು ಕರ್ನಾಟಕ ರಕ್ಷಣಾ ವೇದಿಕೆ ಕೊಪ್ಪಳ ಜಿಲ್ಲಾ ಘಟಕದಿಂದ ಶ್ರೀ ಕನಕದಾಸ ವೃತ್ತದಿಂದ ಅಶೋಕ ವೃತ್ತದವರೆಗೆ ಅಕ್ರಮ ಮರಳು ಹಾಗೂ ಮರಮ್ ಸಾಗಾಣಿಕೆ ವಿರುದ್ಧದ ಪ್ರತಿಭಟನಾ ಮೆರವಣಿಗೆಯ ನೇತೃತ್ವವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಸು.85 ಕಿ.ಮೀಕ್ಕೂ ಹೆಚ್ಚು ತುಂಗಾಭದ್ರಾ ನದಿಯ ತಟವಿದ್ದು, ಸಾಕಷ್ಟು ಮರಳು ಶೇಖರಣೆಯಾಗುತ್ತಿದ್ದು, ಹಲವು ವರ್ಷಗಳಿಂದ ಕೆಲವು ಸ್ಥಳೀಯ ಜನಪ್ರತಿನಿಧಿಗಳ ಕುಮ್ಮಕ್ಕಿನಿಂದ ಜಿಲ್ಲೆಯಲ್ಲಿ ಎಗ್ಗಿಲ್ಲದೇ ಅಕ್ರಮವಾಗಿ ಅನಧಿಕೃತ ಮರಳು ಹಾಗೂ ಮರಮ್ 100 ರಿಂದ 150 ಟ್ರಕ್ ಗಳಲ್ಲಿ ಬೇರೆ ಜಿಲ್ಲೆಗಳಿಗೆ ಸಾಗಾಣಿಕೆಯಾಗುತ್ತಿದ್ದು, ಇದರಿಂದ ರಾಜ್ಯ ಸರ್ಕಾರಕ್ಕೆ ಅಪಾರ ಪ್ರಮಾಣದ ರಾಜಧನ ನಷ್ಟ ಉಂಟಾಗುತ್ತಿದೆ. ಇದರ ಬಗ್ಗೆ ಕರ್ನಾಟಕ ರಕ್ಷಣಾ ವೇದಿಕೆ ಸಾಕಷ್ಟು ಬಾರಿ ಮನವಿ ಸಲ್ಲಿಸಿದರೂ ಕ್ರಮಕೈಗೊಳ್ಳದೇ ಕಳ್ಳ ಸಾಗಾಣಿಕೆ ತಡೆಗಟ್ಟದ ಇಲಾಖೆ ಅಧಿಕಾರಿಗಳ ನಡೆ ಖಂಡಿಸಿ ಹಾಗೂ ಮಾನ್ಯ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಹಿರಿಯ ಶಾಸಕರಾದ ಬಸವರಾಜ ರಾಯರಡ್ಡಿ ಅವರು ಹಾಗೂ ಮಾನ್ಯ ಹೆಚ್ಚುವರಿ ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ, ಉತ್ತರ ವಲಯ, ಬಳ್ಳಾರಿ ಇವರುಗಳು ಸರ್ಕಾರಕ್ಕೆ ಪತ್ರ ಸಲ್ಲಿಸಿ ಕ್ರಮಕ್ಕೆ ಆಗ್ರಹಿಸಿದರೂ ಕೂಡಾ ಇಲ್ಲಿಯವರೆಗೆ ರಾಜ್ಯ ಸರ್ಕಾರ ಜಾಣ ಕುರುಡುತನಕ್ಕೆ ಜಾರಿರುವುದನ್ನು ಕರವೇ ಬಲವಾಗಿ ಖಂಡಿಸುತ್ತದೆ ಎಂದ ಅವರು ಈ ಕೂಡಲೇ ಅಕ್ರಮ ದಂಧೆಕೋರರ ಜೊತೆ ಶ್ಯಾಮೀಲಾಗಿರುವ ಹಾಗೂ ಹಲವು ವರ್ಷಗಳಿಂದ ಇಲಾಖೆಯಲ್ಲಿ ಬಿಡುಬಿಟ್ಟು ಅಕ್ರಮದ ರೂವಾರಿಗಳಾಗಿರುವ ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿಗಳನ್ನು ತಕ್ಷಣಕ್ಕೆ ಇಲಾಖಾ ವಿಚಾರಣೆ ಕಾಯ್ದಿರಿಸಿ ಕರ್ತವ್ಯದಿಂದ ಅಮಾನತ್ತು ಮಾಡಬೇಕು ಎಂದು ಒತ್ತಾಯಿಸಿ ಜಿಲ್ಲಾಧಿಕಾರಿಗಳ ಮುಖಾಂತರ ಘನವೆತ್ತ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಸಂಘಟನಾ ಕಾರ್ಯದರ್ಶಿ ಬಸನಗೌಡ ಪೋ.ಪಾಟೀಲ, ಜಿಲ್ಲಾ ಯುವಘಟಕ ಅಧ್ಯಕ್ಷ ಹನುಮಂತ ಬೆಸ್ತರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಿಂಗಪ್ಪ ಮೂಗಿನ್, ತಾಲೂಕಾಧ್ಯಕ್ಷ ಗವಿಸಿದ್ದಪ್ಪ ಚಕ್ಕಡಿ, ಭಾಗ್ಯನಗರ ಅಧ್ಯಕ್ಷ ವಿರೇಶ ಮುಂಡಾಸದ, ರಮೇಶ ಚಂಡೂರು, ಶರಣಪ್ಪ ಮದಲಗಟ್ಟಿ, ಸೊಹೇಲ್, ಹನುಮಂತ ತಳಕಲ್, ಬಸವರಾಜ ಚಿಕೆನಕೊಪ್ಪ, ವಿನಾಯಕ ಪಾಸ್ತೆ, ಗುರುರಾಜ ಮಾಳೊದಿ, ನವೀನ ಬೀಡನಾಳ, ಮಲ್ಲಪ್ಪ ತಳಕಲ್, ಈರಣ್ಣ ಭಜಂತ್ರಿ, ಮಲ್ಲೇಶಪ್ಪ ಕೊಪ್ಪಳ, ಗವಿಸಿದ್ದಪ್ಪ ನಿರದೊಡ್ಡಿ, ಈರಣ್ಣ ಒಜನಳ್ಳಿ, ಹನುಮಂತ ಕಿಟಗೇರಿ, ಗುರುರಾಜ ಅಂಗಡಿ, ನಾಗರಾಜ ದದೇಗಲ್ ಹಾಗೂ ಅನೇಕರು ಭಾಗವಹಿಸಿದ್ದರು.

# ವಕ್ಫ್ ಆಸ್ತಿಗಳ ದಾಖಲೆ ನೋಂದಣಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 24 –ವಕ್ಫ್ ಕಾಯ್ದೆ ತಿದ್ದುಪಡಿ–2025ರಂತೆ ಎಲ್ಲಾ ನೋಂದಾಯಿತ ವಕ್ಫ್ ಸಂಸ್ಥೆಗಳ ವಿವರವನ್ನು ಸೆಂಟ್ರಲ್ ಉಮ್ಮಿದ್ ಪೋರ್ಟ್ಲ್‌ನಲ್ಲಿ ನೋಂದಣಿ ಮಾಡುವುದು ಕಡ್ಡಾಯವಾಗಿದ್ದು, ಜಿಲ್ಲೆಯ ವಕ್ಫ್ ಆಸ್ತಿಗಳ ದಾಖಲೆಗಳನ್ನು ವೆಬ್‌ಸೈಟ್ ವಿಳಾಸ: https://umeed.minorityaffairs.gov.in/ ನಲ್ಲಿ 2025ರ ಡಿಸೆಂಬರ್ 05ರೊಳಗಾಗಿ ನೋಂದಣಿ ಮಾಡಬೇಕೆಂದು ಜಿಲ್ಲಾ ವಕ್ಫ್ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಂಬಾಕು ನಿಯಂತ್ರಣ:ಜಿಲ್ಲಾ ಸಮನ್ವಯ ಸಮಿತಿ ಸಭೆ ತಂಬಾಕು ಮಾರಾಟಕ್ಕೆ ಪ್ರತ್ಯೇಕ ಪರವಾನಿಗೆ : ಡಿಸಿ ಸಂಗಪ್ಪ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.24–ತಂಬಾಕು ಉತ್ಪನ್ನಗಳ ಮಾರಾಟಕ್ಕೆ ಪ್ರತ್ಯೇಕ ಪರವಾನಗಿ ಪಡೆಯಲು ಸರ್ಕಾರದ ಮಾರ್ಗಸೂಚಿಯನ್ವಯ ಕ್ರಮವಹಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸಂಗಪ್ಪ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದ ಅಂಗವಾಗಿ ನಡೆದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ತಂಬಾಕು ಉತ್ಪನ್ನಗಳ ಮಾರಾಟಕ್ಕೆ ಕಡ್ಡಾಯವಾಗಿ ಪರವಾನಿಗೆ ಪಡೆಯಬೇಕು. ಪರವಾನಿಗೆ ಪಡೆಯದವರ ವಿರುದ್ಧ ನಗರಸಭೆ, ಪುರಸಭೆ ಅಧಿಕಾರಿಗಳು ಕ್ರಮ ಜರುಗಿಸಬೇಕು ಎಂದು ಹೇಳಿದರು.

ಜಿಲ್ಲೆಯ ಎಲ್ಲ ಬಸ್ ನಿಲ್ದಾಣಗಳಲ್ಲಿ ತಂಬಾಕು ಮಾರಾಟ ನಿಷೇಧಿಸುವದು ಹಾಗೂ ಜಿಲ್ಲೆಯ ಎಲ್ಲ ಪ್ರವಾಸಿ ತಾಣಗಳನ್ನು ತಂಬಾಕು ಮುಕ್ತ ವಲಯಗಳೆಂದು ಘೋಷಿಸಲು ಕ್ರಮಕೈಗೊಳ್ಳಲು ತಿಳಿಸಿದ ಜಿಲ್ಲಾಧಿಕಾರಿಗಳು, ತಂಬಾಕು ಮುಕ್ತ ಯುವ ಅಭಿಯಾನವನ್ನು ಅಕ್ಟೋಬರ 9 ರಿಂದ ಪ್ರಾರಂಭಿಸಲಾಗಿದ್ದು, ನವೆಂಬರ 30 ವರೆಗೆ ನಡೆಯಲಿದೆ. ಈ ಅಭಿಯಾನವನ್ನು ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಯಶಸ್ವಿಯಾಗಿ ನಡೆಸಿ, ಕೋಟ್ಪಾ 2003ರ ಅಧಿನಿಯಮದ 2024ರ ತಿದ್ದುಪಡಿಯನುಸಾರ ದಂಡವನ್ನು ವಿಧಿಸುವುದು, 16 ತನಿಕಾ ದಳದ ಕಾರ್ಯಾಚರಣೆ, 400 ತಂಬಾಕು ಮುಕ್ತ ಶಾಲೆ, ಕಾಲೇಜು ಹಾಗೂ 30 ತಂಬಾಕು ಮುಕ್ತ ಗ್ರಾಮಗಳನ್ನಾಗಿ ಮಾಡಲು ವಿವಿಧ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ಶಾಲಾ ಕಾಲೇಜುಗಳ ಸುತ್ತ 100 ಮೀಟರ ವ್ಯಾಪ್ತಿಯಲ್ಲಿ ತಂಬಾಕು ಮಾರಾಟ ಮಾಡದಂತೆ ನೋಡಿಕೊಳಬೇಕು. ಮಕ್ಕಳಿಗೆ ತಂಬಾಕು ಸೇವನೆಯಿಂದಾಗುವ ದುಷ್ಪರಿಣಾಮದ ಬಗ್ಗೆ ಅರಿವು ಮೂಡಿಸುವಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.

ಬಾರ್ ಅಂಗಡಿಗಳಲ್ಲಿ ಧೂಮಪಾನ ನಿಷೇದಿಸುವದು ಹಾಗೂ ಕೋಟ್ಪಾ ಸೇಕ್ಷನ್–4 ನಾಮ ಫಲಕವನ್ನು ಪ್ರದರ್ಶನ ಮಾಡಬೇಕು. ತಂಬಾಕು ಮುಕ್ತ ಕಾರ್ಯಕ್ರಮಗಳನ್ನು ಕೇವಲ ಆಚರಣೆಯ ಮಟ್ಟಕ್ಕೆ ಸೀಮಿತಗೊಳಿಸದೆ, ಅವುಗಳಿಂದ ನೈಜ ಫಲಿತಾಂಶ ಬರುವಂತಿರಬೇಕು. ಶಾಲೆ, ಕಾಲೇಜುಗಳಲ್ಲಿ ಮಾತ್ರವಲ್ಲದೆ ಬಸ್ ನಿಲ್ದಾಣಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ವಿರೋಧಿ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಿದಲ್ಲಿ ಹೆಚ್ಚು ಪರಿಣಾಮಕಾರಿ ಆಗುತ್ತದೆ ಎಂದು ಡಿಸಿ ಸಂಗಪ್ಪ ಹೇಳಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಹಾಂತೇಶ್ವರ ಜಿಡ್ಡಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಮಂಜುನಾಥ ಡಿ.ಎನ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ದಯಾನಂದ ಕರೆನ್ನವರ, ನಗರ ಸಭೆಯ ಆಯುಕ್ತ ಮಾರುತಿ ವಿ.ಎನ್, ಜಿಲ್ಲಾ ತಂಬಾಕು ಸಲಹೆಗಾರರಾದ ಶಶಿಕಾಂತ ಕುಮಠಳ್ಳಿ ಸೇರಿದಂತೆ ತಾಲೂಕ ದಂಡಾಧಿಕಾರಿಗಳು, ತಾಲೂಕ ಆರೋಗ್ಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.24–ಕರ್ನಾಟಕ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ನಿಗಮವು 2025–26ನೇ ಸಾಲಿನಲ್ಲಿ ಮತೀಯ ಅಲ್ಪಸಂಖ್ಯಾತರಾದ ಕ್ರಿಶ್ಚಿಯನ್ ಜನಾಂಗಕ್ಕೆ ಸೇರಿದ ಅರ್ಜಿದಾರ ಕುಟುಂಬದ ವಾರ್ಷಿಕ ವರಮಾನ 6 ಲಕ್ಷ ರೂ.ಗಳ ಮೀತಿಗೆ ಒಳಪಟ್ಟು, ವಯಸ್ಸು 18 ರಿಂದ 55 ವಯೋಮೀತಿ ಹೊಂದಿರುವ ಅರ್ಹ ಫಲಾನುಭವಿಗಳಿಂದ ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ಅರಿವು, ವಿದೇಶಿ ವ್ಯಾಸಾಂಗ, ಶ್ರಮಶಕ್ತಿ, ವೃತ್ತಿ ಪ್ರೋತ್ಸಾಹ, ಶ್ರಮಶಕ್ತಿ ವಿಶೇಷಮಹಿಳಾ, ಗಂಗಾ ಕಲ್ಯಾಣ, ಸ್ವಾವಲಂಬಿ ಸಾರಥಿ, ವ್ಯಾಪಾರ ಉದ್ದಿಮೆ ನೇರ ಸಾಲ, ಮಹಿಳಾ ಸ್ವ ಸಹಾಯ ಗುಂಪುಗಳ ಸಾಲ ಯೋಜನೆ ಸೇರಿದಂತೆ ವಿವಿಧ ಸಾಲ ಯೋಜನೆಗಳಡಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು https://kccd-clonline.karnataka.gov.in ವೆಬ್‌ಸೈಟ್ ಮೂಲಕ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದಿ ನಿಗಮ (ನಿ), ಮೌಲಾನಾ ಆಜಾದ್ ಭವನ ಜಿಲ್ಲಾ ಆಡಳಿತ ಭವನದ ಆವರಣ ನವನಗರ ಬಾಗಲಕೋಟೆ. ದೂರವಾಣಿ ಸಂಖ್ಯೆ:08354–236255 ಗೆ ಸಂಪರ್ಕಿಸಬಹುದೆಂದು ಪ್ರಕಟಣೆ ಮೂಲಕ ತಿಳಿಸಲಾಗಿದೆ.

# ಉಚಿತ ತರಬೇತಿಗಳಿಗೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.24–ಕೆನರಾ ಬ್ಯಾಂಕ್, ದೇಶಪಾಂಡೆ ಆರ್ ಸೆಟ್ ಸಂಸ್ಥೆ (ರಿ), ಹಳಿಯಾಳದಲ್ಲಿ 18 ರಿಂದ 50 ವಯಸ್ಸಿನ ಗ್ರಾಮೀಣ ಭಾಗದ ನಿರುದ್ಯೋಗಿ ಯುವತಿಯರಿಗಾಗಿ ಇದೇ ನವೆಂಬರ್ ತಿಂಗಳಿನಲ್ಲಿ 35 ದಿನಗಳ ಬ್ಯೂಟಿ ಪಾರ್ಲರ್ ಮ್ಯಾನೇಜಮೆಂಟ ಹಾಗೂ ಮಹಿಳೆಯರಿಗಾಗಿ 31 ದಿನಗಳ ಹೊಲಿಗೆ ತರಬೇತಿಗಳನ್ನು ಊಟ ವಸತಿಯೊಂದಿಗೆ ಉಚಿತವಾಗಿ ನೀಡಲಾಗುತ್ತದೆ.

ಅರ್ಜಿ ಸಲ್ಲಿಸಲು ಕೊನೆ ದಿನ ಅಕ್ಟೋಬರ್ 31 ಆಗಿದ್ದು, ಮೊದಲು ಬಂದವರಿಗೆ ಹಾಗೂ ಗ್ರಾಮೀಣ ಭಾಗದವರಿಗೆ ಮೊದಲ ಆದ್ಯತೆ ನೀಡಲಾಗುವುದು. ತರಬೇತಿಯಲ್ಲಿ ಭಾಗವಹಿಸಲಿಚ್ಛಿಸುವವರು ಪ್ರಶಾಂತ ಬಡ್ಡಿ, ನಿರ್ದೇಶಕರು, ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆ, ಹಳಿಯಾಳ, ಉತ್ತರ ಕನ್ನಡ ಜಿಲ್ಲೆ ಈ ವಿಳಾಸಕ್ಕೆ ಸಂಪರ್ಕಿಸಲು ಹಾಗೂ ಸಂಸ್ಥೆಯ ವಾಟ್ಸಾಪ್ ನಂಬರಗೆ 9483485489 'ಹಾಯ್' ಎಂದು ಸಂದೇಶ ಕಳುಹಿಸುವುದರ ಮುಖಾಂತರ ತಮ್ಮ ಹೆಸರನ್ನು ನೊಂದಾಯಿಸಲು ಕೋರಲಾಗಿದೆ.

ಸಂಸ್ಥೆಯ ದೂರವಾಣಿ ಸಂಖ್ಯೆ 9482188780, 9844796998, 9632225123 ನಂಬರನ್ನು ಸಂಪರ್ಕಿಸಲು ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಿದೆ.

# ಮಾದಕ ವಸ್ತುಗಳ ಸೇವನೆಯಿಂದ ದೂರವಿರಿ–ಭಾಗ್ಯಶ್ರೀ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.24–ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ ನವದೆಹಲಿ, ಬಾಗಲಕೋಟೆ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ, ಪುರಸಭೆ, ಪುಟ್ಟರಾಜ ಗವಾಯಿಗಳ ವಿಕಲಚೇತನರ ಗ್ರಾಮೀಣಾಭಿವೃದ್ಧಿ ಮತ್ತು ಸಾಂಸ್ಕೃತಿಕ ಸಂಸ್ಥೆ ಹಾಗೂ ಸೂಳೇಭಾವಿಯ ಡಾ.ಎಪಿಜೆ ಅಬ್ದುಲ್ ಕಲಾಂ ವಿಕಲಚೇತನರ ಗ್ರಾಮೀಣಾಭಿವೃದ್ಧಿ ಸೇವಾ ಸಂಸ್ಥೆ ಸಹಯೋಗದಲ್ಲಿ ಜಿಲ್ಲೆಯ ಹುನಗುಂದ ಪಟ್ಟಣದಲ್ಲಿ ಮದ್ಯ ಮತ್ತು ಮಾದಕ ವಸ್ತುಗಳ ವಿರುದ್ಧ ಅಭಿಯಾನ ಹಮ್ಮಿಕೊಳ್ಳಲಾಗಿತ್ತು.

ಹುನಗುಂದ ಪುರಸಭೆ ಅಧ್ಯಕ್ಷೆ ಭಾಗ್ಯಶ್ರೀ ರೇವಡಿ ಪುರಸಭೆ ಆವರಣದಲ್ಲಿ ಭಿತ್ತಿಪತ್ರ ಪ್ರದರ್ಶಿಸುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿ, ಮಾದಕ ವಸ್ತುಗಳ ಸೇವನೆಯಿಂದ ಆರೋಗ್ಯ ಹಾಳಾಗುತ್ತದೆಯಲ್ಲದೇ ಕುಟುಂಬದ ಆರ್ಥಿಕ ಸ್ಥಿತಿ ಹದಗೆಡುತ್ತದೆ. ಹೀಗಾಗಿ ಯುವ ಜನಾಂಗ ಮಾದಕ ವಸ್ತುಗಳ ಸೇವನೆಯಿಂದ ದೂರವಿದ್ದು, ಆರೋಗ್ಯ ಸಂಪತ್ತು ಗಳಿಸಬೇಕು ಎಂದರು.

ಪುರಸಭೆ ಆವರಣದಿಂದ ವಿಕಲಚೇತನರು ತ್ರಿಚಕ್ರ ವಾಹನ ಮುಖಾಂತರ ಪಟ್ಟಣದ ವಿಜಯ ಮಹಾಂತೇಶ ವೃತ್ತದವರೆಗೆ ಮಾದಕ ವಸ್ತು ಸೇವನೆ ಮೃತ್ಯುವಿಗೆ ಆವ್ಹಾನ, ಮದ್ಯಪಾನ ಸೋಪಾನ ಆಕಾಲಮೃತ್ಯುವಿಗೆ ಆಹ್ವಾನ, ಹೆಂಡ ಸರಾಯಿ ಸಹವಾಸ, ಹೆಂಡತಿ ಮಕ್ಕಳ ಉಪವಾಸ ಎನ್ನುವ ಘೋಷಣೆ ಕೂಗುತ್ತಾ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಪುರಸಭೆ ಸದಸ್ಯ ಶಾಂತಪ್ಪ ಹೊಸಮನಿ, ಪರಸಪ್ಪ ಸಂದಿಮನಿ, ಮತ್ತಣ್ಣ ಲಮಾಣಿ, ಮಹಾಂತೇಶ ತಾರಿವಾಳ, ಶ್ರೀನಿವಾಸ ಬದಾಮಿ, ಪುಟ್ಟರಾಜ ಗವಾಯಿ ಗ್ರಾಮೀಣ ಅಭಿವೃದ್ಧಿ ಸ್ವಯಂ ಸೇವಾ ಸಂಸ್ಥೆ ಅಧ್ಯಕ್ಷ ಸಂಗಮೇಶ ಭಾವಿಕಟ್ಟಿ, ಸಂಗಣ್ಣ ಬೀರಗೊಂಡ, ತಿಪ್ಪಣ್ಣ ಕುರಿ, ಮಂಜು ಹೊಕ್ರಾಣಿ, ಅಂದಾನಪ್ಪ ಹೊಂಬಾಳ, ಪ್ರವೀಣ ಕೊಕಾಟಿ, ಮಹಾಂತೇಶ ಉಳ್ಳಾಗಡ್ಡಿ, ಶ್ರೀಶೈಲ ಹಿರೇಮಠ, ಜಗದೀಶ ತೆಲಗಾಣಿ ಸೇರಿದಂತೆ ಅನೇಕರು ಇದ್ದರು.

# ಬೂತ್ ಮಟ್ಟದಲ್ಲಿ ಪಕ್ಷ ಸಂಘಟಿಸಿ: ಶಾಸಕ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.24–ಮುಂಬರುವ ಚುನಾವಣೆಗಳನ್ನು ಸಮರ್ಥವಾಗಿ ಎದುರಿಸಿ ಪಕ್ಷದ ಗೆಲುವಿಗಾಗಿ ಕಾಂಗ್ರೆಸ್ ಕಾರ್ಯಕರ್ತರು ಬೂತ್ ಮಟ್ಟದಲ್ಲಿ ಪಕ್ಷವನ್ನು ಸಂಘಟಿಸಬೇಕು ಎಂದು ಶಾಸಕ ಜೆ.ಟಿ.ಪಾಟೀಲ ಹೇಳಿದರು.

ಗ್ರಾಮದ ಹಣ್ಣು ಬೆಳೆಗಾರರ ವಿದ್ಯಾಸಂಸ್ಥೆಯ ತೋಟದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಮತ ಕಳ್ಳತನ ವಿರೋಧಿಸಿ ನಡೆದ ಸಹಿ ಸಂಗ್ರಹ ಆಂದೋಲನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗ್ರಾಮ ಪಂಚಾಯಿತಿ ಚುನಾವಣೆಯಲ್ಲಿ ನಿಷ್ಠಾವಂತ ಕಾರ್ಯಕರ್ತರನ್ನು ಆಯ್ಕೆ ಮಾಡಬೇಕು ಎಂದರು.

ಈಗಾಗಲೇ ಮುಳುಗಡೆ ಸಂತ್ರಸ್ತರ ಸರ್ವೆ ಕಾರ್ಯ ನಡೆಯುತ್ತಿದೆ. ಯುಕೆಪಿ ಮೂರನೇ ಹಂತದ ಯೋಜನೆಯನ್ನು ಕಾಂಗ್ರೆಸ್ ಸರ್ಕಾರ ಮೂರು ವರ್ಷದ ಅವಧಿಯೊಳಗೆ ಮುಗಿಸಲಿದೆ ಎಂದರು.

ಸಿದ್ದರಾಮಯ್ಯ ಸರ್ಕಾರ ಪಂಚ ಗ್ಯಾರಂಟಿಗಳನ್ನು ನಿಲ್ಲಿಸುವುದಿಲ್ಲ. ಕೇಂದ್ರದ ಬಿಜೆಪಿ ಸರಕಾರ ಮತ ಕಳ್ಳತನದಲ್ಲಿ ತೊಡಗಿದೆ ಎಂದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಸವರಾಜ ಸಂಶಿ, ಕೆಪಿಸಿಸಿ ಉಪಾಧ್ಯಕ್ಷ ಎಂ.ಬಿ.ಸೌದಾಗರ, ಮುಖಂಡರಾದ ಸಂಗಣ್ಣ ಮುಧೋಳ, ಸಿದ್ದಣ್ಣ ಛಬ್ಬಿ, ಪಾಂಡು ಪೊಲೀಸ್, ಫಕೀರಪ್ಪ ಬಿಸಾಳೆ, ಆರ್.ಆರ್.ತುಂಬರಮಟ್ಟಿ, ಬಿ. ಎಲ್. ನಾವಲಗಿ, ಅಶೋಕ ಕೊಪ್ಪದ, ಹಸನ ಅಹಮದ್ ರೋಣ, ರಫೀಕಸಾಬ ಬೇಪಾರಿ ಮುಂತಾದವರು ಇದ್ದರು.

# ಸುರಗಿರಿಯಲ್ಲಿ ಇಂದಿನಿಂದ ಅಂಬಾರಿ ಉತ್ಸವ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.24– ಜಿಲ್ಲೆಯ ಬೀಳಗಿ ತಾಲೂಕಿನ ಶ್ರೀಕ್ಷೇತ್ರ ಸುರಗಿರಿ ಬೆಟ್ಟದ ಭುವನೇಶ್ವರಿ ದೇವಿ ದೇವಸ್ಥಾನದಲ್ಲಿ ಅಕ್ಟೋಬರ್ 25 ರಿಂದ 28 ರವರೆಗೆ ಭುವನೋತ್ಸವ, ಅಂಬಾರಿ ಉತ್ಸವ ಕಾರ್ಯಕ್ರಮಗಳು ಜರುಗಲಿವೆ. ಶ್ರೀಕ್ಷೇತ್ರದ ಧರ್ಮಾಧಿಕಾರಿ ಲಕ್ಷ್ಮಣ ಶರಣರ ದಿವ್ಯ ಸಾನಿಧ್ಯದಲ್ಲಿ ಅ.25 ರಂದು ಶನಿವಾರ ಅಂಕುರ ಸ್ಥಾಪನೆಯೊಂದಿಗೆ ಉತ್ಸವಕ್ಕೆ ಚಾಲನೆ ದೊರೆಯಲಿದ್ದು, ಅಕ್ಕಿ ಗಂಟಿನ ಪೂಜೆ, ನದಿ ಪೂಜೆ, ಅಂಕುರ ಸ್ಥಾಪನೆ, ಹರಿನಾಮ ಸಂಕೀರ್ತನೆ, ಬುತ್ತಿ ಪೂಜೆ, ಕಂಕಣ ಕಟ್ಟುವುದು ಹಾಗೂ ಅಗ್ನಿ ಪೂಜೆಗಳು ನೆರವೇರಲಿವೆ. ಅ.26 ರವಿವಾರ ಭುವನೇಶ್ವರಿ ದೇವಿಗೆ ಉಡಿ ತುಂಬುವ ಕಾರ್ಯಕ್ರಮ ನಡೆಯುವುದು. ಬೆಳಿಗ್ಗೆ ಆನೆಯ ಮೆರವಣಿಗೆ, 12 ಗಂಟೆಗೆ ಅಮ್ಮನ ಮೂರ್ತಿಯ ಭವ್ಯ ಮೆರವಣಿಗೆ ನಡೆದು ಸಾಯಂಕಾಲ ದೇವಿಯ ಉಡಿ ತುಂಬುವ ಕಾರ್ಯಕ್ರಮ ನಡೆಯುವುದು.

ಅ.27 ಸೋಮವಾರ ಅಂಬಾರಿ ಉತ್ಸವದ ಉದ್ಘಾಟನೆ, ಬೆಳಿಗ್ಗೆ ವಿವಿಧ ಪೂಜಾ ಕಾರ್ಯಕ್ರಮಗಳು ನಡೆದು, 12 ಗಂಟೆಗೆ ಅಂಬಾರಿ ಅಲಂಕಾರಿಕ ಸಾಮಗ್ರಿಗಳ ಸ್ವಾಗತ, ಹರಿನಾಮ ಸಂಕೀರ್ತನೆಯೊಂದಿಗೆ ಮಧ್ಯಾಹ್ನ 3 ಗಂಟೆಗೆ ಅಂಬಾರಿ ಪೂಜೆ, ಕಲಾ ತಂಡಗಳ ಉದ್ಘಾಟನೆ, ಬಾಗಿನ ಅರ್ಪಣೆ ಕಾರ್ಯಕ್ರಮ ನಡೆಯಲಿದ್ದು, ಸಾಯಂಕಾಲ 5 ಗಂಟೆಗೆ ಅದ್ದೂರಿ ಅಂಬಾರಿ ಮೆರವಣಿಗೆ ಜರುಗಲಿದೆ.

ಅಂದೇ ಸಂಜೆ 6 ಗಂಟೆಗೆ ಧರ್ಮ ಸಭೆ ನಡೆಯುವುದು. ಲಕ್ಷ್ಮಣ ಶರಣರು ಸಾನಿಧ್ಯ, ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪುರ ಸಭೆ ಉದ್ಘಾಟಿಸುವರು. ಶಾಸಕ ಜೆ.ಟಿ.ಪಾಟೀಲ ಅಧ್ಯಕ್ಷತೆ ವಹಿಸುವರು. ಸಂಸದ ಪಿ.ಸಿ.ಗದ್ದಿಗೌಡರ, ಮಾಜಿ ಸಚಿವ ಮುರುಗೇಶ ನಿರಾಣಿ, ವಿಧಾನ ಪರಿಷತ್ ಸದಸ್ಯ ಹಣಮಂತ ನಿರಾಣಿ, ಸಂಶೋಧಕ ಡಾ.ಸಂಗಮೇಶ ಕಲ್ಯಾಣಿ ಅತಿಥಿಗಳಾಗಿ ಭಾಗವಹಿಸುವರು.

ರಾತ್ರಿ 8 ಗಂಟೆಗೆ ನವೀನ ಸಜ್ಜು ತಂಡದಿಂದ ಸಂಗೀತ ಕಾರ್ಯಕ್ರಮ, ಸರಿಗಮಪ ಚಾಂಪಿಯನ್ ಶಿವಾನಿ ಶಿವಾದಾಸ ಅವರಿಂದ ಹಾಡು. ರಾತ್ರಿ 11 ಗಂಟೆಗೆ ಕನಸಗೇರಿ ರಾಘವೇಂದ್ರ ಕೃಷ್ಣ ಪಾರಿಜಾತ ಸಂಘದವರಿಂದ ಶ್ರೀ ಕೃಷ್ಣ ಪಾರಿಜಾತ ನಡೆಯುವುದು.

ಅ. 28 ಮಂಗಳವಾರ ಲಕ್ಷ ದೀಪೋತ್ಸವ. ಬೆಳಿಗ್ಗೆ ಮಹಿಳೆಯರ ಪಾದಪೂಜೆ, ಉಡಿ ತುಂಬುವ ಕಾರ್ಯಕ್ರಮ, ನಂತರ ಉತ್ಸವ ಮೂರ್ತಿ ಮೆರವಣಿಗೆ, ನದಿ ಪೂಜೆ, ಬಾಗೀನ ಅರ್ಪಣೆ, ಮೆಟ್ಟಿಲು ಪೂಜೆ ಹಾಗೂ ಧರ್ಮ ಸಭೆ ನಡೆಯಲಿದೆ. ಸಾಯಂಕಾಲ 6 ಗಂಟೆಗೆ ವಾರಣಾಸಿ ಪಂಡಿತ–ರಿಂದ ಭುವನೇಶ್ವರಿ ದೇವಿಗೆ ಸುರಗಿರಿ ಆರತಿ ಕಾರ್ಯಕ್ರಮ, ನಂತರ 7 ಗಂಟೆಗೆ ಲಕ್ಷ ದೀಪೋತ್ಸವ ಜರುಗಲಿದೆ.

ರಾತ್ರಿ ವಿವಿಧ ಕಲಾವಿದರು, ಕಲಾ ತಂಡಗಳಿಂದ ಭರತ ನಾಟ್ಯ, ನೃತ್ಯ ರೂಪಕ, ನಾಟಕ ಪ್ರದರ್ಶನ ನಡೆಯಲಿವೆ.

## ಬೀರಲಿಂಗೇಶ್ವರ ದೇವರ ಜಾತ್ರೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮ ಭಾಗಿ

# ಕುಮಾರ ಚಿಂಚೋಳಿ:ಬೀರಲಿಂಗೇಶ್ವರ 72ನೇ ಜಾತ್ರಾ ಮಹೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಪ್ರಸ್ತುತ ದಿನಗಳಲ್ಲಿ ಪರಿಸರ ಸಂರಕ್ಷಣೆ ಮಾಡಬೇಕಾದರೆ ಪ್ರತಿಯೊಬ್ಬರೂ ವೈಜ್ಞಾನಿಕ ಚಿಂತನೆಗಳನ್ನು ಮಾಡಬೇಕು ಎಂದು ಬಸವಕಲ್ಯಾಣ ತಾಲೂಕಿನ ತಡೋಳಾ ಆಶ್ರಮದ ರಾಜೇಶ್ವರ ಶಿವಾಚಾರ್ಯರು ಹೇಳಿದರು.

ತಾಲೂಕಿನ ಕುಮಾರ ಚಿಂಚೋಳಿ ಗ್ರಾಮದಲ್ಲಿ ಆಯೋಜಿಸಿದ್ದ ಬೀರಲಿಂಗೇಶ್ವರ ಜಾತ್ರಾ ಮಹೋತ್ಸವ ಹಾಗೂ ದೀಪೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಮಾಜದಲ್ಲಿ ಆರೋಗ್ಯಯುತವಾಗಿ ಜೀವನ ನಡೆಸಬೇಕಾಗಿದ್ದ ಮನುಷ್ಯರು ಕಲುಷಿತ ಆಹಾರ ಸೇವನೆ ಮಾಡುವ ಮೂಲಕ ತಮ್ಮ ಜೀವನವನ್ನೇ ನಾಶ ಮಾಡಿಕೊಳ್ಳುತ್ತಿದ್ದಾನೆ. ಹೀಗಾಗಿ ಇಂದಿನ ಮನುಷ್ಯರು ಶ್ರಮ ಸಂಸ್ಕೃತಿಯನ್ನು ಮೈಗೂಡಿಸಿಕೊಂಡು ಪರಿಸರ ರಕ್ಷಣೆ ಹಾಗೂ ಉತ್ತಮ ಆಹಾರ ಸೇವನೆ ಮಾಡಿದರೆ ಮಾತ್ರ ಆರೋಗ್ಯಯುತ ಜೀವನ ಕಳೆಯಲು ಸಾಧ್ಯವಾಗುತ್ತದೆ ಎಂದರು.

ಐತಿಹಾಸಿಕ ಬೀರಲಿಂಗೇಶ್ವರ ಜಾತ್ರಾ ಮಹೋತ್ಸವದಲ್ಲಿ ವಿಶೇಷವಾಗಿ ದೀಪೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿರುವ ಶ್ರೇಯಸ್ಸು ದಿ. ಬಸಯ್ಯ ಸ್ವಾಮಿ ಅವರಿಗೆ ಸಲ್ಲುತ್ತದೆ. ಈ ಧಾರ್ಮಿಕ ಕಾರ್ಯಕ್ರಮ ಈದೀಗ ಅವರ ಮಗನಾದ ಎ.ಬಿ. ಸ್ವಾಮಿ ಮುಂದುವರೆಸುವ ಮೂಲಕ ಗ್ರಾಮದಲ್ಲಿ ಸಾಮರಸ್ಯ ಒಡಮೂಡಿಸುತ್ತಿರುವುದು ಶ್ಲಾಘನಿಯ ಕಾರ್ಯವಾಗಿದೆ ಎಂದರು.

ಪ್ರಾಥಮಿಕ ಶಾಲೆ ವಿದ್ಯಾರ್ಥಿಗಳು ಕೋ ಕೋ ಜಿಲ್ಲಾ ಮಟ್ಟಕ್ಕೆ ಆಯ್ಕೆಗೊಂಡಿದ್ದಕ್ಕೆ ಅವರಿಗೆ ಎ ಬಿ ಸ್ವಾಮಿಯವರು ಸನ್ಮಾನಿಸಿ ನೆನಪಿನ ಕಾಣಿಕೆ ನೀಡಿದರು.

ಈ ಸಂದರ್ಭದಲ್ಲಿ ಅನೀಲಕುಮಾರ ಎಸ್ ಘನಚಕ್ಕೆ ಅಧ್ಯಕ್ಷರು, ವಿ.ಬಿ.ಸ್ವಾಮಿ ಉಪಾಧ್ಯಕ್ಷರು, ಉಸ್ಮಾನ್ ಖಾನ್ ಜಮಾದಾರ್, ಮಾಳಪ್ಪಾ ಗುರುಗಳು, ನಾಗಪ್ಪಾ ಮೇತ್ರೆ, ಪೀರಪ್ಪಾ ಮೂಲಗೆ, ಉಮೇಶ ವರವಟ್ಟಿ, ಪ್ರಭು ವರವಟ್ಟಿ ವೈಜಿನಾಥ ಉತ್ತರಗೆ, ಬೀರಪ್ಪಾ ರಂಜೇರಿ, ವೈಜಿನಾಥ ನಿಡೋದೆ, ಜಗನ್ನಾಥ ಮದಕಟ್ಟಿ, ರೇವಣಪ್ಪಾ ಶೇರಿಕಾರ, ರಘುನಾಥ ಘನಚಕ್ಕೆ, ಬೀರಪ್ಪಾ ಘನಚಕ್ಕೆ, ಕಾಶಿನಾಥ ಹುಣಜೆ, ಜೈಕುಮಾರ ಗೌರ, ಕಂಟೆಪ್ಪಾ ಮಾದಗೊಂಡ ,ಸೇರಿದಂತೆ ಅನೇಕರು ಇದ್ದರು.

# ಗಣಿ ಮತ್ತು ಭೂ ವಿಜ್ಞಾನ ಇಲಾಖೆ: ಅಧಿಕಾರಿಯಿಂದ ಸ್ಪಷ್ಟೀಕರಣ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ಜಿಲ್ಲಾ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಎಲ್ಲಾ 10 ಅಧಿಕಾರಿಗಳನ್ನು ವರ್ಗಾವಣೆ ಮಾಡುವಂತೆ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ಶಾಸಕರಾದ ಬಸವರಾಜ ರಾಯರೆಡ್ಡಿ ಅವರು ಮುಖ್ಯಮಂತ್ರಿಗಳ ಪತ್ರ ಬರೆದ ಕುರಿತು ವಿವಿಧ ಮಾಧ್ಯಮಗಳು ಹಾಗೂ ಪತ್ರಿಕೆಗಳಲ್ಲಿ ಸುದ್ದಿ ಪ್ರಕಟಗೊಂಡ ವಿಷಯಕ್ಕೆ ಪೂರಕವಾಗಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿ ವರ್ಗದಿಂದ ಬಂದಿದೆ ಎನ್ನಲಾದ ಸಹಿ ಇಲ್ಲದ ಅನಾಮಧೇಯ ಪತ್ರದ ಕುರಿತಂತೆ ಜಿಲ್ಲಾ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಹಿರಿಯ ಭೂ ವಿಜ್ಞಾನಿ ಪುಷ್ಪಲತಾ ಕವಲೂರ ಅವರು ಸ್ಪಷ್ಟೀಕರಣ ನೀಡಿದ್ದಾರೆ.

ಅಕ್ಟೋಬರ್ 18 ರಂದು ಶಾಸಕ ಬಸವರಾಜ ರಾಯರೆಡ್ಡಿ ಅವರು ಜಿಲ್ಲಾ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಕಚೇರಿಯ ಎಲ್ಲಾ 10 ಅಧಿಕಾರಿಗಳನ್ನು ವರ್ಗಾವಣೆ ಮಾಡುವಂತೆ ಮುಖ್ಯಮಂತ್ರಿಗಳಿಗೆ ಪತ್ರ ಬರೆದ ಬಗ್ಗೆ ಮಾಧ್ಯಮಗಳು ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಸುದ್ದಿ ಬಿತ್ತರಗೊಂಡಿದ್ದು. ಅದ–ಕ್ಕೆ ವಿಮುಖವಾಗಿ ಇಲಾಖೆಯ ಅಧಿಕಾರಿ ವರ್ಗದಿಂದ ಬಂದಿದೆ ಎಂಬಲಾದ ಹಾಗೂ ಸಹಿ ಇಲ್ಲದ ಅನಾಮಧೇಐ ಮನವಿ ಪತ್ರದಲ್ಲಿ 20 ಅಂಶಗಳ ಕುರಿತು ಪ್ರಶ್ನೆಗಳನ್ನು ನಮೂದಿಸಿದ್ದು, ಈ ಬಗ್ಗೆಯೂ ವಿವಿಧ ಸುದ್ದಿ ಮಾಧ್ಯಮಗಳಲ್ಲಿ, ಸಾಮಾಜಿಕ ಜಾಲತಾಣಗಳಲ್ಲಿ ಸುದ್ದಿ ಹರಿದಾಡಿತ್ತು.

ಆದರೆ ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ಬಂದಿದೆ ಎನ್ನಲಾದ ಹಾಗೂ ಸಹಿ ಇಲ್ಲದ ಅನಾಮಧೇಯ ಮನವಿ ಪತ್ರಕ್ಕೂ ಇಲಾಖೆಗೂ ಯಾವುದೇ ಸಂಬಂಧವಿಲ್ಲ ಮತ್ತು ಈ ವಿಷಯವನ್ನು ಜಿಲ್ಲಾ ಕಚೇರಿಯಿಂದ ಹೊರಡಿಸಿರುವುದಿಲ್ಲ ಎಂದು ಇಲಾಖೆಯ ಹಿರಿಯ ಭೂ ವಿಜ್ಞಾನಿ ಪ್ರಕಟಣೆ ಮೂಲಕ ಸ್ಪಷ್ಟೀಕರಣ ನೀಡಿದ್ದಾರೆ.

# ಮದರಗಾಂವ್ : ಮಲ್ಲಿಕಾರ್ಜುನ ಮಹೇಂದ್ರಕರ್ 50ನೇ ಹುಟ್ಟು ಹಬ್ಬ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್: ತಾಲ್ಲೂಕಿನ ಮದರಗಾಂವ್ ಗ್ರಾಮದ ಡಾ.ಅಂಬೇಡ್ಕರ ವೃತ್ತದಲ್ಲಿ ಹಾಲು ಉತ್ಪಾದಕ ಸಹಕಾರ ಸಂಘದ ಅಧ್ಯಕ್ಷರು ಹಾಗೂ ರಾಜೀವ ಗಾಂಧಿ ವಸತಿ ನಿಗಮದ ಮಾಜಿ ನಿರ್ದೇಶಕ ಮಲ್ಲಿಕಾರ್ಜುನ ಮಹೇಂದ್ರಕರ್ ಅವರ 50ನೇ ಹುಟ್ಟುಹಬ್ಬ ಸಂಭ್ರಮದಿಂದ ಆಚರಿಸಲಾಯಿತು.

ಮಾಜಿ ಸಚಿವ ರಾಜಶೇಖರ್ ಪಾಟೀಲ ಅವರು ಮಾತನಾಡಿ, ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿ ಪಕ್ಷದ ಸಂಘಟನೆ ಜತೆಗೆ ಎಲ್ಲಾ ಸಮಾಜವನ್ನು ಒಗ್ಗುಡಿಸುವ ಕಾರ್ಯ ಮಾಡುತ್ತಿರುವ ಮಲ್ಲಿಕಾರ್ಜುನ್ ಮಹೇಂದ್ರಕರ್ ಅವರು ಗ್ರಾಮದ ಹಾಲು ಉತ್ಪಾದಕ ಸಹಕಾರ ಸಂಘದ ಅಧ್ಯಕ್ಷರಾಗಿ ಹಾಗೂ ರಾಜೀವ ಗಾಂಧಿ ವಸತಿ ನಿಗಮದ ಮಾಜಿ ನಿರ್ದೇಶಕರಾಗಿ ಕೆಲಸ ಮಾಡಿರುವ ಇವರಿಗೆ ಮುಂಬರುವ ದಿನ ರಾಜಕೀಯದಲ್ಲಿ ಉತ್ತಮ ಭವಿಷ್ಯ ವಿದೆ ಎಂದರು.

ಮಲ್ಲಿಕಾರ್ಜುನ ಮಹೇಂದ್ರಕರ್ ಅವರು ಮಾತನಾಡಿ, ನನ್ನ ಹುಟ್ಟು ಹಬ್ಬದಂದು ಶುಭಕೋರಿದ ಎಲ್ಲರಿಗೂ ಧನ್ಯವಾದ ತಿಳಿಸಿದರು. ಬೇಲ್ದಾಳ ಶ್ರೀಗಳು ಸಾನಿಧ್ಯ ವಹಿಸಿ ಆರ್ಶೀವಚನ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ರಾಜಶೇಖರ್ ಪಾಟೀಲ ಮದರಗಾಂವ್, ಪಿಕೆಪಿಎಸ್ ಪಂಚಾಯಿತಿ ಅಧ್ಯಕ್ಷ ಶಿವರಾಜ ಸಾಗರ್, ತಾಲ್ಲೂಕು ಪಂಚಾಯಿತಿ ಡಿಸಿಸಿ ಬ್ಯಾಂಕ ನಿರ್ದೇಶಕ ಉಮೇಶ ವಿಜಯಕುಮಾರನಾತೆ, ಮಲ್ಲಿಕಾರ್ಜುನ ಅಧ್ಯಕ್ಷ ಈಶ್ವರ ಚಿದ್ರಿ, ಗ್ರಾಮ ಮೋಳಕೇರಿ, ಸದಸ್ಯ ಜೈಕುಮಾರ ಮಾಜಿ ಸದಸ್ಯ ಶ್ರೀಮಂತ ಪಾಟೀಲ, ಕುಲಕರ್ಣಿ, ನ್ಯಾಯವಾದಿಗಳಾದ ಪ್ರಭಾ, ಪ್ರಮುಖರಾದ ಕಂಟೆಪ್ಪಾ ದಾನಾ, ಮಹಾಂತಯ್ಯ ತೀರ್ಥ, ಮಾಣಿಕ ಪವಾರ, ಸುರೇಶ ಘಾಂಗ್ರೆ, ವೀರಪ್ಪಾ ಧುಮನ್ನಸೂರ, ಚಂದ್ರಶೇಖರ್ ಪಾಟೀಲ ಅಲ್ಲೂರು, ದಿಲೀಪ್ ಸಿಂಧೆ ಬಸವಕಲ್ಯಾಣ, ವೀರೇಶ ರೆಡ್ಡಿ ಹಳ್ಳಿಖೇಡ(ಬಿ), ಓಂಕಾರ ಹುಡೂದೆ ಸೇರಿದಂತೆ ಅನೇಕರು ಬಂದು ಮಲ್ಲಿಕಾರ್ಜುನ ಮಹೇಂದ್ರಕರ್ ಅವರಿಗೆ ಹುಟ್ಟು ಹಬ್ಬದ ಶುಭಕೋರಿದರು.

IN THE COURT OF SENIOR CIVIL JUDGE AND JMFC COURT AT HUMNABAD

Crl. Misc No. 106/2025

1. Paramma W/o Sharanappa Wo Kallappa Age 75 years, occu: House hold, R/o Bemalkheda TQ: Chitaguppa.
2. Chandramma, W/o John Age 78 years, occu: House hold, R/o Aliamber Tq & Dist Bidar.
3. Kalalavati W/o Shankar Age 62 years, occu: House hold, R/o Chincholi Tq: Chincholi Dist Kalaburagi.

.....Petitioner.

//VS//

The Thasildar Chitaguppa.

...Respondents.

Petition Under section 13(3) Birth & Death Registration Act-1969

PAPER PUBLICATION

Whereas the above named petitioner has filed the petition under section 13(3) of Birth and Death Registration Act 1969 praying this Honorable court to issue Death certificate of Ratnamma W/o Late Saibanna The petitioners are Sons of deceased and his name shown as above. Ratnamma W/o Late Saibanna was died on 24.03.1998.

The petitioners are claiming the death certificate of their mother for transfer of property and other official purpose and home record.

Therefore it is hereby proclaimed that if any person or persons have got any objection in this regard she/they may approach to this Honorable court on 04-11-2025 at 11.00 AM in person or authorized pleader to answer such claim otherwise the matter will be heard and determined in your absence as per law.

Given under my hand seal of the Court on this 24/10/2025

By Order of the Court
Chief Ministerial Officer,
Senior Civil Judge &JMFC COURT
HUMNABAD

